ಸಂಪಾದಕರು: ರವಿಕುಮಾರ್ ಸಿ.ಹೆಚ್.
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

ಸೂರ್ಯ ಪ್ರಗತಿ

SURYAPRAGATHI Kannada Daily
ಪ್ರತಿ ಸುದ್ದಿಯ ಧ್ವನಿ
suryapragathi2021@gmail.com Mob: 9901010109 RNI:KARKAN/2021/80805 L2/RNP-1285/TMR/2025-27

Volume: 05 Issue:27 Date: 03-02-2026 Tuesday RNI NO : KARKAN/2021/80805 L2/RNP-1285/TMR/2025-27 Page :4 Price: 1.00
ಸಂಪುಟ: 05 ಸಂಚಿಕೆ: 27 ಪುಟ : 4 ಬೆಲೆ: 1.00 ರೂ

ಕರ್ನಾಟಕದ ಉರ್ದು ಪ್ರಾಥಮಿಕ ಹಾಗು ಪ್ರೌಢ ಶಾಲೆ ಅವಧಿ ಬದಲಾವಣೆ: ಸುತ್ತೋಲೆ

2025–26ನೆ ಶೈಕ್ಷಣಿಕ ಸಾಲಿನಲ್ಲಿ ಕರ್ನಾಟಕದ ಎಲ್ಲ ಸರಕಾರಿ, ಅನುದಾನಿತ ಮತ್ತು ಅನುದಾನ ರಹಿತ ಉರ್ದು ಮಾಧ್ಯಮದ ಕಿರಿಯ, ಹಿರಿಯ ಹಾಗೂ ಪ್ರೌಢಶಾಲೆಗಳ ಅವಧಿ (ಶಾಲಾ ವೇಳಾಪಟ್ಟಿ) ಬದಲಾವಣೆ ಮಾಡಲಾಗಿದೆ. ಈ ಬಗ್ಗೆ ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ ಅಧಿಕೃತ ಸುತ್ತೋಲೆ ಹೊರಡಿಸಿದೆ. ಹಾಗಾದ್ರೆ, ಹೊಸ ವೇಳಾಪಟ್ಟಿ ಹೇಗಿದೆ ಎನ್ನುವುದು ಈ ಕೆಳಗಿನಂತಿದೆ ನೋಡಿ.

ಮುಸ್ಲಿಮರ ಪವಿತ್ರ ಹಬ್ಬ ರಂಜಾನ್ ಹಬ್ಬ (ಖಚಿಟಿಟದಚಿಟಿ ಈಜಿಣಿಣತಚಿಟ) ಹಿನ್ನೆಲೆಯಲ್ಲಿ ಕರ್ನಾಟಕದ ಉರ್ದು ಮಾಧ್ಯಮ ಕಿರಿಯ ಪ್ರಾಥಮಿಕ ಮತ್ತು ಮಾಧ್ಯಮಿಕ ಶಾಲೆಗಳ ಶಾಲಾ ಸಮಯವನ್ನು ಪರಿಷ್ಕರಿಸಲಾಗಿದೆ. ರಂಜಾನ್ ತಿಂಗಳಲ್ಲಿ ಉರ್ದು ಮಾಧ್ಯಮ ಕಿರಿಯ ಪ್ರಾಥಮಿಕ ಮತ್ತು ಮಾಧ್ಯಮಿಕ ಶಾಲೆಗಳ ಶಾಲಾ (ಗಡಿಜಣ ಟಜಜುಣಟ ಛ್ಝಿಠಿಶಟ) ಸಮಯವನ್ನು ಬದಲಾವಣೆ ಮಾಡಲಾಗಿದ್ದು, ಬೆಳಿಗ್ಗೆ 8 ರಿಂದ ಮಧ್ಯಾಹ್ನ 12.45 ರವರೆಗೆ ಮಾತ್ರ ತರಗತಿ ನಡೆಸಲು ಆದೇಶಿಸಲಾಗಿದೆ. ಈ ಕುರಿತು ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ ಅಧಿಕೃತವಾಗಿ ಸುತ್ತೋಲೆ ಹೊರಡಿಸಿದೆ.

ಬೆಳಿಗ್ಗೆ 8ರಿಂದ ಮಧ್ಯಾಹ್ನ 12.45ರವರೆಗೆ ತರಗತಿ





ಸಾರ್ವಜನಿಕ ಶಿಕ್ಷಣ ಇಲಾಖೆ ಹೊರಡಿಸಿರುವ ಸುತ್ತೋಲೆಯ ಪ್ರಕಾರ, ರಾಜ್ಯದ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಉರ್ದು ಮಾಧ್ಯಮದ ಕಿರಿಯ, ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಈ ಪರಿಷ್ಕೃತ ಸಮಯ ಅನ್ವಯವಾಗಲಿದೆ. ರಂಜಾನ್ ತಿಂಗಳು ಆರಂಭವಾಗುವ ದಿನದಿಂದ 2026ರ ಮಾರ್ಚ್ 20ರವರೆಗೆ ಶಾಲೆಗಳು ಬೆಳಿಗ್ಗೆ 8.00 ಗಂಟೆಯಿಂದ ಮಧ್ಯಾಹ್ನ 12.45ರವರೆಗೆ ಕಾರ್ಯನಿರ್ವಹಿಸಲಿವೆ. ಸಾಮಾನ್ಯ ದಿನಗಳಲ್ಲಿ ಶಾಲೆಗಳು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4.20ರವರೆಗೆ ನಡೆಯುತ್ತಿದ್ದವು. ಆದರೆ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮನವಿಯನ್ನು ಪುರಸ್ಕರಿಸಿ ಮತ್ತು 2002ರಲ್ಲಿದ್ದ ಹಳೆಯ ಆದೇಶವನ್ನು ಪರಿಶೀಲಿಸಿ ಸರ್ಕಾರ ಈ ಹೊಸ ವೇಳಾಪಟ್ಟಿಯನ್ನು ಪ್ರಕಟಿಸಿದೆ.

2025–26ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಉರ್ದು ಮಾಧ್ಯಮದ ಕಿರಿಯ, ಹಿರಿಯ ಹಾಗೂ ಪ್ರೌಢಶಾಲೆಗಳು ರಂಜಾನ್ ತಿಂಗಳು ಪ್ರಾರಂಭವಾದ ದಿನಾಂದಿಂದ ದಿನಾಂಕ: 20–03–2026ರವರೆಗೆ ಮಾತ್ರ ಶಾಲಾ ಅವಧಿಯ ವೇಳಾಪಟ್ಟಿಂು ಬದಲಾವಣೆ ಮಾಡಲಾಗಿದೆ.

ಈ ವ್ಯವಸ್ಥೆಯಿಂದ ಶಾಲೆಗಳ ಕೆಲಸದ ಅವಧಿಯಲ್ಲಿ ಕಡಿಮೆ ಆಗುವ ಅವಧಿಯನ್ನು ಇತರೇ ರಜಾ ದಿನಗಳಲ್ಲಿ ಕಾರ್ಯ ನಿರ್ವಹಿಸುವ ಮೂಲಕ ಸರಿದೂಗಿಸಿಕೊಳ್ಳತಕ್ಕದ್ದು. ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮುಸ್ಲಿಂ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ವರ್ಗದವರು ರಂಜಾನ್ ಮಾಹೆಯಲ್ಲಿ ಉಪವಾಸ ವ್ರತವನ್ನು ಕೈಗೊಳ್ಳುವುದರಿಂದ ಅವರುಗಳಿಗೆ ರಂಜಾನ್ ಮಾಹೆಯಲ್ಲಿ ಪ್ರತಿದಿನ ಸಂಜೆ ಅರ್ಧ ಗಂಟೆ ಮುಂಚಿತವಾಗಿ ತೆರಳಲು ಅನುಮತಿಸಬಹುದು.




2025–26ನೇ ಸಾಲಿನ ಪ್ರಾಥಮಿಕ ಮತ್ತು ಪ್ರೌಢಶಾಲಾ ಪರೀಕ್ಷಾ ವೇಳಾಪಟ್ಟಿಯಂತೆ ನಡೆಸುವಂತೆ ಕ್ರಮವಹಿಸುವುದು. 2025–26ನೇ ಸಾಲಿಗೆ ನಿಗದಿಪಡಿಸಿರುವ ಎಸ್.ಎಸ್.ಎಲ್.ಸಿ. ಪರೀಕ್ಷಾ ಕೇಂದ್ರ ಮತ್ತು ಪರೀಕ್ಷಾ ಕರ್ತವ್ಯ ನಿರತ ಉರ್ದು ಮಾಧ್ಯಮದ ಶಿಕ್ಷಕರಿಗೆ ಈ ಆದೇಶವು ಅನ್ವಯಿಸುವುದಿಲ್ಲ ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ.

ಬಿಜೆಪಿ ಆಕ್ಷೇಪಕ್ಕೆ ಗೃಹ ಸಚಿವ ತಿರುಗೇಟು

ಭಾರತೀಯ ಜನತಾ ಪಕ್ಷವು ಈ ಕ್ರಮವನ್ನು ತೀವ್ರವಾಗಿ ಆಕ್ಷೇಪಿಸಿದ್ದು, ಕಾಂಗ್ರೆಸ್ ತುಷ್ಟೀಕರಣ ರಾಜಕೀಯದಲ್ಲಿ ತೊಡಗಿದೆ. ಯಾವುದೇ ಹಿಂದೂ ಹಬ್ಬಕ್ಕೂ ಅದು ಅದೇ ಕ್ರಮವನ್ನು ತೆಗೆದುಕೊಳ್ಳುತ್ತದೆಯೇ ಎಂದೂ ಬಿಜೆಪಿ ಪ್ರಶ್ನಿಸಿದೆ. ಇನ್ನು ಇದಕ್ಕೆ ಗೃಹ ಸಚಿವ ಪರಮೇಶ್ವರ್ ಪ್ರತಿಕ್ರಿಯಿಸಿದ್ದು, ಇದು ಅಲ್ಪಸಂಖ್ಯಾತರ ಓಲೈಕೆಯ ಪ್ರಶ್ನೆಯಲ್ಲ. ಸಂವಿಧಾನದಲ್ಲಿ ಎಸ್ಸಿ/ಎಸ್ಟಿ ಸಮುದಾಯಗಳಿಗೆ ಮೀಸಲಾತಿ ನೀಡಿರುವುದು ಮತ್ತು ಹಿಂದುಳಿದ ವರ್ಗಗಳನ್ನು ಪರಿಗಣಿಸಿರುವುದು ಅವರನ್ನು ಇತರರಿಗೆ ಸಮಾನರನ್ನಾಗಿ ಮಾಡಲು. ಸಾವಿರಾರು ವರ್ಷಗಳಿಂದ ನಿರ್ಲಕ್ಷ್ಯಕ್ಕೊಳಗಾದ ಸಮುದಾಯಗಳನ್ನು ಮೇಲೆತ್ತಲು ಇಂತಹ ಪ್ರೋತ್ಸಾಹ ಅಗತ್ಯ," ಎಂದು ಅವರು ಹೇಳಿದ್ದಾರೆ. ಉರ್ದು ಮಾಧ್ಯಮದ ಮಕ್ಕಳು ಇತರರೊಂದಿಗೆ ಸಮಾನವಾಗಿ ಬೆಳೆಯಬೇಕು ಎಂಬ ಉದ್ದೇಶದಿಂದ ಸರ್ಕಾರ ಇಂತಹ ಕಾರ್ಯಕ್ರಮಗಳ ಮೂಲಕ ಸಣ್ಣ ಪ್ರೋತ್ಸಾಹ ನೀಡುತ್ತಿದೆ. ಇದನ್ನು ಸಹಿಸದಿದ್ದರೆ, ನೀವು ಸಮಾನತೆಯ ವಿರೋಧಿಗಳು ಎಂದು ಅರ್ಥವಾಗುತ್ತದೆ ಎಂದು ತಿರುಗೇಟು ನೀಡಿದ್ದಾರೆ.

ಬಂಡೀಪುರ, ನಾಗರಹೊಳೆಯಲ್ಲಿ ಭಾರತದ ಮೊದಲ ಅಂತಾರಾಷ್ಟ್ರೀಯ ಹುಲಿ ಶೃಂಗಸಭೆ!

ಭಾರತದಲ್ಲಿ ಮೊದಲ ಬಾರಿಗೆ ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ ಅಲಯನ್ಸ್ ಶೃಂಗಸಭೆ ಕರ್ನಾಟಕದ ಬಂಡೀಪುರ, ನಾಗರಹೊಳೆಯಲ್ಲಿ ಆಯೋಜಿಸಲು ತೀರ್ಮಾನಿಸಲಾಗಿದೆ. ಕೇಂದ್ರ ಹಣಕಾಸು ಸಚಿವರ ಘೋಷಣೆ ಬಳಿಕ, 18 ದೇಶಗಳ ಪ್ರತಿನಿಧಿಗಳು ಹಾಗೂ ಅರಣ್ಯಾಧಿಕಾರಿಗಳು ವನ್ಯಜೀವಿ ಸಂರಕ್ಷಣೆ ಸೇರಿ ಹಲವು ವಿಷಯದ ಕುರಿತು ಈ ಸಭೆಯಲ್ಲಿ ಚರ್ಚಿಸಲಿದ್ದಾರೆ. ಫೆಬ್ರುವರಿ 9 ರಿಂದ 13ರವರೆಗೆ ಈ ಸಭೆ ನಡೆಯಲಿದೆ.



ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ತಮ್ಮ ಒಂಬತ್ತನೇ ಕೇಂದ್ರ ಬಜೆಟ್‌ನಲ್ಲಿ ಗ್ಲೋಬಲ್ ಬಿಗ್ ಕ್ಯಾಟ್ ಅಲಯನ್ಸ್ ಯೋಜನೆ ಘೋಷಿಸಿದ ಬೆನ್ನಲ್ಲೇ, ಈ ವರ್ಷದ ಅಂತಾರಾಷ್ಟ್ರೀಯ ಹುಲಿ ಶೃಂಗಸಭೆಯನ್ನು ಭಾರತದಲ್ಲಿ ಆಯೋಜಿಸಲು ಸಿದ್ಧತೆಗಳು ಜೋರಾಗಿವೆ. ಈ ಮಹತ್ವದ ಕಾರ್ಯಕ್ರಮಕ್ಕೆ ಕರ್ನಾಟಕದ ಬಂಡೀಪುರ ಮತ್ತು ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶಗಳನ್ನು ಆಯ್ಕೆ ಮಾಡಿರುವುದು ವಿಶೇಷವಾಗಿದೆ.

5 ದಿನದ ಕಾರ್ಯಾಗಾರದಲ್ಲಿ 18 ದೇಶದ ಪ್ರತಿನಿಧಿಗಳು ಭಾಗಿ

ಫೆಬ್ರುವರಿ 9ರಿಂದ 13ರವರೆಗೆ ನಡೆಯಲಿರುವ ಅಂತಾರಾಷ್ಟ್ರೀಯ ಕಾರ್ಯಾಗಾರ ಮತ್ತು ತರಬೇತಿ ಕಾರ್ಯಕ್ರಮವನ್ನು ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ಹಾಗೂ ಅಂತರರಾಷ್ಟ್ರೀಯ ಬಿಗ್ ಕ್ಯಾಟ್ ಅಲಯನ್ಸ್ ಸಂಯುಕ್ತವಾಗಿ ಆಯೋಜಿಸುತ್ತಿವೆ. ಇದು ಭಾರತದಲ್ಲಿ ಮೊದಲ ಬಾರಿಗೆ ನಡೆಯುತ್ತಿರುವ ಬಿಗ್ ಕ್ಯಾಟ್ ಅಲಯನ್ಸ್ ಶೃಂಗಸಭೆಯಾಗಿದ್ದು, ದಕ್ಷಿಣ ಭಾರತದ ವನ್ಯಜೀವಿ ಸಂರಕ್ಷಣೆಯ ಕುರತು ಜಾಗತಿಕ ಗಮನ ಸೆಳೆಯುವ ಉದ್ದೇಶ ಹೊಂದಿದೆ.

18 ದೇಶಗಳ ಪ್ರತಿನಿಧಿಗಳು ಹಾಗೂ ದೇಶದ ಎಲ್ಲಾ ರಾಜ್ಯಗಳ ಅರಣ್ಯಾಧಿಕಾರಿಗಳು ಮೊದಲ ಎರಡು ದಿನ ಬಂಡೀಪುರದಲ್ಲಿ ಕಾರ್ಯಾಗಾರದಲ್ಲಿ ಪಾಲ್ಗೊಳ್ಳಲಿದ್ದು, ಫೆಬ್ರುವರಿ 11 ಮತ್ತು 12ರಂದು ನಾಗರಹೊಳೆಯಲ್ಲಿ ಕಾರ್ಯಕ್ರಮ ಮುಂದುವರಿಯಲಿದೆ. 2023ರಲ್ಲಿ ಮೈಸೂರುನಲ್ಲಿ ಹುಲಿ ಗಣತಿ ವರದಿ ಬಿಡುಗಡೆ ವೇಳೆ ಪ್ರಧಾನಿ ನರೇಂದ್ರ ಮೋದಿ ಈ ಯೋಜನೆಯನ್ನು ಘೋಷಿಸಿದ್ದರು.

ಸಭೆಯಲ್ಲಿ ಏನೆಲ್ಲಾ ಚರ್ಚೆ?

ಭಾರತವು ವಿಶ್ವದಲ್ಲೇ ಅತಿ ಹೆಚ್ಚು ಹುಲಿಗಳನ್ನು ಹೊಂದಿದ್ದು, ಚಿರತೆ, ಹಿಮ ಚಿರತೆ ಸೇರಿದಂತೆ ಬಿಗ್ ಕ್ಯಾಟ್‌ಗಳ ಸಂರಕ್ಷಣೆಯಲ್ಲಿ ಪ್ರಮುಖ ಪಾತ್ರ ವಹಿಸಿದೆ. ಸಂರಕ್ಷಣೆಗೆ ಆಧುನಿಕ ತಂತ್ರಜ್ಞಾನ ಬಳಕೆ, ಅಂತರರಾಜ್ಯ ಹಾಗೂ ಅಂತರರಾಷ್ಟ್ರೀಯ ಸಹಕಾರ, ಮತ್ತು ಉತ್ತಮ ಕಾರ್ಯಪದ್ಧತಿಗಳ ಕುರಿತು ಈ ಸಭೆಯಲ್ಲಿ ಚರ್ಚೆ ನಡೆಯಲಿದೆ. ಇದೊಂದಿಗೆ ಅರಣ್ಯ ನಿವಾಸಿಗಳ ಪುನರ್ವಸತಿ, ಹುಲಿ ವಾಸಸ್ಥಾನಗಳಲ್ಲಿ ಅಭಿವೃದ್ಧಿ ಯೋಜನೆಗಳ ನಿಯಂತ್ರಣ ಹಾಗೂ ಸ್ವತಂತ್ರ ವಿಮರ್ಶೆಗಳಿಗೆ ಅವಕಾಶ ನೀಡಬೇಕೆಂಬ ಅಭಿಪ್ರಾಯವೂ ತಜ್ಞರಿಂದ ವ್ಯಕ್ತವಾಗಿದೆ.

ಗ್ರಾಮಾಂತರ ಕ್ಷೇತ್ರದಲ್ಲಿ ಹೆಚ್ಚು ಸ್ಥಾನ ಗೆಲ್ಲಲು ಕಾಂಗ್ರೆಸ್ ಸಂಕಲ್ಪ: ಎಸ್.ಟಿ.ಶ್ರೀನಿವಾಸ್

ತುಮಕೂರು: ಮುಂಬರುವ ಜಿಲ್ಲಾ, ತಾಲ್ಲೂಕು, ಗ್ರಾಮ ಪಂಚಾಯಿತಿ ಚುನಾವಣೆಗಳಲ್ಲಿ ತುಮಕೂರು ಗ್ರಾಮಾಂತರ ಕ್ಷೇತ್ರದಲ್ಲಿ ಅತಿ ಹೆಚ್ಚು ಸ್ಥಾನಗಳನ್ನು ಗೆದ್ದು ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬಬೇಕು, ರಾಜ್ಯ ಸರ್ಕಾರದ ಬಡವರ ಪರವಾದ ಯೋಜನೆಗಳ ಬಗ್ಗೆ ಹಳ್ಳಿಹಳ್ಳಿಯಲ್ಲೂ ಪ್ರಚಾರ ನಡೆಸಿ ಪಕ್ಷವನ್ನು ಸದೃಢವಾಗಿ ಸಂಘಟನೆ ಮಾಡಬೇಕು ಎಂದು ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಎಸ್.ಟಿ.ಶ್ರೀನಿವಾಸ್ ಹೇಳಿದರು.

ಗ್ರಾಮಾಂತರ ಕ್ಷೇತ್ರದ ನಾಗವಲ್ಲಿ ಸಮೀಪದ ಬಡೇಸಾಬರ ಪಾಳ್ಯದಲ್ಲಿ ಕಾಂಗ್ರೆಸ್ ಸಂಘಟನಾ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಶೀಘ್ರದಲ್ಲೇ ನಡೆಯಲಿರುವ ಚುನಾವಣೆಗಳಿಗೆ ಜನಬೆಂಬಲ ಪಡೆಯಲು ತಾವು ಕ್ಷೇತ್ರಾದ್ಯಂತ ಪ್ರಚಾರ ಸಭೆಗಳನ್ನು ನಡೆಸಿ ಪಕ್ಷದ ಬಲವರ್ಧನೆ ಕಾರ್ಯಕ್ರಮ ನಡೆಸುವುದಾಗಿ ತಿಳಿಸಿದರು.

ಪಂಚ ಗ್ಯಾರಂಟಿ ಕಾರ್ಯಕ್ರಮಗಳಲ್ಲಿ ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆಯಲ್ಲಿ ಪ್ರತಿ ತಿಂಗಳು ಎರಡು ಸಾವಿರ ರೂ, ಶಕ್ತಿ ಯೋಜನೆಯಡಿ ಹೆಣ್ಣುಮಕ್ಕಳಿಗೆ ಉಚಿತ ಬಸ್ ಪ್ರಯಾಣ ಅಲ್ಲದೆ, ಅನೇಕ ಜನೋಪಯೋಗಿ ಯೋಜನೆಗಳನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿದ್ದು ಲಕ್ಷಾಂತರ ಜನರ ಅದರ ಪ್ರಯೋಜ ಪಡೆಯುತ್ತಿದ್ದಾರೆ. ಇಲ್ಲಿ ಭಾಗವಹಿಸಿರುವ ಪ್ರತಿಯೊಬ್ಬರೂ ಸರ್ಕಾರದ ಒಂದಲ್ಲೊಂದು ಯೋಜನೆಯ ಫಲಾನುಭವಿಗಳೇ ಆಗಿದ್ದಾರೆ. ನೀವೆಲ್ಲಾ ಸರ್ಕಾರಕ್ಕೆ



ಅಭಿನಂದನೆ ಸಲ್ಲಿಸಬೇಕು. ಜನಪರವಾದ ಸರ್ಕಾರ ರಾಜ್ಯದಲ್ಲಿರುವಾಗ ಸ್ಥಳೀಯವಾಗಿಯೂ ಜನಪರವಾದ ಕಾಂಗ್ರೆಸ್ ಪಕ್ಷವನ್ನು ಅಧಿಕಾರ ತರಲು ಪ್ರತಿಯೊಬ್ಬರೂ ಸಂಕಲ್ಪ ಮಾಡಿ ಚುನಾವಣೆ ಗೆಲುವಿಗೆ ಶ್ರಮಿಸಬೇಕು ಎಂದು ಹೇಳಿದರು.

ನಾನು ಕಾಂಗ್ರೆಸ್ ಪಕ್ಷಕ್ಕೆ ಹೊರಗಿನಿಂದ ಬಂದವನಲ್ಲ, ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ ಕೆಲಸ ಮಾಡುತ್ತಿದ್ದೇನೆ, ನಾನು ಕ್ಷೇತ್ರ ಬಿಟ್ಟು ಓಡಿಹೋಗುವುದಿಲ್ಲ. ನನ್ನ ಜೊತೆ ಶ್ರಮಿಸುವ ಎಲ್ಲರನ್ನೂ ನನ್ನೊಂದಿಗೆ ಕರೆದೊಯ್ಯುತ್ತೇನೆ. ನಿಷ್ಠಾವಂತ ಕಾರ್ಯಕರ್ತರಿಗೆ ಕಾಂಗ್ರೆಸ್ ಪಕ್ಷದಲ್ಲಿ ಯಾವತ್ತೂ ಸೂಕ್ತಸ್ಥಾನಮಾನ, ಗೌರವ ಇದ್ದೇಇರುತ್ತದೆ ಎಂದು ಎಸ್.ಟಿ.ಶ್ರೀನಿವಾಸ್ ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಸ್ಥಳೀಯ ಕಾಂಗ್ರೆಸ್ ಮುಖಂಡ ಇರ್ಫಾನ್ ಮಾತನಾಡಿ, ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳಲ್ಲಿ ಜನರಿಗೆ ಸಹಾಯ ಆಗುವಂತಹ ಕಾರ್ಯಕ್ರಮಗಳನ್ನು ನೀಡಿದೆ. ಸರ್ಕಾರಕ್ಕೆ ಅಭಿನಂದನೆ ಸಲ್ಲಿಸಲು ಫಲಾನುಭವಿಗಳ ಈ ಕಾರ್ಯಕ್ರಮ ಏರ್ಪಡಿಸಲಾಗಿದೆ. ಜೊತೆಗೆ ಮುಂದೆ ಬರಲಿರುವ ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯ್ತಿ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿಗರನ್ನು ಗೆಲ್ಲಿಸಲು ಪ್ರಚಾರ ಕಾರ್ಯಕ್ರಮ ಆರಂಭಿಸಲಾಗಿದೆ ಎಂದರು.

ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ಲೋಕೇಶ್, ಮುಖಂಡರಾದ ಉಮಾಶಂಕರ್, ಅಲ್ಲಾ ಬಕಾಶ್, ಮಹಮದ್ ಹುಸೇನ್, ಬಾಷಾ ಸಾಬ್ ಮತ್ತಿತರರು ಭಾಗವಹಿಸಿದ್ದರು. ಇದಕ್ಕೂ ಮೊದಲು ಬಡೇಸಾಬರಪಾಳ್ಯದ ದರ್ಗಾದಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು.

ಜಿಲ್ಲಾಸ್ಪತ್ರೆಗೆ ಡಿ.ಸಿ. ದಿಢೀರ್ ಭೇಟಿ :

ಐಪಿಹೆಚ್‌ಎಲ್ ಕಾರ್ಯಾರಂಭಕ್ಕೆ ಸ್ಥಳದಲ್ಲೇ ಆದೇಶ

ತುಮಕೂರು: ತುಮಕೂರು ಜಿಲ್ಲಾಸ್ಪತ್ರೆಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸೋಮವಾರ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಜಿಲ್ಲಾಸ್ಪತ್ರೆಯ ಹೊರ ರೋಗಿಗಳ ವಿಭಾಗದಲ್ಲಿ ಚೀಟಿ ಪಡೆಯಲು ಮತ್ತು ಇತರೆ ಕೆಲಸಗಳಿಗಾಗಿ ಜನ ಜಂಗುಳಿ ಇರುವ ಸಂಬಂಧ ಜಿಲ್ಲಾ ಶಸ್ತ್ರಚಿಕಿತ್ಸಕ ಅಸ್ಗರ್ ಬೇಗ್ ಅವರನ್ನು ಸ್ಥಳಕ್ಕೆ ಕರೆದು ವಿಚಾರಿಸಿದರು. ಬೆಳಿಗ್ಗೆ 10.30ರ ವರೆಗೂ ಹೊರ ರೋಗಿಗಳ ವಿಭಾಗದಲ್ಲಿ ರೋಗಿಗಳ ಸಂಖ್ಯೆ ಹೆಚ್ಚಿರುವುದನ್ನು ಗಮನಿಸಿದ ಅವರು, 2 ಕೌಂಟರ್‌ಗಳಲ್ಲಿ ಮಾಡಿದರೂ ಪ್ರತಿದಿನ ಸುಮಾರು 1800 ರೋಗಿಗಳು ಭೇಟಿ ನೀಡುತ್ತಿದ್ದಾರೆ. ಈ ಪೈಕಿ ದಿನವೂ 110ಕ್ಕೂ ಹೆಚ್ಚು ರೋಗಿಗಳು ದಾಖಲಾಗುತ್ತಿರುವ ಬಗ್ಗೆ ಮಾಹಿತಿ ಪಡೆದ ಅವರು, ಹೊರ ರೋಗಿಗಳ ವಿಭಾಗದ ವೈದ್ಯರೊಂದಿಗೆ ಚರ್ಚಿಸಿ ಆದಷ್ಟೂ ಶೀಘ್ರ ರೋಗಿಗಳಿಗೆ ಚಿಕಿತ್ಸೆ ಹಾಗೂ ಅವರಿಗೆ ಸೂಕ್ತ ಸೇವೆಯನ್ನು ಒದಗಿಸುವಂತೆ ಸೂಚಿಸಿದರು.




ನಂತರ ಸಾರ್ವಜನಿಕರ ರಕ್ತ ಪರೀಕ್ಷೆ, ಇನ್ನಿತರ ಪರೀಕ್ಷೆಗಳ ಏಕಗವಾಕ್ಷಿ ಪ್ರಯೋಗಾಲಯ (ಐಪಿಹೆಚ್‌ಎಲ್)ಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಪ್ರಯೋಗಾಲಯಕ್ಕೆ ಸಂಬಂಧಿಸಿದ ರಾಸಾಯನಿಕಗಳ ಪೂರೈಕೆ ಟೆಂಡರ್ ಪೂರ್ಣಗೊಂಡಿದ್ದು, ತಕ್ಷಣ ಪ್ರಯೋಗಾಲಯ ತನ್ನ ಸೇವೆಯನ್ನು ಪ್ರಾರಂಭಿಸುವಂತೆ ಸ್ಥಳದಲ್ಲೇ ಆದೇಶ ನೀಡಿದರು. ಅಲ್ಲದೆ, ತಾಯಿ ಮತ್ತು ಮಕ್ಕಳ ಆಸ್ಪತ್ರೆ ಕೂಡ ತಕ್ಷಣ ಕಾರ್ಯಾರಂಭ ಆಗಬೇಕೆಂದು ಅವರು ಜಿಲ್ಲಾ ಶಸ್ತ್ರ ಚಿಕಿತ್ಸಕರಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ರೋಗಿಗಳೊಂದಿಗೆ ಹಾಗೂ ಆಸ್ಪತ್ರೆ ವೈದ್ಯರೂ ಹಾಗೂ ಸಿಬ್ಬಂದಿಯ ಅಹವಾಲುಗಳನ್ನು ಕೇಳಿದ ಅವರು, ಆಸ್ಪತ್ರೆ ಸುಗಮ ಆಡಳಿತ ಹಾಗೂ ರೋಗಗಳಿಗೆ ಗುಣಮಟ್ಟದ ಸೇವೆ ಸಿಗುವಂತೆ ಕ್ರಮ ವಹಿಸಲು ಜಿಲ್ಲಾ ಶಸ್ತ್ರ ಚಿಕಿತ್ಸಕರಿಗೆ ಸೂಚನೆ ನೀಡಿದರು.

ಮೇಲ್ಜಾತಿಗಳ ನಾಯಕತ್ವ ವಹಿಸಿದ್ದ ಮಾದಿಗ ಅರಸ ಕುರಂಗರಾಜನ 278ನೇ ಪಟ್ಟಾಭಿಷೇಕ ಮಹೋತ್ಸವ

ತುಮಕೂರು : ಭಾರತ ದೇಶವನ್ನು ಅನೇಕ ರಾಜ ಮನೆತನಗಳು ಆಳಿದ ಇತಿಹಾಸವಿದೆ ಶೋಷಿತ ಸಮುದಾಯದ ರಾಜನೊಬ್ಬ ಮೇಲ್ಜಾತಿಗಳ ನಾಯಕತ್ವ ವಹಿಸಿ ದಕ್ಷಿಣ ಭಾಗದ ಸಂಜೀವಿನಿ ಕ್ಷೇತ್ರ, ಸುವರ್ಣ ಗಿರಿ ಸಿದ್ದರಬೆಟ್ಟ ಸಂಸ್ಥಾನದ ಮಹಾರಾಜರಾಗಿ, ಪ್ರಪಂಚದಲ್ಲೆ ಮೊಟ್ಟ ಮೊದಲಿಗೆ ಚರ್ಮದ ನಾಣ್ಯಗಳನ್ನ ಚಲಾವಣೆ ಮಾಡಿ ಆಳ್ವಿಕೆ ನಡೆಸಿದ್ದ ಅರಸ ಕುರಂಗರಾಜನ 278ನೇ ಪಟ್ಟಾಭಿಷೇಕ ಮಹೋತ್ಸವವನ್ನು, ಕೊರಟಗೆರೆ ಪಟ್ಟಣದ ಎಸ್ ಎಸ್ ಸರ್ಕಲ್‌ನಲ್ಲಿ ಮಾದಿಗ ಸಮುದಾಯದ ಮುಖಂಡರು ಸರಳವಾಗಿ ಆಚರಣೆ ಮಾಡಿದರು.

ಸುವರ್ಣಗಿರಿ ಸಂಸ್ಥಾನವನ್ನು ಆಳ್ವಿಕೆ ಮಾಡಿದ ಮಾದಿಗರ ಮೊದಲ ಅರಸು ಕೊರಂಗರಾಜನ ಪ್ರತಿಮೆಗೆ ಮಾದಿಗ ಸಮುದಾಯದ ಮುಖಂಡರಾದ ತುಂಬಾಡಿ ರಾಮಣ್ಣ ಪ್ರಾಧ್ಯಾಪಕರಾದ ಡಾ. ಓ ನಾಗರಾಜು ಸಂಶೋಧಕ, ವಿಮರ್ಶಕ ರವಿಕುಮಾರ್ ನೀಹ, ಮಾದರ್ ಮಹಾಸಭಾದ ಮುಖಂಡರುಗಳಾದ ದಾಡಿ ವೆಂಕಟೇಶ್ ವಿಭೂತಿ ಸಿದ್ದಪ್ಪ ಸೇರಿದಂತೆ ವಿವಿಧ ಮಾದಿಗ ಸಮುದಾಯದ ಮುಖಂಡರುಗಳ ನೇತೃತ್ವದಲ್ಲಿ ಮಹಾರಾಜನಿಗೆ ಪುಷ್ಪಾರ್ಚನೆಯನ್ನು ಮಾಡಿ 278ನೇ ಪಟ್ಟಾಭಿಷೇಕವನ್ನು ನೆನಪಿಸಿ ಗೌರವವನ್ನು ಸಲ್ಲಿಸಲಾಯಿತು.

ಕರ್ನಾಟಕದ ದಕ್ಷಿಣ ಭಾಗದಲ್ಲಿ ಕೊರಂಗರಾಜನ ಅಸ್ತಿತ್ವವನ್ನು ಪುಸ್ತಕದ ರೂಪದಲ್ಲಿ ತಂದು ನಾಡಿಗೆ ಪರಿಚಯಿಸಿದ ಪ್ರಾಧ್ಯಾಪಕರು ಹಾಗೂ ಲೇಖಕರಾದ ಡಾ. ಓ ನಾಗರಾಜ್ ಅವರು ಮಾತನಾಡಿ ಕೊರಂಗರಾಜ ತಳ ಸಮುದಾಯದ ಅಸ್ಮಿತೆಯಾಗಿದ್ದು ಇವರ ಈ ಪಟ್ಟಾಭಿಷೇಕದ ಮಹೋತ್ಸವ ಇತಿಹಾಸದಲ್ಲಿ ದಾಖಲಿಸಲಿದ್ದು ಕೊಟಗೆರೆ ಪಟ್ಟಣದ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾಗ ಸಿದ್ದರಬೆಟ್ಟಕ್ಕೆ ಚಾರಣ ಕೈಗೊಂಡ ಸಂದರ್ಭದಲ್ಲಿ ಕೊರಂಗರಾಜನ ಬಗ್ಗೆ ಕೆಲವು ಮಾಹಿತಿಗಳನ್ನ ತಿಳಿದು ಅಲ್ಲಿನ ಸ್ಥಳೀಯರನ್ನ ಸಂದರ್ಶಿಸಿ ಸುಮಾರು ಒಂದು ವರ್ಷಗಳ ಕಾಲ ಸಂಶೋಧನೆ ನಡೆಸಿ ಕೊರಂಗರಾಜ ವೈಭವ ಎಂಬ ಕಾದಂಬರಿಯನ್ನು ಹೊರ ತರಲಾಯಿತು ಸಿದ್ದರಬೆಟ್ಟದ ಸುತ್ತಮುತ್ತಲಿನ ಗಲ್ಲೆಬಾನಿ, ದೊಡ್ಡಕಾಯಪ್ಪ ದೇವಸ್ಥಾನ ನಿರ್ಮಾಣ, ಚರ್ಮದ ನಾಣ್ಯಗಳ ಚಲಾವಣೆ ಸೇರಿದಂತೆ ಅನೇಕ ಐತಿಹಾಸಿಕ ಸಾಕ್ಷಿಗಳನ್ನು ಇಟ್ಟುಕೊಂಡು ಮಾದಿಗ ಸಮುದಾಯದ ಈ ರಾಜನನ್ನ ನಾಡಿಗೆ ಪರಿಚಯ ಮಾಡಬೇಕು ಎಂಬ ನಿಟ್ಟಿನಲ್ಲಿ ಪುಸ್ತಕದ ರೂಪದಲ್ಲಿ ಹೊರ ತಂದಿದ್ದೇನೆ ಮೇಲ್ಜಾತಿಗಳನ್ನು ಒಲೈಸಿಕೊಂಡು ತಳ ಸಮುದಾಯದ ಸೈನಿಕ ರಾಜನಾಗಿ ಅಂದಿಗೆ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ತನ್ನ ಆಡಳಿತದಲ್ಲಿ ತಂದು ಬರಗಾಲ, ಆರ್ಥಿಕ ದುಸ್ಥಿತಿ, ಪ್ರಜಾ ರಕ್ಷಣಾ ಪಾಲನೆ, ಚರ್ಮ ನಾಣ್ಯ ಚಲಾವಣೆ ಸೇರಿದಂತೆ ಅನೇಕ ಪ್ರಾಂತ್ಯಗಳನ್ನ ಅಳಿದ ಈ ರಾಜನ ಇತಿಹಾಸವನ್ನು ಯಾವ ಇತಿಹಾಸಕಾರರು ದಾಖಲಿಸಲಿಲ್ಲ ಆದರೆ ಇಂದಿಗೂ ಜನಪದರ ಬಾಯಲ್ಲಿ ಕುರಂಗರಾಜನ ಆಡಳಿತ ವೈಭವ ಬೆರೆತು ಹೋಗಿದ್ದು ಮಾದಿಗ ಸಮುದಾಯ ಸರ್ಕಾರ ಜನಪ್ರತಿನಿಧಿಗಳು ಇಂತಹ ಐತಿಹಾಸಿಕ ಹಿನ್ನೆಲೆ ಕಾಯಬೇಕಿದೆ ಎಂದು ತಿಳಿಸಿದರು.



ಮಾದರ್ ಮಹಾಸಭಾ ತಾಲೂಕು ಅಧ್ಯಕ್ಷ ವಿಭೂತಿ ಸಿದ್ದಪ್ಪ ಅವರು ಮಾತನಾಡಿ ದನ ಕಾಯುವ, ಚಾಕರಿ ಕೆಲಸ ಮಾಡುವ ನಮ್ಮ ಸಮುದಾಯಕ್ಕೆ ಒಬ್ಬ ರಾಜನಿದ್ದ ಎಂಬುದೇ ಹೆಮ್ಮೆಯ ವಿಚಾರ ಇಂದಿಗೂ ಈ ಸಮುದಾಯ ಗಟ್ಟಿಮುಟ್ಟಾಗಿ ರಾಜರಂತೆಯೇ ಬದುಕುತ್ತಿದ್ದೇವೆ ಸವರ್ಣಿಯರಂತೆ ನಾವು ಯಾರನ್ನು ದೌರ್ಜನ್ಯ ಮಾಡುತ್ತಿಲ್ಲ ಆದರೆ ನಮ್ಮ ಸಮುದಾಯ ದುಡಿದ ಶ್ರಮವನ್ನ ಮೇಲ್ಜಾತಿಯವರು ಪಡೆಯುತ್ತಿದ್ದಾರೆ ಎಂದರು.

ಪಟ್ಟಾಭಿಷೇಕ ಮಹೋತ್ಸವದ ಮುಖ್ಯ ರೂವಾರಿ ದಾಡಿ ವೆಂಕಟೇಶ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಇತಿಹಾಸವನ್ನು ಅರಿತವನು ಇತಿಹಾಸವನ್ನು ಸೃಷ್ಟಿಸುತ್ತಾನೆ ಹಾಗೆಯೇ ಮಾದಿಗ ಸಮುದಾಯ ದೇವ ದಾನವರಿಂದಲೂ ಸೃಷ್ಟಿಯೊಂದಿಗೆ ಸಮ್ಮಿಳಿತವಾಗಿ ಬಂದಿದೆ ನಮ್ಮಗಳ ಇತಿಹಾಸ ಅಗಣಿತವಾಗಿದ್ದು ಕುರಂಗರಾಜನ ಪಟ್ಟಾಭಿಷೇಕದ ಸವಿನೆನಪಿಗಾಗಿ ರಾಜ ಅರಸು ಕುರಂಗರಾಯನ ಪ್ರತಿಷ್ಠಾನ ಮತ್ತು ಸಹಕಾರ ಸಂಘವನ್ನ ರಚನೆ ಮಾಡಿ ಸಮುದಾಯದ ಶ್ರೇಯೋಭಿವೃದ್ಧಿಗೆ ಪಣತೊಡುವ ತೀರ್ಮಾನವನ್ನು ಕೈಗೊಳ್ಳಲಾಗಿದ್ದು ಇದಕ್ಕೆ ಸಮುದಾಯದ ಯುವಕರು ಚಿಂತಕರು ಪ್ರಜ್ಞಾವಂತರ ಸಹಕಾರ ಅಗತ್ಯವಿದೆ ಮುಂದಿನ 279ನೇ ಕುರಂಗರಾಜನ ಪಟ್ಟಾಭಿಷೇಕ ಮಹೋತ್ಸವವನ್ನು, ರಾಜ ನಾಳಿದ ತಾಣ ಕುರಂಕೋಟೆ ತಪ್ಪಲಿನಲ್ಲಿ ಆಚರಣೆ ಮಾಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಿ ಎಲ್ ಡಿ ಬ್ಯಾಂಕ್ ಚಿಕ್ಕರಂಗಯ್ಯ, ದಾಸರಹಳ್ಳಿ ಶಿವರಾಮಯ್ಯ, ಕಲಾವಿದ ದಾಸರಹಳ್ಳಿ ಮಂಜುನಾಥ್, ಕುರಂಗರಾಜ ಸೊಸೈಟಿಯ ವೀರಕ್ಯಾತರಾಯ, ಟೌನ್ ಮಾರುತಿ, ಚಿಂಪುಗಾನಹಳ್ಳಿ ರವಿ ಕುಮಾರ್, ನೇಗಲಾಲ ಸಿದ್ದೇಶ್, ಗಂಗಣ್ಣ, ಬಿದಲೋಟಿ ನಾಗರಾಜ್, ಸೇರಿದಂತೆ ಇತರರು ಉಪಸ್ಥಿತರಿದ್ದರು.

ಶೋಷಿತ ಸಮುದಾಯಕ್ಕೆ ರಾಜನೊಬ್ಬ ಇದ್ದ ಪ್ರತಿದಿನ ದೌರ್ಜನ್ಯಕ್ಕೆ ಒಳಗಾಗುವ ಸಮುದಾಯಕ್ಕೆ ಇತಿಹಾಸವಿದೆ ಎನ್ನುವುದಕ್ಕೆ ಕೊರಟಗೆರೆಯಲ್ಲಿ ಆಚರಿಸಲಾದ ಅರಸು ಕುರಂಗರಾಯನ 278ನೇ ಪಟ್ಟಾಭಿಷೇಕ ಮಹೋತ್ಸವವೇ ಸಾಕ್ಷೀ ಇದನ್ನ ಆಚರಣೆ ಮಾಡಲು ಸಿದ್ದರಬೆಟ್ಟದ ಪ್ರಾಂತ್ಯದಲ್ಲಿ ಸಿಕ್ಕ ಖಡ್ಗದ ಸಹಾಯದಿಂದ ದಿನಾಂಕ ಹೆಸರುಗಳನ್ನು ಸಂಶೋಧಿಸಿ ಅನೇಕ ಬ್ರಾಹ್ಮಣರ ಸಂಖ್ಯಾಶಾಸ್ತ್ರದ ಪ್ರಕಾರ ಮಾಗ ಮಾಸದ 12ನೇ ದಿನ ಶನಿವಾರದಂದು ಕೊರಂಗರಾಜ ಪಟ್ಟಕ್ಕೆ ಏರಿದ ಎಂಬ ಅಂಶವನ್ನು ಅರಿತು ಕೊರಟಗೆರೆಯಲ್ಲಿ 278ನೇ ಪಟ್ಟಾಭಿಷೇಕದ ಮಹೋತ್ಸವವನ್ನು ಆಚರಣೆ ಮಾಡುತ್ತಿರುವುದು ಸಮುದಾಯಕ್ಕೆ ಕೀರ್ತಿ ತಂದಂತಿದೆ ಎಂದು ತಿಳಿಸಿದರು.

ಅರಸು ಕುರಂಗರಾಯ ಈ ಭಾಗದಲ್ಲಿ ಆಳ್ವಿಕೆ ಮಾಡಿದ್ದ ಎನ್ನುವುದಕ್ಕೆ ಅನೇಕರು ಪುಸ್ತಕಗಳನ್ನ ಬರೆದಿದ್ದಾರೆ ದಾಸ ಸಾಹಿತ್ಯ, ಜನಪದರ ಬಾಯಲ್ಲಿ ಕುರಂಗನ ಆಳ್ವಿಕೆಯ ಇತಿಹಾಸವಿದೆ ಕೋವಿಡ್ ಸಮಯದಲ್ಲಿ ಸಂಶೋಧನೆಯ ಹಿಂದೆ ಬಿದ್ದ ನಮಗೆ ಅನೇಕ ಐತಿಹ್ಯ ಸಾಕ್ಷ್ಯಾಧಾರಗಳು ದೊರೆತಿದ್ದು ಕುರಂಗರಾಜ ಶಿವಭಕ್ತ ಎನ್ನುವುದಕ್ಕೆ ಸಿದ್ಧಾರಬೆಟ್ಟದಲ್ಲಿ ಸ್ಥಾಪನೆಯಾದ ಸಿದ್ದೇಶ್ವರ ಸ್ವಾಮಿ ಸಾಕ್ಷಿಯಾಗಿದೆ ಮೇಲ್ಜಾತಿಯವರು ಕೆಳ ಜಾತಿಯ ನಾಯಕನನ್ನ ಒಪ್ಪಿಕೊಂಡು ರಾಜನನ್ನಾಗಿ ಮಾಡಿರುವುದೇ ಸೋಜಿಗ ವೆನಿಸಿದ್ದು ಸಂಶೋಧನೆಯಿಂದ ಹೊರಹೊಮ್ಮಿದ ಈ ರಾಜನ ವೈಭವವನ್ನು ಮೈಸೂರು ದಸರಾದಲ್ಲಿ ಕೂಡ ವಿಜೃಂಭಿಸಲಾಗಿದ್ದು ಇಂತಹ ರಾಜನ ಸಮುದಾಯಕ್ಕೆ ಸೇರಿದ ಮಾದಿಗ ಸಮುದಾಯದವರು ಮುಂದಿನ ದಿನಗಳಲ್ಲಿ ರಾಜನ ಪಟ್ಟಾಭಿಷೇಕದ ದಿನವನ್ನ ಸರಳವಾಗಿ ಆದರೂ ನೆನಪಿಸಿಕೊಂಡರೆ ಕ್ರಾಂತಿ ಮಾಡಿದ ಕುರಂಗರಾಜನಿಗೆ ಗೌರವ ಸಮರ್ಪಣೆ ಮಾಡಿದಂತಾಗುತ್ತದೆ ಎಂದು ಅಭಿಪ್ರಾಯ ಪಟ್ಟರು.

ಡಾ.ರವಿಕುಮಾರ್ ನೀಹ,
ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ,
ಸಂಶೋಧಕ ವಿಮರ್ಶಕ, ಲೇಖಕ ಪ್ರಾಧ್ಯಾಪಕ

ಶಾಲಾ ಹಂತದಲ್ಲೆ ಮಕ್ಕಳಿಗೆ ಸಂಸ್ಕಾರದೊಂದಿಗೆ ಸಂಸ್ಕೃತಿ ಕಲಿಸ ಬೇಕು-ಪಿಎಸೈ ತಿರ್ಥೇಶ್



ಕೊರಟಗೆರೆ ;- ಪ್ರಾರ್ಥಮಿಕ ಹಂತದ ಶಾಲೆಗಳಲ್ಲಿ ಮಕ್ಕಳಿಗೆ ತಂದೆ-ತಾಯಿ ಹಾಗೂ ಗುರು ಹಿರಿಯರಲ್ಲಿಗೌರವ ನೀಡುವ ಸಂಸ್ಕ್ರರದೊಂದಿಗೆ ನಾಡಿನ ಸಂಸ್ಕೃತಿಯನ್ನು ಶಿಕ್ಷಕರು ಕಲಿಸ ಬೇಕು ಎಂದುಕೊರಟಗೆರೆ ಪೊಲೀಸ್‌ಠಾಣಾ ಪಿಎಸೈ ತಿಥೇಶ್ ತಿಳಿಸಿದರು.

ಅವರುಕೊರಟಗೆರೆ ಪಟ್ಟಣದಲ್ಲಿ ಲಂಡನ್‌ಕಿಡ್ಸ್ ಶಾಲೆಯ ಏರ್ಪಡಿಸಿದ್ದ ವಿಶ್ವತಉತ್ಸವ 2026 ಪ್ರಥಮ ಶಾಲಾ ವಾರ್ಷಿಕೋತ್ಸವಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಮಕ್ಕಳಲ್ಲಿ ದಿನೇ ದಿನೇ ಮೊಬೈಲ್ ಬಳಕೆ ಹೆಚ್ಚಾಗುತ್ತಿರುವುದರಿಂದ ಮಕ್ಕಳ ಮನಸ್ಸಿನಲ್ಲಿ ಬೇಡವಾದ ವಿಷಯಗಳನ್ನು ನೋಡುವುದು ಮಾತನಾಡುವುದರಿಂದ ನಕರಾತ್ಮಕ ಚಿಂತನೆಗಳು ಹೆಚ್ಚಾಗುತಿದ್ದು ಶಾಲೆಯಲ್ಲಿ ಶಿಕ್ಷಕರು ಸಕರಾತ್ಮಕ ಚಿಂತನೆಗಹಳನ್ನು ಮಕ್ಕಳಿಗೆ ಕಲಿಸುವುದುಅಗತ್ಯವಾಗಿದೆಎಂದಅವರು ಶಾಲೆಯಲ್ಲಿನ ವಾತಾವರಣ ಮಕ್ಕಳ ಮೇಲೆ ಪ್ರಭಾವ ಬೀರುವುದರಿಂದ ಶಾಲೆಯನ್ನು ಸದಾ ಸ್ವಚ್ಚವಾಗಿ, ಸುವ್ಯವಸ್ಥಿತವಾಗಿ ಇರಿಸಬೇಕುಜೊತೆಗೆ ಶಿಕ್ಷಣ ಹಾಗೂ ಪಠ್ಯೇತರ ಚಟುವಟಿಕೆಗಳಿಗೆ ಹೆಚ್ಚಿನಆಧ್ಯತೆ ನೀಡಿಗುಣಮಟ್ಟದ ಕಲಿಕೆಗೆ ಒತ್ತು ನೀಡಬೇಕುಎಂದು ತಿಳಿಸಿದರು.

ಲಂಡನ್‌ಕಿಡ್ಸ್ ಶಾಲೆಯ ಸಂಸ್ಥಾಪಕ ವೆಂಕಟೇಶ್‌ಕಾರ್ಯಕ್ರಮದಲ್ಲಿ ಮಾತನಾಡಿಕೊರಟಗೆರೆ ಪಟ್ಟಣದಲ್ಲಿ ಶಾಲೆ ಪ್ರಾರಂಭಿಸಿದ ಹಿನ್ನೆಲೆಯ ಬಗ್ಗೆ ಮಹಿತಿ ನೀಡಿ ಮುಂದಿನ ದಿನಗಳಲ್ಲಿ ಶಾಲೆಯಲ್ಲಿಉತ್ತಮ ಶಿಕ್ಷಕರ ನೇಮಕದೊಂದಿಗೆ ಮಕ್ಕಳ ಕಲಿಕೆಗೆ ಹೆಚ್ಚು ಅಧ್ಯತೆ ನೀಡುವುದರೊಂದಿಗೆ ಮಕ್ಕಳಲ್ಲಿ ಪರಿಸರಜಾಗೃತಿ, ಶಿಸ್ತು ಹಾಗೂ ತಂದೆ-ತಾಯಿ, ಗುರು ಹಿರಿಯರಲ್ಲಿಗೌರವದಿಂದ ನಡೆಯುವ ಬಗ್ಗೆ ಅರಿವು ಮೂಡಿಸಲಾಗುವುದುಎಂದರು.

ಕಾರ್ಯಕ್ರಮದಲ್ಲಿ ಶಾಲೆಯ ಪ್ರಾಂಶುಪಾಲೆ ಶೃತಿ ಪ್ರಥಮ ವರ್ಷದ ಶಾಲಾ ವಾರ್ಷಿಕೋತ್ಸವ ವರದಿ ಹಾಗೂ ಮುಂದಿನ ಶೈಕ್ಷಣಿಕ ವರ್ಷದ ರೋಪುರೇಶಗಳ ಬಗ್ಗೆ ತಿಳಿಸಿದರು, ವೇದಿಕೆಯಲ್ಲಿ ಕ್ಷೇತ್ರಶಿಕ್ಷಣಾದಿಕಾರಿ ಕಥೇರಿಯರವಿ, ಅಗ್ರಹಾರ ಸಿದ್ದಯ್ಯ, ಶಿಕ್ಷಕಿ ಶಾಹಿಜಾ ಸೇರಿದಂತೆಇನ್ನಿತರರು ಉಪಸ್ಥಿತರಿದ್ದು ಶಾಲಾ ಮಕ್ಕಳಿಂದ ವಿವಿಧ ಸಾಂಸ್ಕೃತಿಕಕಾರ್ಯಕ್ರಮ ಹಾಗೂ ಪೋಷಕರುತಮ್ಮ ಮಕ್ಕಳೊಂದಿಗೆ ನೃತ್ಯ ಹಾಗೂ ಕಿಶೋರ್‌ಜಾದುಕಾರ್ಯಕ್ರಮ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು - ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

ಗಾಜಿನಮನೆ ನವೀಕರಣಕ್ಕೆ 3 ಕೋಟಿ, ಅಮಾನಿಕೆರೆಯಲ್ಲಿ ಜಲಕ್ರೀಡಾ ಅಕಾಡೆಮಿ ಸ್ಥಾಪನೆ, 2026-27ನೇ ಸಾಲಿನ ಟೂಡಾ ಆಯವ್ಯಯಕ್ಕೆ ಡಿ.ಸಿ. ಅಸ್ತು



ತುಮಕೂರಅಮಾನಿಕೆರೆಯಲ್ಲಿರುವ ಗಾಜಿನಮನೆ ನವೀಕರಣಕ್ಕೆ 3 ಕೋಟಿ ರೂ., ಅಮಾನಿಕೆರೆಯಲ್ಲಿ ಜಲಕ್ರೀಡಾ ಅಕಾಡಮಿ ಸ್ಥಾಪನೆ, ಊರ್ಡಿಗೆರೆ ಹೋಬಳಿ ಮಾಚನಹಳ್ಳಿಯಲ್ಲಿ ಸುಸಜ್ಜಿತ ಬಡಾವಣೆ ಸೇರಿದಂತೆ 2026-27ನೇ ಸಾಲಿನಲ್ಲಿ ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರ ಹಮ್ಮಿಕೊಂಡಿರುವ ಯೋಜನೆಗಳ ಆಯವ್ಯಯಕ್ಕೆ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ಇಂದಿನ ಸಭೆಯಲ್ಲಿ ಅನುಮೋದನೆ ನೀಡಲಾಯಿತು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಶನಿವಾರ ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರ ಅಧ್ಯಕ್ಷತೆಯಲ್ಲಿ 2026-27ನೇ ಸಾಲಿನ ಆಯವ್ಯಯ ಕುರಿತ ಸಭೆ ನಡೆಯಿತು.

ಅಮಾನಿಕೆರೆಯಲ್ಲಿರುವ ಗಾಜಿನಮನೆಯಲ್ಲಿ ವರ್ಷವಿಡೀ ಒಂದಿಲ್ಲೊಂದು ಪ್ರಮುಖ ಕಾರ್ಯಕ್ರಮಗಳು ಜರುಗುತ್ತಿರುತ್ತವೆ. ಆದರೆ ಮಳೆಗಾಲದಲ್ಲಿ ಗಾಳಿ-ಮಳೆಗೆ ಗಾಜುಗಳು ಒಡೆದು ಅಸ್ತವ್ಯಸ್ತವಾಗುತ್ತಿರುತ್ತವೆ. ಅಲ್ಲದೆ, ಬೃಹತ್ ಗಾಜಿನಮನೆಯಲ್ಲಿ ಪ್ರತಿಧ್ವನಿ ನಿಯಂತ್ರಣ ವ್ಯವಸ್ಥೆ ಇಲ್ಲದಿರುವುದರಿಂದ ಪ್ರಸ್ತುತ ಮೀಸಲಿಟ್ಟಿರುವ 1.50 ಕೋಟಿ ರೂ. ಸಾಲುವುದಿಲ್ಲ ಎಂದು ಶಾಸಕರಾದ ಜಿ.ಬಿ. ಜ್ಯೋತಿಗಣೇಶ್ ಅವರು ತಿಳಿಸಿದ ಹಿನ್ನೆಲೆಯಲ್ಲಿ, ಗಾಜಿನಮನೆಯ ಪೂರ್ಣ ಪ್ರಮಾಣದಲ್ಲಿ ಸುಸಜ್ಜಿತ ಸಭಾಂಗಣ ನವೀಕರಣಕ್ಕಾಗಿ 3 ಕೋಟಿ ರೂ.ಗಳಿಗೆ ಅನುಮೋದನೆ ನೀಡಲಾಯಿತು.


ತುಮಕೂರು ಅಮಾನಿಕೆರೆಯಲ್ಲಿ ಕಯಾಕಿಂಗ್ ಮತ್ತು ಕೆನೋಯಿಂಗ್ ಜಲಕ್ರೀಡಾ ಅಕಾಡೆಮಿ ಸ್ಥಾಪಿಸುವ ಪ್ರಸ್ತಾವನೆಗೆ ಇಂದಿನ ಸಭೆಯಲ್ಲಿ ಅನುಮೋದನೆ ನೀಡಲಾಯಿತು. ಇದರಿಂದಾಗಿ ತುಮಕೂರಿನಲ್ಲಿ ಪ್ರವಾಸೋದ್ಯಮ ಚಟುವಟಿಕೆಗಳಿಗೆ ಇಂಬುನೀಡಿದಂತಾಗಿದೆ.

ತುಮಕೂರು ತಾಲ್ಲೂಕು ಊರ್ಡಿಗೆರೆ ಹೋಬಳಿ ಮಾಚನಹಳ್ಳಿ ಗ್ರಾಮದ ವಿವಿಧ ಸರ್ವೆ ನಂಬರ್ ಜಮೀನು ಭೂಸ್ವಾಧೀನಪಡಿಸಿಕೊಂಡು ಸುಮಾರು 56 ಎಕರೆ ಜಮೀನಿನಲ್ಲಿ ವಿಶಾಲ ರಸ್ತೆ, ಉದ್ಯಾನ ಸೇರಿದಂತೆ ಸುಸಜ್ಜಿತ ಬಡಾವಣೆ ನಿರ್ಮಿಸುವ ಯೋಜನೆಗೆ ಸಭೆಯಲ್ಲಿ ಅನುಮೋದನೆ ನೀಡಲಾಯಿತು.

ಈ ಯೋಜನೆ ವ್ಯಾಪ್ತಿಯ ಭೂಸ್ವಾಧೀನ ಪ್ರಕ್ರಿಯೆ ಸಂಬಂಧಿಸಿದಂತೆ ರೈತರಿಗೆ ಪರಿಹಾರ ಅಥವಾ 50:50 ಅನುಪಾತದ ಪಾಲುದಾರಿಕೆ ಸಂಬಂಧ ಯೋಜನೆ ರೂಪುರೇಷೆ ಸಿದ್ಧಗೊಂಡಿದ್ದು, ರೈತರು ಒಪ್ಪಿದಲ್ಲಿ ಶೀಘ್ರದಲ್ಲೇ ಭೂಸ್ವಾಧೀನ ಪ್ರಕ್ರಿಯೆ ಮಾಡಲು ಸಭೆಯಲ್ಲಿ ಒಪ್ಪಿಗೆ ಸೂಚಿಸಲಾಯಿತು.

ತುಮಕೂರು ನಗರ ರಿಂಗ್ ರಸ್ತೆಯಲ್ಲಿರುವ ದಿಬ್ಬೂರು ವೃತ್ತವು ಅಪಘಾತಗಳ ಸ್ಥಳವಾಗಿದ್ದು, ಇದನ್ನು ಪೊಲೀಸ್ ಇಲಾಖೆ ಸಲಹೆಯಂತೆ ಅಭಿವೃದ್ಧಿಪಡಿಸುವುದು, ಈಗಾಗಲೇ ಅನುಮೋದನೆಗೊಂಡಿರುವ ಯೋಜನೆಗಳ ಟೆಂಡರ್‌ಗಳ ಅನುಮೋದನೆ, ಮಹಾ ಯೋಜನೆ ನಕ್ಷೆಯಂತೆ ಎಪಿಎಂಸಿ ಮತ್ತು ಇಸ್ರೋ ಮಧ್ಯಭಾಗದಲ್ಲಿ ಹಾದುಹೋಗಿರುವ 40 ಅಡಿ ಮಹಾಯೋಜನೆ ರಸ್ತೆಯನ್ನು ಇಸ್ರೋ ಸಂಸ್ಥೆಯಿಂದ ಅಭಿವೃದ್ಧಿಪಡಿಸಲು ಅವರೊಂದಿಗೆ ವ್ಯವಹರಿಸುವ ತೀರ್ಮಾನ, ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯ ವಿವಿಧ ಭೂಮಿಯ ಅದಲು ಬದಲು ಸಂಬಂಧಿಸಿದ ತೀರ್ಮಾನಗಳು ಸೇರಿದಂತೆ ಮಹತ್ತರ ತೀರ್ಮಾನಗಳನ್ನು ಸಭೆಯಲ್ಲಿ ಕೈಗೊಳ್ಳಲಾಯಿತು. ಅಲ್ಲದೆ, ತುಮಕೂರು ನಗರದ ಗೆದ್ದಲಹಳ್ಳಿ ಗ್ರಾಮದ ಅಂಕಿತ ಎಜುಕೇಷನ್ ಟ್ರಸ್ಟ್ ಬೆಂಗಳೂರು ಇವರಿಗೆ ಹಂಚಿಕೆಯಾಗಿರುವ ನಾಗರಿಕ ಸೌಕರ್ಯ ನಿವೇಶನದ ಉದ್ದೇಶ ಬದಲಾವಣೆ ಸಂಬಂಧಿಸಿದಂತೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಕಳುಹಿಸುವ ಸಂಬಂಧ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಯಿತು.

ಒಂದು ಸಮುದಾಯ ಆರ್ಥಿಕ,ಸಾಮಾಜಿಕ,ಶೈಕ್ಷಣಿಕವಾಗಿ ಬೆಳೆಯಲು ಯುವ ಜನರ ಪಾತ್ರ ದೊಡ್ಡದು



ತುಮಕೂರು: ಒಂದು ಸಮುದಾಯ ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ರಾಜಕೀಯವಾಗಿ ಬೆಳೆಯಲು ಯುವ ಜನರ ಪಾತ್ರ ದೊಡ್ಡದು, ಹಾಗಾಗಿ ಮಡಿವಾಳ ಸಮಾಜದ ಸಂಘಟನೆಯಲ್ಲಿ ಯುವ ಜನರು ಹೆಚ್ಚು ಗುರುತಿಸಿಕೊಳ್ಳುವ ಮೂಲಕ ಸಂಘಟನೆಯ ಜವಾಬ್ದಾರಿ ಹೊರಬೇಕಿದೆ ಎಂದು ತುಮಕೂರು ನಗರ ಶಾಸಕ ಜಿ.ಬಿ.ಜೋತಿಗಣೇಶ್ ತಿಳಿಸಿದ್ದಾರೆ.

ನಗರದ ಡಾ.ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ತುಮಕೂರು ಜಿಲ್ಲಾ ಮಡಿವಾಳ ಸಂಘ(ರಿ), ತುಮಕೂರು ತಾಲೂಕು ಮಡಿವಾಳ ಸಂಘದವತಿಯಿಂದ ಹಮ್ಮಿಕೊಂಡಿದ್ದ ವೀರ ಗಣಚಾರಿ ಶ್ರೀಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತಿದ್ದ ಅವರು,ಹೊಸ ಪೀಳಿಗೆ ಸಂಘಟನೆಯ ಜವಾಬ್ದಾರಿ ಪಡೆದು, ಮತ್ತಷ್ಟು ಬಲಿಷ್ಠವಾಗಿ ಕಟ್ಟುವ ಕೆಲಸ ಮಾಡಬೇಕೆಂದರು.

ಮಡಿವಾಳ ಮಾಚಿದೇವ ಜಯಂತಿ ಇಡೀ ಸಮುದಾಯದ ಸಂಘಟನೆಗೆ ಸಿಕ್ಕಿರುವ ಒಂದು ವೇದಿಕೆ,ಈ ಅವಕಾಶವನ್ನು ಬಳಕೆ ಮಾಡಿಕೊಂಡು, ಸಮಾಜವನ್ನು ಮತ್ತಷ್ಟು ಬಲಿಷ್ಠವಾಗಿ ಕಟ್ಟಲು ಜನಾಂಗ ಮುಂದಾಗಬೇಕು.ಇಂದಿನ ಕಾರ್ಯಕ್ರಮದಿಂದ ಸಮುದಾಯದ ನಾಲ್ವರಿಗೆ ಅನುಕೂಲವಾದರೆ, ಅದಕ್ಕಿಂತ ದೊಡ್ಡ ಉಪಕಾರ ಮತ್ತೊಂದಿಲ್ಲ.ತಂತ್ರಜ್ಞಾನದ ಜಾಗತಿಕ ಯುಗದಲ್ಲಿ ಉಳಿಯಬೇಕೆಂದರೆ ಶಿಕ್ಷಣವೊಂದೇ ದಾರಿ. ಹಾಗಾಗಿ ಎಲ್ಲರೂ ವಿದ್ಯೆಯತ್ತ ಗಮನಹರಿಸಿ,ವೃತ್ತಿಯಲ್ಲಿ ಆಧುನಿಕತೆಯನ್ನು ಅಳವಡಿಸಿಕೊಂಡು, ಪೈಪೊಟಿ ಎದುರಿಸಿ ಉಳಿಯವಂತಹ ಬದಲಾವಣೆಯನ್ನು ನಿಮ್ಮಲ್ಲಿ ನೀವು ತಂದು ಕೊಳ್ಳಬೇಕಿದೆ. ನಿಮ್ಮೊಂದಿಗೆ ಸದಾಕಾಲ ಜೊತೆಗಿರುತ್ತೇವೆ ಎಂಬ ಭರವಸೆಯನ್ನು ಶಾಸಕ ಜೋತಿ ಗಣೇಶ್ ನೀಡಿದರು.

ಕಾರ್ಯಕ್ರಮದ ಉದ್ಘಾಟಿಸಿದ ಅಪರ ಜಿಲ್ಲಾಧಿಕಾರಿ ಡಾ.ಎನ್. ತಿಪ್ಪೇಸ್ವಾಮಿ ಮಾತನಾಡಿ, ಶರಣರಿಗೆ ಕಾಯಕ ಬಹಳ ಮುಖ್ಯವಾಗಿತ್ತು, ಬಟ್ಟೆ ಮಡಿ ಮಾಡುವ ಕಾಯಕದ ಜೊತೆಗೆ, ಅನುಭವ ಮಂಟಪಕ್ಕೆ ಭದ್ರತೆ'ಒದಗಿಸುವ'ಗುರುತರ ಜವಾಬ್ದಾರಿಯನ್ನು ತನ್ನ ಬದುಕಿದ್ದ ಕಾಲದವರೆಗೆ ಅತ್ಯಂತ ನಿಷ್ಠೆಯಿಂದ ನಿಭಾಯಿಸಿದವರು ಮಡಿವಾಳ ಮಾಚಿ ದೇವರು. ಶರಣರ ಹೊರತು ಅನ್ನರ ಬಟ್ಟೆಗಳನ್ನು ಮಡಿ ಮಾಡುವುದಿಲ್ಲ ಎಂದು ತಾವು ತೆಗೆದುಕೊಂಡ ಧೀಕ್ಷೆಗೆ ಬದ್ದರಾಗಿ, ಮಹಾರಾಜ ಬಿಜ್ಜಳನ ಆಮೀಷ ಮತ್ತು ಒತ್ತಡವನ್ನು ಧೈರ್ಯವಾಗಿ ಎದುರಿಸಿದವರು. ಅರಸುತನ ಶ್ರೇಷ್ಠವಲ್ಲ. ಅಗಸತನ ಕನಿಷ್ಠವಲ್ಲ ಎಂದು ಧೈರ್ಯದಿಂದ ನುಡಿದವರು.ಇಂದು ಪರಿಸ್ಥಿತಿ ಬದಲಾಗಿದೆ. ಅವಕಾಶಕ್ಕಾಗಿ ದೊಡ್ಡ ಸಮುದಾಯಗಳ ಜೊತೆ ಪೈಪೊಟಿಗೆ ಇಳಿಯಬೇಕಾಗಿದೆ. ಮಕ್ಕಳಿಗೆ ಒಳ್ಳೆಯ ವಿದ್ಯಾಭ್ಯಾಸ ನೀಡಿ, ಅವರನ್ನು ಸಮಾಜದ, ಕುಟುಂಬದ ಆಸ್ತಿಯಾಗಿ ಬೆಳೆಸಿ ಎಂದು ಸಲಹೆ ನೀಡಿದರು.

ಮಡಿವಾಳ ಮಾಚಿದೇವರ ಬಗ್ಗೆ ವಿಶೇಷ ಉಪನ್ಯಾಸ ನೀಡಿದ ಉಪನ್ಯಾಸಕ ಗೋವಿಂದರಾಜು,12ನೇ ಶತಮಾನದಲ್ಲಿದ್ದ ಜಾತಿಯತೆ, ಮೇಲು ಕೀಳು, ಬಡವ ,ಶ್ರೀಮಂತ ,ಲಿಂಗ ತಾರತಮ್ಯದಂತಹ ಅನಿಷ್ಠ ಸಾಮಾಜಿಕ ಪೀಡುಗುಗಳ ವಿರುದ್ದ ಸಾಮಾಜಿಕ ಕ್ರಾಂತಿ ಮಾಡಿದ ಅನುಭವ ಮಂಟಪದಲ್ಲಿ ಬಹಳ ಪ್ರಮುಖರಾಗಿದ್ದ ಮಡಿವಾಳ ಮಾಚಿದೇವರು, ವೀರಗಣಾಚಾರಿ ಎಂಬ ಬಿರುದು ಪಡೆದವರು. ಅನುಭವ ಮಂಟಪಕ್ಕೆ ಬರುವವನ್ನು ಮೊದಲು ಪರೀಕ್ಷೆಗೆ ಒಳಪಡಿಸುವ ಗುರುತರ ಜವಾಬ್ದಾರಿಯನ್ನು ಪಡೆದು, ಅದನ್ನುಅತ್ಯಂತ ನಿಷ್ಠೆಯಿಂದ ನಿರ್ವಹಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು.

ಜಿಲ್ಲಾ ಹಿಂದುಳಿದ ಸಮುದಾಯಗಳ ಒಕ್ಕೂಟದ ಅಧ್ಯಕ್ಷ ಧನಿಯ ಕುಮಾರ್ ಮಾತನಾಡಿ, ಮಡಿವಾಳ ಸಮಾಜ ಕಾಯಕವನ್ನೇ ನಂಬಿ ಬದುಕುವ ಕಷ್ಟ ಜೀವಿ ಸಮುದಾಯ. ಮಳೆ, ಗಾಳಿ,ಚಳಿ ಎನ್ನದೆ ವರ್ಷವಿಡಿ ಕಾಯಕದಲ್ಲಿ ನಿರತವಾಗಿರುತ್ತದೆ. ಶೈಕ್ಷಣಿಕವಾಗಿ ಸಮಾಜವನ್ನು ಮುಂದೆ ತರುವ ಉದ್ದೇಶದಿಂದ ತುಮಕೂರು ನಗರದಲ್ಲಿ ಹಾಸ್ಟಲ್ ನಿರ್ಮಿಸಿ, ಹಲವರಿಗೆ ಉಚಿತವಾಗಿ ಶಿಕ್ಷಣ ನೀಡುತ್ತಿದೆ.ಶಾಸಕರು, ಸಂಸದರ ಅನುದಾನ ಪಡೆದು, ಅಭಿವೃದ್ಧಿ ಪಥದತ್ತ ಸಾಗಿದೆ. ಕಾಯಕಕ್ಕೆ ತಕ್ಕ ಬೆಲೆ ಸಿಗುವಂತಾಗಬೇಕು ಎಂದರು.

ಕಲ್ಪತರು ನಾಡು ತುಮಕೂರು ವಿಶೇಷವಾಗಿ ಕ್ರೀಡೆಯ ತವರೂರು

ತುಮಕೂರು- ಕಲ್ಪತರು ನಾಡು ತುಮಕೂರು ವಿಶೇಷವಾಗಿ ಕ್ರೀಡೆಯ ತವರೂರು ಎಂದು ಶಾಸಕ ಜಿ.ಬಿ. ಜ್ಯೋತಿಗಣೇಶ್ ಹೇಳಿದರು.

ತುಮಕೂರು ವಿಶ್ವವಿದ್ಯಾನಿಲಯದ ಮೈದಾನದಲ್ಲಿ ಖೋಖೋ ಇಂಡಿಯಾ ವತಿಯಿಂದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದಡಿ ಆಯೋಜಿಸಲಾಗಿರುವ ರಾಷ್ಟ್ರೀಯ ಹಿರಿಯ ಪುರುಷ ಮತ್ತು ಮಹಿಳೆಯರ ಖೋಖೋ ಚಾಂಪಿಯನ್‌ಶಿಪ್ ಪಂದ್ಯಾವಳಿಯನ್ನು ವೀಕ್ಷಿಸಿ, ವಿವಿಧ ರಾಜ್ಯಗಳ ಕ್ರೀಡಾಪಟುಗಳನ್ನು ಸ್ವಾಗತಿಸಿ ಅವರು ಮಾತನಾಡಿದರು.

ಕ್ರೀಡೆಯಲ್ಲಿ ಸೋಲು-ಗೆಲುವು ಮುಖ್ಯವಲ್ಲ. ಕ್ರೀಡಾಕೂಟದಲ್ಲಿ ಭಾಗವಹಿಸುವುದು ಮುಖ್ಯ. ಅದರಲ್ಲೂ ರಾಷ್ಟ್ರೀಯ ಪಂದ್ಯಾವಳಿಯಲ್ಲಿ ಭಾಗವಹಿಸಿ ಆಟವಾಡುವುದು ಸುಲಭದ ಮಾತಲ್ಲ. ರಾಷ್ಟ್ರಮಟ್ಟದ ಟೂರ್ನಿಮೆಂಟ್‌ಗೆ ಆಯ್ಕೆಯಾಗುವುದರ ಹಿಂದೆ ಕ್ರೀಡಾಪಟುಗಳು ಶ್ರಮ ಅಪಾರವಾಗಿದೆ ಎಂದರು.

ತುಮಕೂರಿನಲ್ಲಿ ರಾಷ್ಟ್ರಮಟ್ಟದ ಖೋಖೋ ಪಂದ್ಯಾವಳಿ ನಡೆಯುತ್ತಿರುವುದು ಹೆಮ್ಮೆಯ ಸಂಗತಿ. ನಮ್ಮ ಕಲ್ಪತರುನಾಡಿಗೆ 24 ರಾಜ್ಯಗಳ ಕ್ರೀಡಾಪಟುಗಳು ಆಗಮಿಸಿದ್ದು, ಇವರೆಲ್ಲರಿಗೂ ಖೋಖೋ ಸಂಸ್ಥೆಗಳು ಎಲ್ಲ ರೀತಿಯ ವ್ಯವಸ್ಥೆಗಳನ್ನು ಮಾಡುವ ಮೂಲಕ ತುಮಕೂರಿನ ಘನತೆಯನ್ನು ಹೆಚ್ಚಿಸಿದ್ದಾರೆ ಎಂದರು.

ತುಮಕೂರಿನಲ್ಲಿ 60-70ರ ದಶಕದಲ್ಲೇ ರಾಷ್ಟ್ರಮಟ್ಟದ ಖೋಖೋ ಪಂದ್ಯಾವಳಿಯನ್ನು ಪಾಲ್ಗೊಂಡು ಉತ್ತಮ ಪ್ರದರ್ಶನ ನೀಡಿರುವ ಕ್ರೀಡಾಪಟುಗಳು ಇದ್ದಾರೆ. ಈ ಹಿರಿಯ ಕ್ರೀಡಾಪಟುಗಳ ಕ್ರೀಡಾ ಸ್ಫೂರ್ತಿ ಕಿರಿಯ ಕ್ರೀಡಾಪಟುಗಳಿಗೆ ಪ್ರೇರಣೆಯಾಗಿದೆ ಎಂದು ಅವರು ತಿಳಿಸಿದರು. ನಗರದಲ್ಲಿ ಖೋಖೋ ಕೋರ್ಟ್‌ನ್ನು ಸ್ಮಾರ್ಟ್‌ಸಿಟಿ ಯೋಜನೆಯಡಿ ಅಭಿವೃದ್ಧಿಪಡಿಸಲಾಗಿದ್ದು, ಖೋಖೋ ಕ್ರೀಡಾಪಟುಗಳ ಅಭ್ಯಾಸಕ್ಕೂ ಅವಕಾಶ ಮಾಡಿಕೊಡಲಾಗಿದೆ ಎಂದು ಅವರು ಹೇಳಿದರು.

ಹೋರಾಟ ಬೇಕಿರುವುದು ಬದುಕಲೇ ಹೊರತು ಸಾಯಲು ಅಲ್ಲ....ಮಾನಸಿಕ ದೃಢತೆಯನ್ನು ಕಾಪಾಡುವುದು ಹೇಗೆ..

ಇತ್ತೀಚಿನ ವರ್ಷಗಳಲ್ಲಿ ಅನೇಕ ವ್ಯಕ್ತಿಗಳು ತುಂಬಾ ಕಷ್ಟಪಟ್ಟು ಮೇಲೆ ಬಂದು, ಒಂದು ಬೃಹತ್ ಆರ್ಥಿಕ ಸಾಮ್ರಾಜ್ಯವನ್ನು ಸ್ಥಾಪಿಸಿಕೊಂಡು, ತದನಂತರ ಯಾವುದೋ ಒತ್ತಡಕ್ಕೆ ಒಳಗಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಘಟನೆಗಳು ಹೆಚ್ಚಾಗುತ್ತಿವೆ.

ಪ್ರೇಮಿಗಳು, ವಿದ್ಯಾರ್ಥಿಗಳು, ಅನೈತಿಕ ಸಂಬಂಧಗಳು, ಮಾನಸಿಕ ಅಸ್ವಸ್ಥರು, ಸಾಲಗಾರರು, ಕೆಲವು ರೈತರು, ಕೌಟುಂಬಿಕ ಸಮಸ್ಯೆಗಳನ್ನು ಎದುರಿಸುತ್ತಿರುವವರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದರ ಜೊತೆಗೆ ಈ ರೀತಿ ಬೃಹತ್ ಸಾಮ್ರಾಜ್ಯದ ವ್ಯಕ್ತಿಗಳು ಸಹ ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ.

ಹೌದು, ಇಂದಿನ ಆಧುನಿಕ ಸಂಕೀರ್ಣ ವ್ಯವಸ್ಥೆಯಲ್ಲಿ ಎಲ್ಲರಿಗೂ ಒತ್ತಡ, ಅಸಮಾಧಾನ ಇರುತ್ತದೆ, ಇದ್ದೇ ಇರುತ್ತದೆ. ಈ ಆಧುನಿಕ ಬದುಕಿನಲ್ಲಿ ಆರೋಗ್ಯ ಸಮಸ್ಯೆ ಹೊರತುಪಡಿಸಿ ಮತ್ತೆ ಯಾವುದೇ ಒತ್ತಡವನ್ನು ಸಹಿಸಿಕೊಳ್ಳಲೇಬೇಕಾಗುತ್ತದೆ. ಅದರಲ್ಲೂ ಏನನ್ನಾದರೂ ಸಾಧಿಸುವುಮಹಾತ್ವಾಕಾಂಕ್ಷಿ ಇರುವವರಿಗೆ ಒತ್ತಡ ಅತ್ಯಂತ ಸಹಜವಾದದ್ದು.

ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಸಾಹಿತಿ ದತ್ತಾತ್ರೇಯ ರಾಮಚಂದ್ರ ಬೇಂದ್ರೆ ಅವರ ಕವನದ ಎರಡು ಸಾಲುಗಳು ಇಲ್ಲಿ ಉಲ್ಲೇಖನೀಯ,

* ನಿದ್ದೆಗೊಮ್ಮೆ ನಿತ್ಯ ಮರಣ, ಎದ್ದ ಸಲಾ ನವೀನ ಜನನ * ಅಂದರೆ ಪ್ರತಿ ಬೆಳಗು ನಮಗೆ ಹೊಸ ಬದುಕು ನೀಡಿದಂತೆ. ಹಿಂದಿನ ದಿನದ ಎಲ್ಲಾ ಸಾಧನೆಗಳು, ವಿಫಲತೆಗಳು ಅಲ್ಲೇ ಮರೆತು ಮುನ್ನಡೆಯಬೇಕು, ವ್ಯಾವಹಾರಿಕತೆಯ ವಾಸ್ತವತೆಯನ್ನು ಜೊತೆಯಲ್ಲಿ ಮೈಗೂಡಿಸಿಕೊಂಡು.

ರಾಷ್ಟ್ರಕವಿ ಕುವೆಂಪು ಅವರ ಮತ್ತೊಂದು ಮಾತು * ಬದುಕಿನ ಬಹುದೊಡ್ಡ ಸಾಧನೆ ಎಂದರೆ ಬದುಕುವುದು ಮಾತ್ರ* ಇದನ್ನು ನೆನಪು ಮಾಡಿಕೊಳ್ಳುತ್ತಾ.....

ಸಾಮಾನ್ಯವಾಗಿ ಸಹಜ ವ್ಯಕ್ತಿಗಳಿಗೆ ಇದು ಅಷ್ಟೊಂದು ಅನ್ವಯಿಸುವುದಿಲ್ಲ. ವಿಶೇಷವಾಗಿ ಸಮಾಜದಲ್ಲಿ, ಸಾರ್ವಜನಿಕವಾಗಿ ಗುರುತಿಸಿಕೊಂಡಿರುವವರಿಗೆ ಇದೊಂದು ಬಹುದೊಡ್ಡ ಸವಾಲನ್ನು ಒಡ್ಡುತ್ತದೆ. ಅಂತಹ ಸಂದರ್ಭದಲ್ಲಿ ನಾವು ಮಾಡಬೇಕಾಗಿರುವುದು ತುಂಬಾ ತುಂಬಾ ಇದೆ. ಒಂದು ವೇಳೆ ಈ ರೀತಿಯ ಪರಿಸ್ಥಿತಿ ನಮಗೆ ಎದುರಾದಾಗ ನಾವು ಮಾಡಬೇಕಾಗಿರುವ ಕೆಲಸ ನಮ್ಮ ನಿಷ್ಠೆಯನ್ನು ಪ್ರಕೃತಿಗೆ ವರ್ಗಾಯಿಸಿ ಮತ್ತೆ ನಾವು ಶೂನ್ಯದಿಂದಲೇ ಬದುಕು ಪ್ರಾರಂಭಿಸಬೇಕು. ಅಂದರೆ ಪ್ರಸ್ತುತ ಎಲ್ಲಿರುತ್ತವೆಯೋ, ಜೈಲೋ, ಅವಮಾನವೋ ಏನೇ ಆಗಲಿ ಅಲ್ಲಿಂದಲೇ ಮುಂದಿನ ಹೊಸ ಬದುಕನ್ನು ಪ್ರಾರಂಭಿಸಬೇಕು.

ಇಲ್ಲಿ ನಮಗೆ ತುಂಬಾ ಕಡಿಮೆ ಆಯ್ಕೆಗಳಿರುತ್ತವೆ. ಒಂದು ವೇಳೆ ನಮ್ಮ ಕುಟುಂಬದವರು, ರಕ್ತ ಸಂಬಂಧಿಗಳು, ಹಿತೈಷಿಗಳು, ಆತ್ಮೀಯರಲ್ಲಿ ಯಾರಾದರೂ ನಮ್ಮ ತಪ್ಪುಗಳನ್ನು ಮನ್ನಿಸಿಯೋ, ಕಷ್ಟವನ್ನು ಸಹಿಸಿಯೋ ನಮಗೆ ಪ್ರಜ್ಞಾಪೂರ್ವಕವಾಗಿ, ಆತ್ಮೀಯವಾಗಿ, ಯಾವುದೇ ಮುಖವಾಡವಿಲ್ಲದೆ ಸಹಾಯ ಏನಾದರೂ ಮಾಡುವುದಾದರೆ ಪಡೆಯಬಹುದು.

ಇಲ್ಲದೇ ಅವರೇನಾದರೂ ನಮ್ಮನ್ನು ಹಿಂದೆ ಹೊಗಳುತ್ತಿದ್ದ ಕಾರಣಗಳನ್ನು ಮುಂದಿಟ್ಟುಕೊಂಡು ಈಗ ಈ ವಿಫಲತೆಯನ್ನೇ ಹಿಯಾಳಿಸಿ ನಮ್ಮನ್ನು ತೀರಾ ನಿಕೃಷ್ಟವಾಗಿ ಕಾಣುತ್ತಿದ್ದರೆ, ಮೊದಲಿಗೆ ಇನ್ನೆಂದೂ ಅವರು ನಮ್ಮ ಜೀವನದಲ್ಲಿ ಇರುವುದಿಲ್ಲ, ಅವರಿಗೆ ನಮ್ಮಲ್ಲಿ ಯಾವುದೇ ಪಾತ್ರವಿಲ್ಲ ಎಂದು ಭಾವಿಸಿ ಅವರಿಂದ ನೇರವಾಗಿ ದೂರ ಸರಿಯಬೇಕು. ನಮ್ಮ ಪಾಲಿಗೆ ಅವರಿಲ್ಲ, ಅವರ ಪಾಲಿಗೆ ನಾವು ಸತ್ತಿದ್ದೇವೆ ಎಂದೇ ಭಾವಿಸಿಕೊಳ್ಳಬೇಕು.

ಏಕೆಂದರೆ ಕುಟುಂಬದವರ ಕರ್ಕಶ ನುಡಿಗಳನ್ನು ಕೇಳುವುದು ತುಂಬಾ ಕಷ್ಟ. ಅದು ಗಂಡ ಹೆಂಡತಿಯೇ ಆಗಿರಲಿ, ಮಕ್ಕಳೇ ಆಗಿರಲಿ, ತಂದೆ ತಾಯಿಯೇ ಯಾರೇ ಆಗಿರಲಿ ನಮ್ಮನ್ನು ಆತ್ಮೀಯವಾಗಿ ಆಲಂಗಿಸಿಕೊಂಡಾಗ ಮಾತ್ರ ನಾವು ಅವರೊಂದಿಗೆ ಇರಬೇಕು. ಇಲ್ಲದಿದ್ದರೆ ಆ ಸಂಬಂಧಗಳನ್ನು ನಿರ್ಲಕ್ಷಿಸಬೇಕಾಗುತ್ತದೆ. ಆ ಚುಚ್ಚು ಮಾತುಗಳನ್ನು ಸಹಿಸಿಕೊಳ್ಳಬಾರದು.


ಹಾಗೆಯೇ ಅತ್ಯಂತ ಮುಖ್ಯವಾಗಿ ನಾನೊಬ್ಬ ಅನಾಥ ಎನ್ನುವ ಪ್ರಜ್ಞೆಯನ್ನು ಬೆಳೆಸಿಕೊಳ್ಳಬೇಕಾಗುತ್ತದೆ. ಅಂದರೆ ನನಗಾಗಿ ಯಾರು ಇಲ್ಲ. ನಾನು ಒಬ್ಬಂಟಿ. ನನಗೆ ಮಾನ ಅವಮಾನವೂ ಇಲ್ಲ, ಸಂಬಂಧಗಳೂ ಇಲ್ಲ. ಈ ಪ್ರಕೃತಿ ನೀಡಿರುವ ಜೀವ ತಾನಾಗಿ ತಾನೇ ಜೀವ ಹಿಂದಿರುಗಿ ತೆಗೆದುಕೊಳ್ಳುವವರೆಗೂ ನಾನು ಬದುಕಲು ಹೋರಾಡುತ್ತಲೇ ಇರುತ್ತೇನೆ.

ನನ್ನ ಕೆಲವು ನಿರ್ಧಾರಗಳು ತಪ್ಪೋ, ಸರಿಯೋ ನನ್ನ ಅರಿವಿನಿಂದ ಮಾಡಿದ್ದೇನೆ. ಕೆಲವು ಆಕಸ್ಮಿಕವೂ ಇರಬಹುದು, ಕೆಲವು ಉದ್ದೇಶಪೂರ್ವಕವಾಗಿಯೇ ಇರಬಹುದು. ಅದಕ್ಕಾಗಿ ಪಶ್ಚಾತಾಪ ಪಡುತ್ತಾ, ನನ್ನನ್ನು ನಾನು ತಿದ್ದಿಕೊಳ್ಳುತ್ತಾ ಬದುಕುತ್ತಲೇ ಇರುತ್ತೇನೆ. ನಮ್ಮ ನಮ್ಮ ವಯಸ್ಸು ಮತ್ತು ಅನುಭವದಲ್ಲಿ ಈ ಭಾರತೀಯ ಸಮಾಜವನ್ನು ಅರ್ಥಮಾಡಿಕೊಂಡಿರುವ ಮಟ್ಟಿಗೆ ಹೇಳುವುದಾದರೆ ಬಹುತೇಕ ಯಾರದೇ ಜೀವನವಿರಲಿ ಅದರಲ್ಲಿ ಸಂಪೂರ್ಣ ಸುಖ ಸಂತೋಷಗಳೇ ತುಂಬಿ ತುಳುಕುತ್ತದೆ ಎಂಬುದು ನಂಬಲಾಸಾಧ್ಯ.

ಕಷ್ಟ ಸುಖಗಳನ್ನು ಅಳೆಯುವ ಯಾವುದೇ ಮಾಪನ ಇಲ್ಲ ನಿಜ. ಆದರೆ ಅಧಿಕಾರ, ಹಣ, ಆಸ್ತಿ, ಕೌಟುಂಬಿಕ ಪರಿಸರ, ಆರೋಗ್ಯ, ವಾಸಿಸುವ ಸ್ಥಳ, ಉದ್ಯೋಗ ಮುಂತಾದ ಕೆಲವು ಮಾನದಂಡಗಳನ್ನು ಮೇಲ್ನೋಟಕ್ಕೆ ಗಮನಿಸಿದಾಗ ಕೆಲವರು ಹೆಚ್ಚು ಯಶಸ್ವಿ ಎಂತಲೂ ಮತ್ತು ಮೇಲೆ ಹೇಳಿದ ವಿಷಯಗಳು ಸರಿಯಾಗಿ ದೊರೆಯದೆ ಮೂಲಭೂತ ಅವಶ್ಯಕತೆಗಳಿಗೇ ತಮ್ಮ ಜೀವನವನ್ನು ಸವೆಸುತ್ತಿರುವ ಜನರನ್ನು ಬಡವರು, ಯಶಸ್ವಿಯಾಗದವರು, ನತದೃಷ್ಟರು ಎಂದೂ ಕರೆಯಲಾಗುತ್ತದೆ.

ಈ ದೃಷ್ಟಿಯಿಂದ ನೋಡಿದಾಗ ಈ ಆರ್ಥಿಕ ಸಾಮ್ರಾಜ್ಯ ಕಟ್ಟಿದವರು ಸಮಾಜದಲ್ಲಿ ಬಹುದೊಡ್ಡ ಯಶಸ್ಸನ್ನು, ಜೀವನದ ಹೆಚ್ಚು ಕಾಲವನ್ನು ಸುಖ ಸಂತೋಷದ ದಿನಗಳನ್ನು ಅನುಭವಿಸಿದವರು.

ಒಮ್ಮೆ ಅವರು ನಮ್ಮ ಸಮಾಜದ ಅತ್ಯಂತ ಕೆಳಗಿನ ಜನರನ್ನು ನೋಡಿದರೆ ಸಾಕು ಅವರು ಹಿಮಾಲಯದಷ್ಟು ಎತ್ತರದಲ್ಲಿ ಇರುವುದು ತಿಳಿದುಕೊಂಡು ಮನಸ್ಸಿಗೆ ಖಂಡಿತ ಸಮಾಧಾನ ಮಾಡಿಕೊಳ್ಳಬಹುದು. ತಮಗೆ ಈ ಕ್ಷಣದಲ್ಲಿ ಬಂದಿರುವುದು ಒಂದು ಸಣ್ಣ ಪ್ರಮಾಣದ ಕಷ್ಟ. ಮುಂದೆ ಇನ್ನೇನೋ ದೊಡ್ಡ ಸ್ಥಾನ ಗಳಿಸಲು



ಇದರಿಂದ ತೊಂದರೆಯಾಗಬಹುದೇ ಹೊರತು ಬದುಕಿನ ಸಾಮಾನ್ಯ ಸೌಕರ್ಯಗಳಲ್ಲಿ ಅವರು ಎಷ್ಟೋ ಜನರಿಗಿಂತ ಈಗಾಗಲೇ ಮುಂದಿದ್ದಾರೆ ಎಂದು ಅರ್ಥಮಾಡಿಕೊಂಡರೆ ಅವರ ಕಷ್ಟಗಳು ಯಾವ ಲೆಕ್ಕಕ್ಕೂ ಇಲ್ಲ ಎಂದೇ ಅನಿಸುತ್ತದೆ.

ಅವರ ಸಹಾಯಕ್ಕೆ ಬಹಳಷ್ಟು ಹಾದಿಗಳು ಇರುತ್ತದೆ. ಆದರೆ ಅನೇಕ ಬಡವರಿಗೆ ಎಲ್ಲಾ ರೀತಿಯ ಮಾರ್ಗಗಳು ಮುಚ್ಚಿ ಬಿಡುತ್ತದೆ.

ಬದುಕಿನ ಒಂದು ಸೂಕ್ಷ್ಮತೆಯನ್ನು ನಾವು ಅರ್ಥಮಾಡಿಕೊಂಡರೆ ಜೀವನ ಸ್ವಲ್ಪ ಸರಳ, ಸುಲಭ ಮತ್ತು ನೆಮ್ಮದಿಯಾಗಬಹುದು.

ಮೊದಲಿಗೆ,

ನಾವು ಇಲ್ಲಿಯವರೆಗೆ ಬದುಕಿರುವುದೇ ಒಂದು ಸಾಧನೆ ಮತ್ತು ನೆಮ್ಮದಿಗೆ ಕಾರಣವಾಗಬೇಕು. ಎಷ್ಟೋ ಜನ ಇದರಿಂದಲೇ ವಂಚಿತರಾಗಿರುವುದನ್ನು ನೆನಪಿಸಿಕೊಳ್ಳಿ.

ಎರಡನೆಯದಾಗಿ,

ನಮ್ಮ ಊಟ ಬಟ್ಟೆ ವಸತಿಗಳು ನಮ್ಮ ಅವಶ್ಯಕತೆ ತಕ್ಕಂತೆ ಇದ್ದರೆ ಅದು ಮತ್ತೊಂದು ಸಾಧನೆ - ತೃಪ್ತಿಯ ಕಾರಣ ಎಂದೇ ಭಾವಿಸಿ.

ಮೂರನೆಯದಾಗಿ,

ನಮ್ಮ ರಕ್ತ ಸಂಬಂಧಗಳು, ಸಂಸಾರ, ಬಂಧು ಬಳಗಗಳು ಸ್ನೇಹಿತರು ಹೆಚ್ಚು ಘರ್ಷಣೆಗಳಿಲ್ಲದೆ (ಸಣ್ಣ ಪುಟ್ಟ ವಿರಸಗಳನ್ನು ಹೊರತುಪಡಿಸಿ) ಒಂದು ತಕ್ಕಮಟ್ಟಿನ ಸೌಹಾರ್ದ ಸಂಬಂಧ ಉಳಿದಿದ್ದರೆ ಅದು ಮಗದೊಂದು ಸಾಧನೆ ಮತ್ತು ಅದೃಷ್ಟ ಎಂದೇ ಪರಿಗಣಿಸಿ.

ನಾಲ್ಕನೆಯದಾಗಿ,

ಇರುವ ಅವಕಾಶದಲ್ಲಿ ನಮ್ಮ ಪ್ರತಿಭೆ, ಸಾಮರ್ಥ್ಯ ಪ್ರದರ್ಶಿಸಲು ವೇದಿಕೆ ದೊರೆತು ಅದರಿಂದ ಹಣ, ಅಧಿಕಾರ, ಜನಪ್ರಿಯತೆ ದೊರೆತರೆ ಅದು ಬದುಕಿನ ಬಹುದೊಡ್ಡ ಸಾಧನೆ ಸಾರ್ಥಕತೆ ಮತ್ತು ಬೋನಸ್ ಎಂದು ಪರಿಗಣಿಸಿ.

ಐದನೆಯದಾಗಿ,

ನೀವು ನಿರೀಕ್ಷಿಸದ ಅನೇಕ ಉತ್ತಮ ಗುಣಮಟ್ಟದ ಎಲ್ಲವೂ ದೊರೆತರೆ (ಇದು ತೀರಾ ಅಪರೂಪ) ನಿಮ್ಮನ್ನು ನೀವು ಅತ್ಯಂತ ಸುಖಿ ಎಂದೇ ಭಾವಿಸಿ.

ಆರನೆಯದಾಗಿ,

ಒಂದು ವೇಳೆ ನೀವು ಎಲ್ಲಾ ಯಶಸ್ಸುಗಳನ್ನು ಗಳಿಸಿ ಯಾವುದೋ ಕಾರಣದಿಂದ ಎಲ್ಲವನ್ನೂ ಕಳೆದುಕೊಳ್ಳಬೇಕಾಗಿ ಬಂದಾಗ ಅಥವಾ ಕಳೆದುಕೊಂಡರೆ ಆಗಲೂ ಸದ್ಯದ ಪರಿಸ್ಥಿತಿಯನ್ನು ನೆನೆದು ಧೃತಿಗೆಡಬೇಡಿ. ಮತ್ತೆ ಬದುಕಿರುವುದೇ ಒಂದು ಸಾಧನೆ ಎಂಬ ತೀರ್ಮಾನಕ್ಕೆ ಬನ್ನಿ. ಹೊರ ಪ್ರಪಂಚದ ಅನೇಕರ ಕುಹುಕದ ಮಾತುಗಳಿಗೆ ಹೆಚ್ಚಿನ ಮಾನ್ಯತೆ ನೀಡದೆ ಸೃಷ್ಟಿಯ ಜೀವಿ ಎಂದು ಭಾವಿಸಿ ಅಂತರ್ಮುಖಿಯಾಗಿ ನಿಮ್ಮನ್ನು ನೀವು ಸಂತೈಸಿಕೊಳ್ಳಿ.

ಯಶಸ್ಸಿನ ಇಮೇಜ್ ಒಂದು ಭ್ರಮೆ ಎಂಬುದನ್ನು ಜೀವನಪರ್ಯಂತ ಮರೆಯದಿರಿ. ಮೇಲೆ ಏರಿದವರು ಮತ್ತೆ ಕೆಳಗೆ ಇಳಿಯುವ ಸಾಧ್ಯತೆಯನ್ನು ಮೊದಲೇ ನಿರೀಕ್ಷಿಸಿ. ಅದು ಬದುಕಿನ ಭಾಗವೇ ಆಗಿರುತ್ತದೆ ಎಂದು ತಿಳಿದುಕೊಳ್ಳಿ.

ನೀವು ಈಗಾಗಲೇ ಯಶಸ್ಸಿನ ಹಾದಿಯಲ್ಲಿದ್ದು ಬದುಕಿನ ಬಗ್ಗೆ ಒಂದು ನಿರ್ದಿಷ್ಟ ಮತ್ತು ಸ್ಪಷ್ಟ ಅಭಿಪ್ರಾಯ ಹೊಂದಿದ್ದರೆ ಈ ನನ್ನ ಅಭಿಪ್ರಾಯ ನಿರ್ಲಕ್ಷಿಸಿ.

ತುಂಬಾ ಅತೃಪ್ತಿ, ಅಸಮಾಧಾನ, ಅಸಹನೆ, ಕಷ್ಟ, ಬಡತನ ಇರುವವರಾದರೆ ದಯವಿಟ್ಟು ಸ್ವಲ್ಪ ಯೋಚಿಸಿ.

ಬೆತ್ತಲೆಯೊಂದಿಗೆ ಭೂ ಪ್ರವೇಶಿಸುವ ನಾವು ಮತ್ತೆ

ಬೆತ್ತಲಾಗಲು ಹೆದರುವುದೇಕೆ......,

ಬೆಳೆಯುತ್ತಾ ದೇಹ ಬಲಿಯುತ್ತದೆ. ಅಂಗಾಗಗಳು ದಪ್ಪವಾಗುತ್ತವೆ. ಉಡುಗೆ ತೊಡುಗೆಗಳು ಮೈ ಅಲಂಕರಿಸುತ್ತವೆ. ಮನಸ್ಸಿನಲ್ಲಿ ಹಲವಾರು ಭಾವನೆಗಳು ಮೂಡುತ್ತವೆ. ಬೇರೆ ಬೇರೆ ಸಂಬಂಧಗಳು ಜೊತೆಯಾಗುತ್ತವೆ.

ಆದರೆ ಅವೆಲ್ಲವೂ ತಾತ್ಕಾಲಿಕವಲ್ಲವೇ.

ಜೀವನದ ಎಲ್ಲಾ ದಿನಗಳು ಹಿತಕರವಾಗಿಯೇ ಇರಬೇಕು ಎಂದರೆ ಹೇಗೆ ? ಒಂದಷ್ಟು ಕಹಿ ದಿನಗಳು ಸಹ ಸಹಿಸಬೇಕಲ್ಲವೇ ?

ಗಣ್ಯ ವ್ಯಕ್ತಿ ಆದ ಕಾರಣಕ್ಕೆ ಕಷ್ಟಗಳು, ನೋವುಗಳು, ದುಃಖಗಳು, ಅವಮಾನಗಳು ಸಹ ಗಣ್ಯವಾಗುವುದಿಲ್ಲ. ಅದು ಪ್ರತಿ ಮನುಷ್ಯನಿಗೂ ಸಹಜ ಮತ್ತು ಸಾಮಾನ್ಯ. ಆದರೆ ನಮ್ಮ ಭ್ರಮೆ ಮತ್ತು ಕೃತಕ ಮನಸ್ಥಿತಿಯ ಪರಿಸರ ಹಾಗು ಜನಪ್ರಿಯತೆ ನಮ್ಮ ಮಾನ ಅವಮಾನಗಳು ದೊಡ್ಡದು ಎಂಬಂತೆ ನಮ್ಮೊಳಗೆ ಬಿಂಬಿತವಾಗಿ ನಮ್ಮನ್ನು ಚಿಕ್ಕವರನ್ನಾಗಿಸುತ್ತದೆ.

" ಎಲ್ಲವನ್ನೂ, ಎಲ್ಲರನ್ನೂ ಕಳೆದುಕೊಂಡ ಮೇಲೆಯೇ ನಮ್ಮನ್ನು ನಾವು ಪಡೆಯುವುದು "

ಅದಕ್ಕಿಂತ ದೊಡ್ಡ ಸ್ವಾತಂತ್ರ್ಯ ಸೃಷ್ಟಿಯ ಜೀವಿಗೆ ಇನ್ನೇನಿದೆ.

ಇದು ಒಣ ವೇದಾಂತವಲ್ಲ ವಾಸ್ತವ.ಇರಬಹುದು,

ನಿಮಗೆ ಆರ್ಥಿಕ ಸಂಕಷ್ಟ, ತೆರಿಗೆ ಕಿರುಕುಳ,
ಸಾಲಗಾರರ ಒತ್ತಡ,ಸ್ವಾಭಿಮಾನಕ್ಕೆ ಧಕ್ಕೆ,
ಸೋಲಿನ ಹತಾಶೆ,ವಿಫಲತೆಯ ನಿರಾಶೆ,
ಅದು ಬದುಕಲು ಕಾರಣಗಳಾಗಬೇಕೇ ಹೊರತು ಸಾಯಲು ಅಲ್ಲ.ಸಾವು ಬಂದೇ ಬರುತ್ತದೆ. ಅದನ್ನು ಹುಡುಕಲು ಪ್ರಯತ್ನಿಸಬಾರದು.

ನಾವು ನಮ್ಮನ್ನು ಮಾತ್ರ ನಿಯಂತ್ರಿಸಿಕೊಳ್ಳಬಹುದು. ಇತರರು ನಮ್ಮ ನಿಯಂತ್ರಣಕ್ಕೆ ಸಿಗುವುದು ಮತ್ತು ನಮ್ಮ ಇಚ್ಛೆಗೆ ಅನುಗುಣವಾಗಿ ವರ್ತಿಸುತ್ತಾರೆ ಎಂದು ನಿರೀಕ್ಷಿಸುವುದು ಬಹುದೊಡ್ಡ ತಪ್ಪಾಗಬಹುದು.

ಎಷ್ಟೇ ಸಾಲ ಆಗಲಿ,ಎಷ್ಟೇ ಅವಮಾನ ಆಗಲಿ,
ಯಾವೊನೇ ಕೈಕೊಡಲಿ,ಯಾವೊಳೇ ಕೈಬಿಡಲಿ,
ಎಷ್ಟೇ ಸೋಲಾಗಲಿಯಾರು ಏನೇ ಅಂದುಕೊಳ್ಳಲಿ,
ಹೊಟ್ಟೆ ತುಂಬ ಊಟ ಮಾಡಿ, ಕಣ್ಣು ತುಂಬ ನಿದ್ದೆ ಮಾಡಿ, ಒಂದು ಕಾಫಿ ಕುಡಿದು,ಸಿನಿಮಾಗೆ ಹೋಗಿ ಬಿಡಿ.
ಆತ್ಮಹತ್ಯೆ, ಗೀತ್ಮಹತ್ಯೆ ಎಲ್ಲಾ ಹೇಡಿಗಳ ಸರಕು.
ಸಾವು ಅಂದರೆ ತುಂಬಾ ಹೆದರಿಕೆ. ಅದಕ್ಕೆ ಅದನ್ನು ಹುಡುಕಿಕೊಂಡು ಹೋಗಬೇಡಿ ಬದುಕು ಮುಖ್ಯ.

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಮನಸ್ಸುಗಳ ಅಂತರಂಗದ ಚಳವಳಿ,

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ದಾಖಲೆಯ 9ನೇ ಬಜೆಟ್ ಮಂಡನೆ

ಬಹು ನಿರೀಕ್ಷಿತ ಕೇಂದ್ರ ಸರ್ಕಾರದ 2026–27ರ ಬಜೆಟ್ ಪ್ರಮುಖ ಮುಖ್ಯಾಂಶಗಳು:

ಪ್ರಮುಖ ಮುಖ್ಯಾಂಶಗಳು:

ಮೂಲಸೌಕರ್ಯ ಮತ್ತು ಬಂಡವಾಳ ವೆಚ್ಚ: ಮೂಲಸೌಕರ್ಯ ಅಭಿವೃದ್ಧಿಗೆ ಒತ್ತು ನೀಡಿ ಬಂಡವಾಳ ವೆಚ್ಚವನ್ನು 11.2 ಲಕ್ಷಕೋಟಿಯಿಂದ (FY26) 12.2 ಲಕ್ಷ ಕೋಟಿಗೆ (FY27) ಹೆಚ್ಚಿಸಲಾಗಿದೆ.**ಆದಾಯ ತೆರಿಗೆ:** ಆದಾಯ ತೆರಿಗೆ ಸ್ಲ್ಯಾಬ್‌ಗಳಲ್ಲಿ ಯಾವುದೇ ಬದಲಾವಣೆ ಮಾಡಲಾಗಿಲ್ಲ, ಇದು ಮಧ್ಯಮ ವರ್ಗಕ್ಕೆ ನಿರಾಸೆ ಮೂಡಿಸಿದೆ.

MSME ಮತ್ತು ಉತ್ಪಾದನೆ: MSMEಗಳಿಗೆ 10,000 ಕೋಟಿ ರೂ.ಗಳ ಬೆಳವಣಿಗೆಯ ನಿಧಿ, ಸೆಮಿಕಂಡಕ್ಟರ್ ಉತ್ಪಾದನೆಗೆ ಹೆಚ್ಚುವರಿ 400 ಬಿಲಿಯನ್ ರೂ. ಮತ್ತು ಬಯೋಫಾರ್ಮಾ ಉತ್ಪಾದನೆಗೆ 10,000 ಕೋಟಿ ರೂ. (5 ವರ್ಷಗಳಿಗೆ) ಮೀಸಲಿಡಲಾಗಿದೆ.

ರಕ್ಷಣೆ ಮತ್ತು ಕೃಷಿ: ರಕ್ಷಣಾ ವಲಯಕ್ಕೆ 7.85 ಲಕ್ಷ ಕೋಟಿ ರೂ.ಗಳ ಬಜೆಟ್ ಹಂಚಿಕೆ ಮಾಡಲಾಗಿದೆ (ಶೇ. 15ಕ್ಕಿಂತ ಹೆಚ್ಚು ಹೆಚ್ಚಳ). ಕೃಷಿ ವಲಯದಲ್ಲಿ ತರಕಾರಿ, ಹಣ್ಣುಗಳ ಸಮಗ್ರ ಅಭಿವೃದ್ಧಿ ಮತ್ತು ಅಧಿಕ ಇಳುವರಿ ಬೀಜಗಳ ರಾಷ್ಟ್ರೀಯ ಮಿಷನ್ ಘೋಷಿಸಲಾಗಿದೆ.

ಆರೋಗ್ಯ ಮತ್ತು ಶಿಕ್ಷಣ: 17 ಕ್ಯಾನ್ಸರ್ ಮತ್ತು 7 ಇತರ ಕಾಯಿಲೆಗಳ ಔಷಧಿಗಳು ಅಗ್ಗವಾಗಲಿವೆ. ಪ್ರತಿ ಜಿಲ್ಲೆಯಲ್ಲೂ ಬಾಲಕಿಯರಿಗಾಗಿ ಹಾಸ್ಟೆಲ್ ಮತ್ತು ಹೊಸ ಶಿಕ್ಷಣ ಟೌನ್‌ಶಿಪ್‌ಗಳನ್ನು ಘೋಷಿಸಲಾಗಿದೆ.

ವಿತ್ತೀಯ ಕೊರತೆ: 2026–27ರ ವಿತ್ತೀಯ ಕೊರತೆಯನ್ನು ಜಿಡಿಪಿಯ ಶೇ. 4.3 ಕ್ಕೆ ತಗ್ಗಿಸುವ ಗುರಿ ಹೊಂದಲಾಗಿದೆ.ರೈಲ್ವೆ ಮತ್ತು ಇಂಧನ: 7 ಹೈಸ್ಪೀಡ್ ರೈಲು ಕಾರಿಡಾರ್‌ಗಳ ಅಭಿವೃದ್ಧಿ ಮತ್ತು ಕಾರ್ಬನ್ ಹೊರಸೂಸುವಿಕೆ ಕಡಿತ ಕಾರ್ಯಕ್ರಮಗಳಿಗೆ 200 ಬಿಲಿಯನ್ ರೂ. ಘೋಷಿಸಲಾಗಿದೆ. ಈ ಬಜೆಟ್ 'ವಿಕಸಿತ ಭಾರತ' ಗುರಿಯತ್ತ ಸಾಗುತ್ತಿದ್ದು, ಸ್ಥಿರತೆ ಮತ್ತು ಬೆಳವಣಿಗೆಯ ಮೇಲೆ ಗಮನ ಹರಿಸಿದೆ.

ಬಜೆಟ್ ಅಂದಾಜು 2025–26

ಸಾಲವನ್ನು ಹೊರತುಪಡಿಸಿ ಒಟ್ಟು ಆದಾಯ ಮತ್ತು ಒಟ್ಟು ವೆಚ್ಚವನ್ನು ಕ್ರಮವಾಗಿ 34.96 ಲಕ್ಷ ಕೋಟಿ ಮತ್ತು 50.65 ಲಕ್ಷ ಕೋಟಿ ಎಂದು ಅಂದಾಜಿಸಲಾಗಿದೆ. ನಿವ್ವಳ ತೆರಿಗೆ ಸ್ವೀಕೃತಿಗಳನ್ನು 28.37 ಲಕ್ಷ ಕೋಟಿ ಎಂದು ಅಂದಾಜಿಸಲಾಗಿದೆ.ವಿತ್ತೀಯ ಕೊರತೆಯನ್ನು ಜಿಡಿಪಿಯ ಶೇ.4.4 ಎಂದು ಅಂದಾಜಿಸಲಾಗಿದೆ. ಒಟ್ಟು ಮಾರುಕಟ್ಟೆ ಸಾಲವನ್ನು 14.82 ಲಕ್ಷ ಕೋಟಿ ಎಂದು ಅಂದಾಜಿಸಲಾಗಿದೆ.

2025–26ರ ಹಣಕಾಸು ವರ್ಷದಲ್ಲಿ 11.21 ಲಕ್ಷ ಕೋಟಿ ರೂ.ಗಳ ಕ್ಯಾಪೆಕ್ಸ್ ವೆಚ್ಚವನ್ನು (ಜಿಡಿಪಿಯ 3.1%) ನಿಗದಿ ಮಾಡಲಾಗಿದೆ.ಅಭಿವೃದ್ಧಿಯ ಮೊದಲ ಎಂಜಿನ್ ಆಗಿ ಕೃಷಿ

ಪ್ರಧಾನ ಮಂತ್ರಿ ಧನ್–ಧನ್ಯಾ ಕೃಷಿ ಯೋಜನೆ – ಕೃಷಿ ಜಿಲ್ಲೆಗಳ ಅಭಿವೃದ್ಧಿ ಕಾರ್ಯಕ್ರಮ

1.7 ಕೋಟಿ ರೈತರಿಗೆ ಅನುಕೂಲವಾಗುವಂತೆ ಕಡಿಮೆ ಉತ್ಪಾದಕತೆ, ಮಧ್ಯಮ ಬೆಳೆ ತೀವ್ರತೆ ಮತ್ತು ಸರಾಸರಿಗಿಂತ ಕಡಿಮೆ ಸಾಲ ನಿಯತಾಂಕಗಳನ್ನು ಹೊಂದಿರುವ 100 ಜಿಲ್ಲೆಗಳನ್ನು ಒಳಗೊಂಡಂತೆ ರಾಜ್ಯಗಳ ಸಹಭಾಗಿತ್ವದಲ್ಲಿ ಈ ಕಾರ್ಯಕ್ರಮವನ್ನು ಪ್ರಾರಂಭಿಸಲಾಗುವುದು.

ಗ್ರಾಮೀಣ ಸಮೃದ್ಧಿ ಮತ್ತು ಸ್ಥಿತಿಸ್ಥಾಪಕತ್ವವನ್ನು ನಿರ್ಮಿಸುವುದು

ಕೌಶಲ್ಯ, ಹೂಡಿಕೆ, ತಂತ್ರಜ್ಞಾನ ಮತ್ತು ಗ್ರಾಮೀಣ ಆರ್ಥಿಕತೆಯನ್ನು ಉತ್ತೇಜಿಸುವ ಮೂಲಕ ಕೃಷಿಯಲ್ಲಿ ಉದ್ಯೋಗದ ಸಮಸ್ಯೆಯನ್ನು ಪರಿಹರಿಸಲು ರಾಜ್ಯಗಳ ಸಹಭಾಗಿತ್ವದಲ್ಲಿ ಸಮಗ್ರ ಬಹು–ವಲಯ ಕಾರ್ಯಕ್ರಮವನ್ನು ಪ್ರಾರಂಭಿಸಲಾಗುವುದು.

ಮೊದಲ ಹಂತವು 100 ಅಭಿವೃದ್ಧಿ ಹೊಂದುತ್ತಿರುವ ಕೃಷಿ ಜಿಲ್ಲೆಗಳನ್ನು ಒಳಗೊಳ್ಳುತ್ತದೆ.

ಬೇಳೆಕಾಳುಗಳಲ್ಲಿ ಆತ್ಮನಿರ್ಭರ

ತೊಗರಿ, ಉದ್ದು ಮತ್ತು ಮಾಸೂರ್ ಗಳನ್ನು ಕೇಂದ್ರೀಕರಿಸಿ 6 ವರ್ಷಗಳ ಅವಧಿಯ "ದ್ವಿದಳ ಧಾನ್ಯಗಳಲ್ಲಿ ಆತ್ಮನಿರ್ಭರ ಮಿಷನ್" ಅನ್ನು ಸರ್ಕಾರ ಪ್ರಾರಂಭಿಸಲಿದೆ. ಮುಂದಿನ 4 ವರ್ಷಗಳಲ್ಲಿ ನಾಫೆಡ್ ಮತ್ತು ಎನ್‌ಸಿಸಿಎಫ್ ಗಳು ಈ ಬೇಳೆಕಾಳುಗಳನ್ನು ರೈತರಿಂದ ಖರೀದಿಸುತ್ತವೆ.

ತರಕಾರಿಗಳು ಮತ್ತು ಹಣ್ಣುಗಳಿಗಾಗಿ ಸಮಗ್ರ ಕಾರ್ಯಕ್ರಮ

ಉತ್ಪಾದನೆ, ಸಮರ್ಪಕ ಪೂರೈಕೆ, ಸಂಸ್ಕರಣೆ ಮತ್ತು ರೈತರಿಗೆ ಲಾಭದಾಯಕ ಬೆಲೆಗಳನ್ನು ಉತ್ತೇಜಿಸಲು ರಾಜ್ಯಗಳ ಸಹಭಾಗಿತ್ವದಲ್ಲಿ ಸಮಗ್ರ ಕಾರ್ಯಕ್ರಮವನ್ನು ಪ್ರಾರಂಭಿಸಲಾಗುವುದು.

ಅಧಿಕ ಇಳುವರಿ ನೀಡುವ ಬೀಜಗಳ ರಾಷ್ಟ್ರೀಯ ಮಿಷನ್

ಸಂಶೋಧನಾ ಪರಿಸರ ವ್ಯವಸ್ಥೆಯನ್ನು ಬಲಪಡಿಸುವುದು, ಹೆಚ್ಚಿನ ಇಳುವರಿ ನೀಡುವ ಬೀಜಗಳ ಗುರಿ ಅಭಿವೃದ್ಧಿ ಮತ್ತು ಪ್ರಸರಣ ಮತ್ತು 100 ಕ್ಕೂ ಹೆಚ್ಚು ಬೀಜ ಪ್ರಭೇದಗಳ ವಾಣಿಜ್ಯ ಲಭ್ಯತೆಯ ಗುರಿಯೊಂದಿಗೆ ಹೆಚ್ಚಿನ ಇಳುವರಿ ನೀಡುವ ಬೀಜಗಳ ರಾಷ್ಟ್ರೀಯ ಮಿಷನ್ ಅನ್ನು ಪ್ರಾರಂಭಿಸಲಾಗುವುದು.

ಹತ್ತಿ ಉತ್ಪಾದಕತೆಗಾಗಿ ಮಿಷನ್

ಹತ್ತಿ ಕೃಷಿಯ ಉತ್ಪಾದಕತೆ ಮತ್ತು ಸುಸ್ಥಿರತೆಯಲ್ಲಿ ಗಮನಾರ್ಹ ಸುಧಾರಣೆಗಳನ್ನು ತರಲು ಮತ್ತು ಹೆಚ್ಚುವರಿ ದೀರ್ಘಾವಧಿಯ ಪ್ರಧಾನ ಹತ್ತಿ ಪ್ರಭೇದಗಳನ್ನು ಉತ್ತೇಜಿಸಲು 5 ವರ್ಷಗಳ ಮಿಷನ್ ಅನ್ನು ಘೋಷಿಸಲಾಗಿದೆ.

ಕೆಸಿಸಿ ಮೂಲಕ ವರ್ಧಿತ ಸಾಲ

ಕೆಸಿಸಿ ಮೂಲಕ ಪಡೆದ ಸಾಲಗಳಿಗೆ ಪರಿಷ್ಕೃತ ಬಡ್ಡಿ ಸಹಾಯಧನ ಯೋಜನೆಯಡಿ ಸಾಲದ ಮಿತಿಯನ್ನು 3 ಲಕ್ಷ ರೂ.ಗಳಿಂದ 5 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗುವುದು.

ಸೂಕ್ಷ್ಮ ಉದ್ಯಮಗಳಿಗೆ ಕ್ರೆಡಿಟ್ ಕಾರ್ಡ್ ಗಳು

ಉದ್ಯೋಗ್ ಪೋರ್ಟಲ್ ನಲ್ಲಿ ನೋಂದಾಯಿಸಲಾದ ಸೂಕ್ಷ್ಮ ಉದ್ಯಮಗಳಿಗೆ 5 ಲಕ್ಷ ಮಿತಿಯೊಂದಿಗೆ ಕಸ್ಟಮೈಸ್ ಮಾಡಿದ ಕ್ರೆಡಿಟ್ ಕಾರ್ಡ್ ಗಳು, ಮೊದಲ ವರ್ಷದಲ್ಲಿ 10 ಲಕ್ಷ ಕಾರ್ಡ್ ಗಳನ್ನು ವಿತರಿಸಲಾಗುವುದು.

ಸ್ಟಾರ್ಟ್ ಅಪ್ ಗಳಿಗೆ (ನವೋದ್ಯಮಗಳಿಗೆ) ನಿಧಿ

ವಿಸ್ತೃತ ವ್ಯಾಪ್ತಿ ಮತ್ತು 10,000 ಕೋಟಿ ರೂ.ಗಳ ಹೊಸ ಕೊಡುಗೆಯೊಂದಿಗೆ ಹೊಸ ನಿಧಿಯ ನಿಧಿಯನ್ನು ಸ್ಥಾಪಿಸಲಾಗುವುದು.

ಮೊದಲ ಬಾರಿಗೆ ಉದ್ಯಮ ಸ್ಥಾಪಿಸಿದ ಉದ್ಯಮಿಗಳಿಗೆ ಯೋಜನೆ


5 ಲಕ್ಷ ಮಹಿಳೆಯರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೊದಲ ಬಾರಿಗೆ ಉದ್ಯಮ ಸ್ಥಾಪಿಸಿದ ಉದ್ಯಮಿಗಳಿಗೆ ಮುಂದಿನ 5 ವರ್ಷಗಳಲ್ಲಿ 2 ಕೋಟಿ ರೂ.ಗಳವರೆಗೆ ಅವಧಿ ಸಾಲ ನೀಡುವ ಹೊಸ ಯೋಜನೆಯನ್ನು ಘೋಷಿಸಲಾಗಿದೆ.

ಪಾದರಕ್ಷೆ ಮತ್ತು ಚರ್ಮ ವಲಯಗಳಿಗೆ ಕೇಂದ್ರೀಕೃತ ಉತ್ಪನ್ನ ಯೋಜನೆ

ಭಾರತದ ಪಾದರಕ್ಷೆ ಮತ್ತು ಚರ್ಮ ವಲಯದ ಉತ್ಪಾದಕತೆ, ಗುಣಮಟ್ಟ ಮತ್ತು ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು, 22 ಲಕ್ಷ ಜನರಿಗೆ ಉದ್ಯೋಗ ಒದಗಿಸಲು, 4 ಲಕ್ಷ ಕೋಟಿ ರೂ.ಗಳ ವಹಿವಾಟು ಮತ್ತು 1.1 ಲಕ್ಷ ಕೋಟಿ ರೂ.ಗಿಂತ ಹೆಚ್ಚಿನ ರಫ್ತು ಮಾಡಲು ಕೇಂದ್ರೀಕೃತ ಉತ್ಪನ್ನ ಯೋಜನೆಯನ್ನು ಘೋಷಿಸಲಾಗಿದೆ.

ಆಹಾರ ಸಂಸ್ಕರಣೆಗೆ ಬೆಂಬಲ

ಬಿಹಾರದಲ್ಲಿ ರಾಷ್ಟ್ರೀಯ ಆಹಾರ ತಂತ್ರಜ್ಞಾನ, ಉದ್ಯಮಶೀಲತೆ ಮತ್ತು ನಿರ್ವಹಣಾ ಸಂಸ್ಥೆಯನ್ನು



ಸ್ಥಾಪಿಸಲಾಗುವುದು.ಉತ್ಪಾದನಾ ಮಿಷನ್ – "ಮೇಕ್ ಇನ್ ಇಂಡಿಯಾ" ವನ್ನು ಮತ್ತಷ್ಟು ಹೆಚ್ಚಿಸುವುದು"ಮೇಕ್ ಇನ್ ಇಂಡಿಯಾ"ವನ್ನು ಉತ್ತೇಜಿಸಲು ಸಣ್ಣ, ಮಧ್ಯಮ ಮತ್ತು ದೊಡ್ಡ ಕೈಗಾರಿಕೆಗಳನ್ನು ಒಳಗೊಂಡ ರಾಷ್ಟ್ರೀಯ ಉತ್ಪಾದನಾ ಮಿಷನ್ ಅನ್ನು ಘೋಷಿಸಲಾಯಿತು.

ಅಟಲ್ ಟಿಂಕರಿಂಗ್ ಲ್ಯಾಬ್ಸ್

ಮುಂದಿನ 5 ವರ್ಷಗಳಲ್ಲಿ ಸರ್ಕಾರಿ ಶಾಲೆಗಳಲ್ಲಿ 50,000 ಅಟಲ್ ಟಿಂಕರಿಂಗ್ ಲ್ಯಾಬ್ ಗಳನ್ನು ಸ್ಥಾಪಿಸಲಾಗುವುದು.ಸರ್ಕಾರಿ ಮಾಧ್ಯಮಿಕ ಶಾಲೆಗಳು ಮತ್ತು ಪಿಎಚ್‌ಸಿಗಳಿಗೆ ಬ್ರಾಡ್ಬ್ಯಾಂಡ್ ಸಂಪರ್ಕ ಭಾರತ್ ನೆಟ್ ಯೋಜನೆಯಡಿ ಗ್ರಾಮೀಣ ಪ್ರದೇಶದ ಎಲ್ಲಾ ಸರ್ಕಾರಿ ಮಾಧ್ಯಮಿಕ ಶಾಲೆಗಳು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಬ್ರಾಡ್ ಬ್ಯಾಂಡ್ ಸಂಪರ್ಕ ಒದಗಿಸಲಾಗುವುದು.

ಭಾರತೀಯ ಭಾಷಾ ಪುಸ್ತಕ ಯೋಜನೆ

ಶಾಲೆ ಮತ್ತು ಉನ್ನತ ಶಿಕ್ಷಣಕ್ಕಾಗಿ ಡಿಜಿಟಲ್ ರೂಪದ ಭಾರತೀಯ ಭಾಷಾ ಪುಸ್ತಕಗಳನ್ನು ಒದಗಿಸುವ ಭಾರತೀಯ ಭಾಷಾ ಪುಸ್ತಕ ಯೋಜನೆಯನ್ನು ಘೋಷಿಸಲಾಗಿದೆ.

ಕೌಶಲ್ಯಕ್ಕಾಗಿ ರಾಷ್ಟ್ರೀಯ ಉತ್ಕೃಷ್ಟತಾ ಕೇಂದ್ರಗಳು

"ಮೇಕ್ ಫಾರ್ ಇಂಡಿಯಾ, ಮೇಕ್ ಫಾರ್ ದಿ ವರ್ಲ್ಡ್" ಉತ್ಪಾದನೆಗೆ ಅಗತ್ಯವಾದ ಕೌಶಲ್ಯಗಳೊಂದಿಗೆ ನಮ್ಮ ಯುವಜನರನ್ನು ಸಜ್ಜುಗೊಳಿಸಲು ಜಾಗತಿಕ ಪರಿಣತಿ ಮತ್ತು ಪಾಲುದಾರಿಕೆಯೊಂದಿಗೆ ಕೌಶಲ್ಯಕ್ಕಾಗಿ 5 ರಾಷ್ಟ್ರೀಯ ಉತ್ಕೃಷ್ಟತಾ ಕೇಂದ್ರಗಳನ್ನು ಸ್ಥಾಪಿಸಲಾಗುವುದು.

ಐಐಟಿಗಳಲ್ಲಿ ಸಾಮರ್ಥ್ಯ ವಿಸ್ತರಣೆ

2014 ರ ನಂತರ ಪ್ರಾರಂಭವಾದ 5 ಐಐಟಿಗಳಲ್ಲಿ ಹೆಚ್ಚುವರಿ ಮೂಲಸೌಕರ್ಯಗಳನ್ನು ನಿರ್ಮಿಸಲಾಗುವುದು, ಇದರಿಂದ ಇನ್ನೂ 6,500 ವಿದ್ಯಾರ್ಥಿಗಳಿಗೆ ಶಿಕ್ಷಣಕ್ಕೆ ಅನುಕೂಲವಾಗುತ್ತದೆ.

ಶಿಕ್ಷಣಕ್ಕಾಗಿ ಎಐನಲ್ಲಿ ಶ್ರೇಷ್ಠತೆಯ ಕೇಂದ್ರ

ಒಟ್ಟು 500 ಕೋಟಿ ರೂ.ಗಳ ವೆಚ್ಚದಲ್ಲಿ ಶಿಕ್ಷಣಕ್ಕಾಗಿ ಕೃತಕ ಬುದ್ಧಿಮತ್ತೆಯಲ್ಲಿ ಉತ್ಕೃಷ್ಟತಾ ಕೇಂದ್ರವನ್ನು ಸ್ಥಾಪಿಸಲಾಗುವುದು.

ವೈದ್ಯಕೀಯ ಶಿಕ್ಷಣದ ವಿಸ್ತರಣೆ

ಮುಂದಿನ ವರ್ಷ ವೈದ್ಯಕೀಯ ಕಾಲೇಜುಗಳು ಮತ್ತು ಆಸ್ಪತ್ರೆಗಳಲ್ಲಿ 10,000 ಹೆಚ್ಚುವರಿ ಸೀಟುಗಳನ್ನು ಸೇರಿಸಲಾಗುವುದು, ಮುಂದಿನ 5 ವರ್ಷಗಳಲ್ಲಿ 75,000 ಸೀಟುಗಳನ್ನು ಸೇರಿಸಲಾಗುವುದು.

ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಡೇ ಕೇರ್ ಕ್ಯಾನ್ಸರ್ ಕೇಂದ್ರಗಳು

ಮುಂದಿನ 3 ವರ್ಷಗಳಲ್ಲಿ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಡೇ ಕೇರ್ ಕ್ಯಾನ್ಸರ್ ಕೇಂದ್ರಗಳನ್ನುಸ್ಥಾಪಿಸಲಾಗುವುದು, 2025–26ರಲ್ಲಿ 200 ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ನಿರ್ಧರಿಸಿದೆ.

ನಗರ ಜೀವನೋಪಾಯವನ್ನು ಬಲಪಡಿಸುವುದು

ನಗರ ಕಾರ್ಮಿಕರ ಸಾಮಾಜಿಕ–ಆರ್ಥಿಕ ಉನ್ನತಿಗಾಗಿ ಅವರ ಆದಾಯವನ್ನು ಸುಧಾರಿಸಲು ಮತ್ತು ಸುಸ್ಥಿರ ಜೀವನೋಪಾಯವನ್ನು ಒದಗಿಸಲು ಸಹಾಯ ಮಾಡುವ ಯೋಜನೆಯನ್ನು ಘೋಷಿಸಲಾಗಿದೆ.

ಪಿಎಂ ಸ್ವನಿಧಿ: ಬ್ಯಾಂಕುಗಳಿಂದ ವರ್ಧಿತ ಸಾಲಗಳು, 30,000 ರೂ.ಗಳ ಮಿತಿಯೊಂದಿಗೆ ಯುಪಿಐ ಲಿಂಕ್ಡ್ ಕ್ರೆಡಿಟ್ ಕಾರ್ಡ್‌ಗಳು ಮತ್ತು ಸಾಮರ್ಥ್ಯ ವರ್ಧನೆ ಬೆಂಬಲದೊಂದಿಗೆ ಯೋಜನೆಯನ್ನು ಪುನರುಜ್ಜೀವನಗೊಳಿಸಲಾಗುವುದು.

ಆನ್ ಲೈನ್ ಪ್ಲಾಟ್ ಫಾರ್ಮ್ ಕಾರ್ಮಿಕರ ಕಲ್ಯಾಣಕ್ಕಾಗಿ ಸಾಮಾಜಿಕ ಭದ್ರತಾ ಯೋಜನೆ

ಗಿಗ್ ಕಾರ್ಮಿಕರಿಗೆ (ಆನ್ ಲೈನ್ ವೇದಿಕೆಯಲ್ಲಿ ದುಡಿಯುವ ಕಾರ್ಮಿಕರಿಗಾಗಿ) ಗುರುತಿನ ಚೀಟಿ, ಇ–ಶ್ರಮ್ ಪೋರ್ಟಲ್ ನಲ್ಲಿ ನೋಂದಣಿ ಮತ್ತು ಪಿಎಂ ಜನ ಆರೋಗ್ಯ ಯೋಜನೆ ಅಡಿಯಲ್ಲಿ ಆರೋಗ್ಯ ರಕ್ಷಣೆಗೆ ಸರ್ಕಾರ ವ್ಯವಸ್ಥೆ ಮಾಡುತ್ತದೆ.

ಆರ್ಥಿಕತೆಯಲ್ಲಿ ಹೂಡಿಕೆಮೂಲಸೌಕರ್ಯದಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವ

ಮೂಲಸೌಕರ್ಯ ಸಂಬಂಧಿತ ಸಚಿವಾಲಯಗಳು ಪಿಪಿಪಿ ಮಾದರಿಯಲ್ಲಿ 3 ವರ್ಷಗಳ ಯೋಜನೆಗಳ ಪೈಪ್ ಲೈನ್ ತರಲು ಮುಂದಾಗಬೇಕು ರಾಜ್ಯಗಳಿಗೂ ಪ್ರೋತ್ಸಾಹ ನೀಡಬೇಕು.

ಮೂಲಸೌಕರ್ಯಕ್ಕಾಗಿ ರಾಜ್ಯಗಳಿಗೆ ಬೆಂಬಲ

ಬಂಡವಾಳ ವೆಚ್ಚ ಮತ್ತು ಸುಧಾರಣೆಗಳಿಗೆ ಪ್ರೋತ್ಸಾಹಕ್ಕಾಗಿ ರಾಜ್ಯಗಳಿಗೆ 50 ವರ್ಷಗಳ ಬಡ್ಡಿರಹಿತ ಸಾಲಕ್ಕಾಗಿ 1.5 ಲಕ್ಷ ಕೋಟಿ ರೂ.

ಆಸ್ತಿ ನಗದೀಕರಣ ಯೋಜನೆ 2025–30

2025–30ರ ಅವಧಿಗಾಗಿ ಎರಡನೇ ಯೋಜನೆ. ಘೋಷಣೆಯಾದ ಹೊಸ ಯೋಜನೆಗಳಲ್ಲಿ 10 ಲಕ್ಷ ಕೋಟಿ ರೂ.(ವ್ಯಾಪಾರೋದ್ಯಮವೊಂದು ತನ್ನ ವ್ಯಾಪಾರೋದ್ಯಮ ಸುಧಾರಣೆಗೆ ಹಾಕುವ ಮೊತ್ತ) ಹೂಡಿಕೆ

ಜಲ ಜೀವನ್ ಮಿಷನ್

ವರ್ಧಿತ ಒಟ್ಟು ವೆಚ್ಚದೊಂದಿಗೆ ಮಿಷನ್ ಅನ್ನು 2028 ರವರೆಗೆ ವಿಸ್ತರಿಸಲಾಗುವುದು.

ವಿಕಸಿತ ಭಾರತ ಗಾಗಿ ಪರಮಾಣು ಶಕ್ತಿ ಮಿಷನ್

ಪರಮಾಣು ಶಕ್ತಿ ಕಾಯ್ದೆ ಮತ್ತು ಪರಮಾಣು ಹಾನಿಗಾಗಿ ಇರುವ ನಾಗರಿಕ ಹೊಣೆಗಾರಿಕೆ ಕಾಯ್ದೆಗೆ ತಿದ್ದುಪಡಿಗಳನ್ನು ಕೈಗೊಳ್ಳಲಾಗುವುದು.

2026–27ನೇ ಸಾಲಿನ ಕೇಂದ್ರ ಬಜೆಟ್ ಕುರಿತು ತುಮಕೂರಿನ ವಿವಿಧ ವಲಯದ ಜನರ ಪ್ರತಿಕ್ರಿಯೆ ಹೇಗಿತ್ತು...!?

ಆರ್ಥಿಕ ಸ್ಥಿರತೆ, ವೇಗವರ್ಧನೆಯ ಬಜೆಟ್: ಸುರೇಶ್‌ಗೌಡ

ತುಮಕೂರು: ಜಾಗತಿಕಆರ್ಥಿಕ ಮತ್ತುರಾಜಕೀಯ ಅನಿಶ್ಚತೆ ನಡುವೆ ಭಾರತದಆರ್ಥಿಕ ಸ್ಥಿರತೆ ಕಾಪಾಡಿಕೊಂಡುಅದಕ್ಕೆ ವೇಗ ವರ್ಧನೆ ನೀಡುವ ಮಹತ್ವದ ಬಜೆಟ್‌ಅನ್ನುಕೇಂದ್ರ ಹಣಕಾಸು ಸಚಿವ ನಿರ್ಮಲಾ ಸೀತಾರಾಮನ್ ಮಂಡಿಸಿದ್ದಾರೆ ಎಂದು ಹೇಳಿರುವ ತುಮಕೂರುಗ್ರಾಮಾಂತರಕ್ಷೇತ್ರ ಶಾಸಕ ಬಿ.ಸುರೇಶ್‌ಗೌಡರುಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.



ದೇಹಲಿಯಕರ್ತವ್ಯ ಭವನದಲ್ಲಿ ಸಿದ್ಧವಾದ ಮೊದಲ ಬಜೆಟ್‌ಇದು. ಮತ್ತು ಭಾನುವಾರರಜೆ ದಿನವಾದರೂ ಮಂಡನೆಯಾಗಿರುವ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡನೆ ಮಾಡಿರುವಈ ಬಜೆಟ್ ಬಡತನ ನಿವಾರಣೆಗೆ ಪ್ರಧಾನಿ ನರೇಂದ್ರ ಮೋದಿಯವರ ಬಜೆಟ್‌ಎಂಬುದನ್ನು ಮತ್ತೊಮ್ಮೆ ಖಚಿತಪಡಿಸಿದೆ.ಇದು ಈ ದೇಶದಯುವಜನಾಂಗಕ್ಕೆ ಭವಿಷ್ಯದ ಭಾರತ ನಿರ್ಮಾಣಕ್ಕೆಅಗತ್ಯವಾದಕಠಿಣ ಶ್ರದ್ಧೆ ಮತ್ತುಕರ್ತವ್ಯಪರತೆಯನ್ನು ನೆನಪಿಸಿದೆ.ಜನರ ಆಶೋತ್ತರಗಳನ್ನುನಿಜಮಾಡುವದಿಸೆಯಲ್ಲಿನಿರ್ಮಲಾಅವರು ಬಹು ದೊಡ್ಡ ಹೆಜ್ಜೆ ಇರಿಸಿದ್ದಾರೆ. ಸರ್ವ ಸಮುದಾಯ, ಧರ್ಮ ಮತ್ತುಜಾತಿಜನಾಂಗದವರಿಗೆದೇಶದ ಸಂಪನ್ಮೂಲಗಳ ಪ್ರಯೋಜನ ಸಿಗುವಂತೆ ಮಾಡುವುದುತಮ್ಮಉದ್ದೇಶಎಂದು ವಿಶೇಷ ಪ್ರಕಟಣೆ ಮಾಡಿರುವಕೇಂದ್ರ ಹಣಕಾಸು ಸಚಿವರಿಗೆಕಲ್ಪತರುನಾಡಿನವನಾಗಿ ನನ್ನ ವಿಶೇಷ ಅಭಿನಂದನೆಗಳು ಸಲ್ಲಬೇಕುಎಂದು **ಸುರೇಶ್‌ಗೌಡರು** ತಿಳಿಸಿದ್ದಾರೆ.

ದೃಷ್ಟಿಕೋನ, ಕ್ರಿಯಾಶೀಲವಲ್ಲದ ಬಜೆಟ್

ತುಮಕೂರು: ಕೇಂದ್ರ ಸರ್ಕಾರದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಭಾನುವಾರ ಮಂಡಿಸಿದ ಬಜೆಟ್ ದೃಷ್ಟಿಕೋನವಿಲ್ಲದ, ಕ್ರಿಯಾಶೀಲವಲ್ಲದ ಬಜೆಟ್ ಆಗಿದ್ದು, ಕರ್ನಾಟಕಕ್ಕೆ ಭಾರೀ ನಿರಾಸೆ ಮೂಡಿಸಿದೆ. ಭದ್ರಾ ಮೇಲ್ದಂಡೆ ಯೋಜನೆಗೆ ಅನುದಾನ, ವೇಗವಾಗಿ ಬೆಳೆಯುತ್ತಿರುವ ಬೆಂಗಳೂರಿನ ಮೂಲಸೌಕರ್ಯಕ್ಕೆ ವಿಶೇಷ ಯೋಜನೆಗಳ ನಿರೀಕ್ಷೆಯಲ್ಲಿ ಕನ್ನಡಿಗರಿದ್ದರು. ಆದರೆ, ಎರಡು ಹೈ ಸ್ಪೀಡ್ ರೈಲ್ವೆ ಕಾರಿಡಾರ್‌ಗಳು ಹಾಗೂ ತೆಂಗು, ಗೋಡಂಬಿ, ಶ್ರೀಗಂಧ ಬೆಳೆಗಾರರಿಗೆ ಯೋಜನೆಗಳು ಘೋಷಣೆಯಾಗಿದ್ದು ಬಿಟ್ಟರೆ ಬೇರೆನೂ ಕರ್ನಾಟಕಕ್ಕೆ ಸಿಕ್ಕಿಲ್ಲ.

ಇನ್ನು ಭಾರೀ ನಿರೀಕ್ಷೆ ಇಟ್ಟುಕೊಂಡಿದ್ದ ತೆರಿಗೆ ಪಾವತಿದಾರರಿಗೆ ನಿರ್ಮಲಾ ಸೀತಾರಾಮನ್ ತೀವ್ರ ನಿರಾಸೆ ಮೂಡಿಸಿದ್ದಾರೆ. ಈ ಬಜೆಟ್‌ನಲ್ಲಿ ಆದಾಯ ತೆರಿಗೆ ಸ್ಲ್ಯಾಬ್‌ಗಳಲ್ಲಿ ಯಾವುದೇ ಬದಲಾವಣೆ ಮಾಡದೆ ಯಥಾಸ್ಥಿತಿ ಕಾಯ್ದುಕೊಳ್ಳಲಾಗಿದ್ದು, ಒಂದಿಷ್ಟು ಟಿಸಿಎಸ್‌ಗಳು ಕಡಿಮೆ ಮಾಡಲಾಗಿದೆ. ಆದರೆ ಎಫ್‌ಅಂಡ್‌ಒ ಮೇಲಿನ ಎಸ್‌ಟಿಟಿ ದರವನ್ನು ಹೆಚ್ಚಿಸಲಾಗಿದ್ದು, ಷೇರು ಮಾರುಕಟ್ಟೆ ಟ್ರೇಡರ್‌ಗಳಿಗೆ ಬರೆ ಎಳೆಯಲಾಗಿದೆ.

–ನಟರಾಜ್, ಕಾಂಗ್ರೆಸ್ ಮುಖಂಡ

ಆರ್ಥಿಕ ಅಭಿವೃದ್ಧಿಯ ದೃಷ್ಟಿಯ ಬಜೆಟ್

ತುಮಕೂರು: ಭಾರತ ಸರ್ಕಾರದ ಹಣಕಾಸು ಸಚಿವರಾದ ಶ್ರೀಮತಿ ನಿರ್ಮಲ ಸೀತಾರಾಮನ್ ರವರು 3.0 ಬಜೆಟನ್ನು ಮಂಡಿಸಿದ್ದು ಕರ್ತವ್ಯ ಭವನದಲ್ಲಿ ಸಿದ್ಧವಾದ ಮೊದಲ ಬಜೆಟ್ ಎಂಬ ಖ್ಯಾತಿಗೆ ಪಾತ್ರವಾಗಿದ್ದು ಭಾರತದ ಆರ್ಥಿಕ ಅಭಿವೃದ್ಧಿಯ ದೃಷ್ಟಿಯಿಂದ ಹಲವು ಅಭಿವೃದ್ಧಿ ಯೋಜನೆಗಳನ್ನು ಘೋಷಿಸಿದ್ದು ಪ್ರಮುಖವಾಗಿ ಜಿ ಎಸ್ ಟಿ ಸರಳೀಕರಣ, ಸಣ್ಣ ಮಧ್ಯಮ ವರ್ಗದ ಕೈಗಾರಿಕೆಗಳಿಗೆ ಹತ್ತು ಸಾವಿರ ಕೋಟಿ ಮೀಸಲು, ಶಿಕ್ಷಣ ಕ್ಷೇತ್ರಕ್ಕೆ ಆದ್ಯತೆ, ಕೃಷಿ ಕಾಲೇಜು ಆಸ್ಪತ್ರೆಗಳಿಗೆ ಹೆಚ್ಚಿನ ಅನುದಾನ, ಪ್ರತಿ ಜಿಲ್ಲೆಯಲ್ಲೂ ಬಾಲಕಿಯರ ಹಾಸ್ಟೆಲ್ ಸ್ಥಾಪನೆ, ವಿಶ್ವ ದರ್ಜೆಯ ಟ್ರಕಿಂಗ್ಗೆ ಭಾರತದಲ್ಲಿ ಅವಕಾಶ, ಕರಾವಳಿ ಭಾಗದಲ್ಲಿ ಮೀನು ಸಹಕಾರ ಸಂಘಗಳಿಗೆ ಆದ್ಯತೆ, ವಿದೇಶಿ ಹೂಡಿಕೆಗೆ ಆದ್ಯತೆ, ತೆಂಗು, ಗೋಡಂಬಿ, ಕೋ ಕೋ, ಉತ್ಪನ್ನಗಳ ಅಭಿವೃದ್ಧಿಗೆ ಆದ್ಯತೆ, ಕೃಷಿ ವಲಯದಲ್ಲಿ ಹೊಸ ಉದ್ಯೋಗ ಸೃಷ್ಟಿ, ಗ್ರಾಮೀಣ ಮಹಿಳಾ ಉದ್ಯಮಿಗಳಿಗೆ ಶೀ ಮಹಾನ್ ಯೋಜನೆ , ಕೇಂದ್ರದಿಂದ ರಾಜ್ಯಗಳಿಗೆ 1.4 ಲಕ್ಷಕೋಟಿ ನೀಡಿಕೆ, ಮತ್ಸ್ಯ ಪಾಲನೆಗಾಗಿ 500 ಜಲಾಶಯಗಳ ಅಭಿವೃದ್ಧಿ, ಅಪಘಾತ ವಿಮೆ ಮೇಲೆ ಟಿಡಿಎಸ್ ಕಡಿತ ಇನ್ನೂರು ಕೈಗಾರಿಕಾ ಕ್ಲಸ್ಟರ್ಗಳ ಅಭಿವೃದ್ಧಿಗೆ ಆದ್ಯತೆ, ಆದ್ಯತೆ ನೀಡಿದ್ದು ತುಮಕೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಪಿ ಆರ್ ಕುರಂದವಾಡ ರವರು ಈ ಬಜೆಟ್ ಅನ್ನು ಸ್ವಾಗತಿಸಿದ್ದು ದೇಶದ ಅಭಿವೃದ್ಧಿಯ ಬಜೆಟ್ ಎಂದು ಸ್ವಾಗತಿಸಿದ್ದಾರೆ.

ಜನ ಸಮಸ್ಯೆಗಳ ನಿರ್ಲಕ್ಷ್ಯ ಜನವಿರೋಧಿ ಕೇಂದ್ರ ಬಿಜೆಪಿ ಬಜೆಟ್ (CITU)

ನಿರ್ಮಲಾ ಸೀತಾರಾಮನ್ ಅವರು ಮಂಡಿಸಿದ 2026–27ರ ಕೇಂದ್ರೀಯ ಬಜೆಟ್ ದಿಕ್ಕೇ–ದೆಸೆ ಇಲ್ಲದ ಹಾಗೂ ಅಸ್ಪಷ್ಟವಾದ ಬಜೆಟ್ ಆಗಿದೆ. ಈಗಾಗಲೇ 2025–26ರ ಆರ್ಥಿಕ ಸಮೀಕ್ಷೆಯು ಭಾರತದ ಆರ್ಥಿಕತೆಯು ಗಂಭೀರವಾದ ಹಂತದಲ್ಲಿದೆ. ಎಂದು ಒಪ್ಪಿಕೊಂಡಿದೆ. ವಿಶ್ವದಲ್ಲಿ ನಡೆಯುತ್ತಿರುವ ಭೂರಾಜಕೀಯ ಪುನರ್ವ್ಯವಸ್ಥೆಗಳು ಹೂಡಿಕೆ ಹರಿವು, ಸರಪಳಿ ವ್ಯವಸ್ಥೆ ಮತ್ತು ಬೆಳವಣಿಗೆ ಸಾಧ್ಯತೆಗಳ ಮೇಲೆ ಪ್ರಭಾವ ಬೀರಿವೆ. ಆದರೆ ಈ ಬಜೆಟ್ ಈ ಮೂಲ ಸವಾಲುಗಳನ್ನು ಪರಿಗಣಿಸಿಲ್ಲ ಅಥವಾ ಅಶಾಂತ ವಿಶ್ವ ಪರಿಸ್ಥಿತಿಗೆ ಭಾರತವನ್ನು ಸಿದ್ಧಪಡಿಸುವ ಯಾವುದೇ ಅರ್ಥಪೂರ್ಣ ನೀತಿ ಬದಲಾವಣೆಯನ್ನು ಹೊಂದಿರುವುದಿಲ್ಲ ಎಂದು ಸಿಐಟಿಯು ಟೀಕಿಸಿದೆ. .

ಕೇಂದ್ರ ಕಾರ್ಮಿಕ ಸಂಘಗಳು ಸತತವಾಗಿ ಎಚ್ಚರಿಸಿದಂತೆ, ಆರ್ಥಿಕ ಸಮೀಕ್ಷೆ ಮತ್ತು ಬಜೆಟ್ ಎರಡೂ ವಿಶ್ವದ ಬಂಡವಾಳಶಾಹಿ ವ್ಯವಸ್ಥೆಯ ಬಿಕ್ಕಟ್ಟಿನ ಹೊರೆಯನ್ನು ಕಾರ್ಮಿಕ ವರ್ಗ ಮತ್ತು ಜನಸಾಮಾನ್ಯರ ಮೇಲೆ ಹೊರಿಸುವ ಪ್ರಯತ್ನ ಮಾಡುತ್ತಿವೆ. ಬಜೆಟ್ ಭಾಷಣವು "ಯುವ ಶಕ್ತಿ" ಬಗ್ಗೆ ವಾದದಿಂದ ಪ್ರಾರಂಭಿಸಿ, "ಶಿಕ್ಷಣದಿಂದ ಉದ್ಯೋಗ ಮತ್ತು ಉದ್ಯಮ" ವರೆಗಿನ ಉನ್ನತ–ಶಕ್ತಿಯ ಸ್ಥಾಯಿ ಸಮಿತಿಯ ಪ್ರಸ್ತಾಪದೊಂದಿಗೆ ಮುಕ್ತಾಯಗೊಂಡಿದೆ. ಭಾರತದ ಯುವಜನತೆಗೆ ಈಗಲೇ ಉತ್ತಮ ಮತ್ತು ಸುರಕ್ಷಿತ ಉದ್ಯೋಗ ಬೇಕಿದೆ, 2047ರವರೆಗಿನ ದೂರದ ಭರವಸೆಗಳಲ್ಲ.

ವಿಕಸಿತ ಭಾರತ ಕನಸು ಸಾಕಾರಗೊಳಿಸುವ ಭವಿಷ್ಯ ಮುಖಿ ಬಜೆಟ್


ಹಣಕಾಸು ಸಚಿವರು ಒಂಬತ್ತನೇ ಬಾರಿಗೆ ಬಜೆಟ್ ಮಂಡಿಸಿದ್ದು ಇದು ಆಳವಾದ ಆರ್ಥಿಕ ಸಂಕಷ್ಟವನ್ನು ಮರೆಮಾಚುವ ಸಂಖ್ಯಾತ್ಮಕ ಪರದೆಯಂತಿದೆ. ತುಮಕೂರು:ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಭಾನುವಾರ ಮಂಡಿಸಿದ ಬಜೆಟ್‌ಅಭಿವೃದ್ಧಿಯ ಮೂಲಕ ಆತ್ಮನಿರ್ಭರ ಭಾರತ ಹಾಗೂ ವಿಕಸಿತ ಭಾರತದಕನಸನ್ನು ಸಾಕಾರಗೊಳಿಸುವ ಜನಪರಉದ್ಯೋಗಪರಮತ್ತು ಭವಿಷ್ಯಮುಖಿ ಬಜೆಟ್‌ಆಗಿದೆ

ಹನುಮಂತರಾಜು

ನಗರ ಬಿಜೆಪಿ ನಿಕಟ ಪೂರ್ವ ಅಧ್ಯಕ್ಷ

ನಿರುದ್ಯೋಗ ಸಮಸ್ಯೆಗಿಲ್ಲ ಪರಿಹಾರ.

ವಿತ್ತ ಸಚಿವೆ ನಿರ್ಮಲಾ ಸೀತಾರಾಮ್ ರವರು ಮಂಡಿಸಿದ 2026–27ನೇ ಸಾಲಿನ ಆಯವ್ಯಯ ದಲ್ಲಿ ಯುವ ಜನತೆಗೆ ಉದ್ಯೋಗ ಸೃಷ್ಟಿ ಮತ್ತು ಅವರ ಅಶೋತ್ತರಗಳನ್ನ ಈಡೇರಿಸುವಲ್ಲಿ ಸಂಪೂರ್ಣ ವಿಫಲವಾಗಿದೆ.



ಇತ್ತೀಚಿನ ಅಂಕಿಅಂಶಗಳ ಪ್ರಕಾರ, ಭಾರತದಲ್ಲಿ ನಿರುದ್ಯೋಗ ಪ್ರಮಾಣವು ಸುಮಾರು 7ರಿಂದ 8% ರಷ್ಟಿದ್ದು, ಅದರಲ್ಲಿಯೂ ವಿಶೇಷವಾಗಿ ಯುವ ನಿರುದ್ಯೋಗ ಪ್ರಮಾಣ 15 ರಿಂದ 20%ರ ಮಟ್ಟದಲ್ಲಿದೆ. ಇಂತಹ ಗಂಭೀರ ಪರಿಸ್ಥಿತಿಯ ನಡುವೆಯೂ 2026–27ನೇ ಸಾಲಿನ ಬಜೆಟ್‌ನಲ್ಲಿ ಯುವಜನತೆಗೆ ಉದ್ಯೋಗ ಸೃಷ್ಟಿಗೆ ಸ್ಪಷ್ಟ ರೋಡ್‌ಮ್ಯಾಪ್ ನೀಡಲಾಗಿಲ್ಲ. ದೇಶದಲ್ಲಿ ಪ್ರತಿವರ್ಷ ಸರಾಸರಿ 1.2 ರಿಂದ 1.5 ಕೋಟಿ ಯುವಕರು ಉದ್ಯೋಗ ಮಾರುಕಟ್ಟೆಗೆ ಪ್ರವೇಶಿಸುತ್ತಿದ್ದಾರೆ, ಆದರೆ ಬಜೆಟ್‌ನಲ್ಲಿ ಎಷ್ಟು ಉದ್ಯೋಗಗಳು ಸೃಷ್ಟಿಯಾಗಲಿವೆ ಎಂಬ ಸಂಖ್ಯಾತ್ಮಕ ಗುರಿ (ಜಾಬ್ ಟಾರ್ಗೆಟ್) ಸ್ಪಷ್ಟಪಡಿಸಿಲ್ಲ.

ಮುರುಳೀಧರ್ ಹಾಲಪ್ಪ ,
ಉಪಾಧ್ಯಕ್ಷರು ಕೆಪಿಸಿಸಿ

ಕೇಂದ್ರ ಬಜೆಟ್ ನಲ್ಲಿ ಆರೋಗ್ಯ ಕ್ಷೇತ್ರಕ್ಕೆ ಕೊಡುಗೆ ಸಿಕ್ಕಿದೆ.

ಖಾಸಗಿ ಸಂಸ್ಥೆಗಳ ಸಹಯೋಗದಲ್ಲಿ ಮೆಡಿಕಲ್ ಹಬ್ ಗಳ ನಿರ್ಮಾಣ, 3 ಆಯುರ್ವೇದ ವಿಶ್ವವಿದ್ಯಾನಿಲಯಗಳ ಘೋಷಣೆ, ಕ್ಯಾನ್ಸರ್ ಔಷಧಿಗಳ ಮೇಲಿನ ಸುಂಕ ವಿನಾಯಿತಿ ಮೊದಲಾದವು ದೇಶದ ಆರೋಗ್ಯ – ವೈದ್ಯಕೀಯ ಕ್ಷೇತ್ರದ ಮತ್ತಷ್ಟು ಬಲವರ್ಧನೆಗೆ ಉತ್ತೇಜನಕಾರಿಗಿದೆ.

– ಡಾ. ಎಸ್ ಸಚ್ಚಿದಾನಂದ್,
ಸಿದ್ಧಗಂಗಾ ವೈದ್ಯಕೀಯ ಆಸ್ಪತ್ರೆ

ಅಭಿವೃದ್ಧಿಪರ ಸ್ವಾಗತಾರ್ಹ ಬಜೆಟ್: ಟಿ.ಜೆ.ಗಿರೀಶ್

ತುಮಕೂರು: ಕೇಂದ್ರ ಹಣಕಾಸು ಸಚಿವ ನಿರ್ಮಲಾ ಸೀತಾರಾಮನ್ ಮಂಡನೆ ಮಾಡಿರುವ ಈ ಸಾಲಿನ ಬಜೆಟ್‌ನಲ್ಲಿ ವರಮಾನ ತೆರಿಗೆಯ ಟಿಡಿಎಸ್‌ನಲ್ಲಿ ಕೆಲವು ಬದಲಾವಣೆ, ಎಂಎಸ್‌ಎಂಇ, ಎಸ್‌ಎಂಇಗೆ ರೈಲ್ವೆ ಕಾರಿಡಾರ್‌ಗೆ, ಪ್ರವಾಸೋದ್ಯಮಕ್ಕೆ, ಟ್ರೇಡ್‌ಅಂಡ್ ಇಂಡಸ್ಟ್ರೀಸ್ ಅಭಿವೃದ್ಧಿ ಹೊಂದಲು ಹಣ ಮೀಸಲಿಟ್ಟಿರುವುದು ಸ್ವಾಗತಾರ್ಹ ಎಂದು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ನಿಕಟ ಪೂರ್ವ ಅಧ್ಯಕ್ಷ ಹಾಗೂ ರೈಲ್ವೆ ಸಲಹಾ ಸಮಿತಿ ಸದಸ ಟಿ.ಜೆ.ಗಿರೀಶ್ ಹೇಳಿದ್ದಾರೆ.

ಸೋಗಿನ ಬಜೆಟ್, ಶೂನ್ಯ ವಿಷನ್:

ಕೇಂದ್ರದ ರಿಫಾರ್ಮ್ ಎಕ್ಸ್‌ಪ್ರೆಸ್ ದಾರಿ ತಪ್ಪಿದೆ; ಸೋಗಿನ ಬಜೆಟ್, ಶೂನ್ಯ ವಿಷನ್: ಮೋದಿ ಸರ್ಕಾರದ ವಿರುದ್ಧ ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ2026–27ನೇ ಸಾಲಿನ ಕೇಂದ್ರ ಬಜೆಟ್ ಕೇವಲ ಅಂಕಿ–ಅಂಶಗಳ ವ್ಯಾಯಾಮವಾಗಿದ್ದು,



ದೇಶದ ಆರ್ಥಿಕ ಮತ್ತು ಸಾಮಾಜಿಕ ಸವಾಲುಗಳಿಗೆ ಯಾವುದೇ ಪರಿಹಾರ ನೀಡಿಲ್ಲ ಅಲ್ಲದೆ, ಮೋದಿ ಸರ್ಕಾರದ ಬಳಿ ಐಡಿಯಾಗಳೇ ಖಾಲಿಯಾಗಿವೆ ಎಂದು ಅವರು ಕಿಡಿಕಾರಿದ್ದಾರೆ.

ಮಿಷನ್ ಮೋಡ್' ಈಗ ಚಾಲೆಂಜ್ ರೂಟ್'!

ಬಜೆಟ್ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಖರ್ಗೆ, ಸರ್ಕಾರದ ಘೋಷಣೆಗಳನ್ನು ಕಟುವಾಗಿ ಟೀಕಿಸಿದ್ದಾರೆ.

ಬ್ರಿಟಿಷರ ಕಾಲಕ್ಕಿಂತಲೂ ಘೋರ ಅಸಮಾನತೆ

ದೇಶದ ಪ್ರಸ್ತುತ ಪರಿಸ್ಥಿತಿಯನ್ನು ಬ್ರಿಟಿಷ್ ರಾಜ್‌ಗೆ ಹೋಲಿಸಿರುವ ಖರ್ಗೆ, ಇಂದು ಭಾರತದಲ್ಲಿರುವ ಆರ್ಥಿಕ ಅಸಮಾನತೆ ಬ್ರಿಟಿಷರ ಕಾಲವನ್ನೂ ಮೀರಿದೆ. ಆದರೆ ಬಜೆಟ್‌ನಲ್ಲಿ ಎಸ್‌ಸಿ (ಖಅ), ಎಸ್‌ಟಿ (ಖಖ), ಒಬಿಸಿ (ಔಃಅ)ಮತ್ತುಅಲ್ಪಸಂಖ್ಯಾತಸಮುದಾಯಗಳಕಲ್ಯಾಣಕ್ಕೆ ಯಾವುದೇ ಹೊಸ ಮಾರ್ಗಸೂಚಿಗಳಿ ಲ್ಲ ಎಂದು

ಮಲ್ಲಿಕಾರ್ಜುನ ಖರ್ಗೆ
ಕಾಂಗ್ರೆಸ್ ಅಧ್ಯಕ್ಷ

"ಕೇಂದ್ರ ಬಜೆಟ್ ಭಾರತದ ನಿಜವಾದ ಬಿಕ್ಕಟ್ಟುಗಳಿಗೆ ಕುರುಡಾಗಿದೆ"

ಪ್ರತಿಪಕ್ಷ ಕಾಂಗ್ರೆಸ್ ಈ ಬಜೆಟ್‌ನ್ನು ಖಂಡಿಸಿದ್ದು, "ಜನವಿರೋಧಿ" ಎಂದು ಟೀಕಿಸಿದೆ. ಈ ಮಧ್ಯೆ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರು, ಬಜೆಟ್ ಕುರಿತು ತಮ್ಮ ಭಾಷಣದಲ್ಲಿ ಪ್ರತಿಕ್ರಿಯೆ ನೀಡುವುದಾಗಿ ಸ್ಪಷ್ಟಪಡಿಸಿದ್ದಾರೆ



ಕರ್ನಾಟಕ್ಕೆ ಕೇಂದ್ರ ಸರ್ಕಾರ ಚೊಂಬು ಕೊಟ್ಟಿದೆ ಸಿ.ಎಂ. ಸಿದ್ದರಾಮಯ್ಯ

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ 2026–27ನೇ ಸಾಲಿನ ಬಜೆಟ್ (ಮಂಡಿಸಿದ್ದಾರೆ. 53.47 ಲಕ್ಷ ಕೋಟಿ ರೂಪಾಯಿ ಮೌಲ್ಯದ ಈ ಬಜೆಟ್ ಮಂಡಿಸಿದ್ದಾರೆ. ಈ ಬಗ್ಗೆ ಕರ್ನಾಟಕ ಸಿಎಂ ಸಿದ್ದರಾಮಯ್ಯ ಪ್ರತಿಕ್ರಿಯಿಸಿದ್ದು, ಕರ್ನಾಟಕಕ್ಕೆ ಬಜೆಟ್‌ನಲ್ಲಿ ಏನೂ ಕೊಟ್ಟಿಲ್ಲ. ಕರ್ನಾಟಕ್ಕೆ ಕೇಂದ್ರ ಸರ್ಕಾರ ಚೊಂಬು ಕೊಟ್ಟಿದೆ ಎಂದು ಕಿಡಿಕಾರಿದ್ದಾರೆ. ಕೇಂದ್ರ ಸರ್ಕಾರದ ಬಜೆಟ್ ನಿರಾಶಾದಾಯಕವಾಗಿದೆ. ಯಾವುದೇ ದೂರದೃಷ್ಟಿಯಿಲ್ಲದ ಬಜೆಟ್ ಇದು.ಇಂದು ಮಂಡಿಸಿರುವ ಬಜೆಟ್ ಬರೀ ಹೇಳಿಕೆಗಳಿಂದ ಕೂಡಿದೆ.ಪರಿಷ್ಕೃತ ಅಂದಾಜು ಗಾತ್ರ 49 ಲಕ್ಷ 64 ಸಾವಿರ ಕೋಟಿ. ಒಂದು ಲಕ್ಷ ಕೋಟಿಯಷ್ಟು ಪರಿಷ್ಕೃತ ಅಂದಾಜು ಕಡಿಮೆ. ಬೆಂಗಳೂರು–ಹೈದರಾಬಾದ್ ಹೈಸ್ಪೀಡ್ ರೈಲು ಘೋಷಣೆ ಮಾಡಿದ್ದಾರೆ. ಇದರಿಂದ ಕರ್ನಾಟಕಕ್ಕೆ ಏನು ಅನುಕೂಲ. ಮುಂದಿನ 5 ವರ್ಷಗಳಿಂದ ಯೋಜನೆ ಎಂದು ಹೇಳಿದ್ದಾರೆ ಅಷ್ಟೇ. ನಮಗೆ ಬೇಕಿರುವುದು ಬೆಂಗಳೂರು–ಮುಂಬೈ ಹೈಸ್ಪೀಡ್ ರೈಲು. ಬೆಂಗಳೂರು–ಮಂಗಳೂರಿಗೆ ಹೈಸ್ಪೀಡ್ ಬೇಕು. ಕೇಂದ್ರದವರು ವಿಕಸಿತ ಭಾರತ ಬಗ್ಗೆ ಬಹಳ ಮಾತನಾಡಿದ್ರು. ಆದರೆ ಅದು ಬರೀ ಮಾತಿನಲ್ಲಿದೆ, ಕೃತಿಯಾಗಿ ಅವರು ಮಾಡುತ್ತಿಲ್ಲ ಎಂದು ವಾಗ್ದಾಳಿ ನಡೆಸಿದರು.



ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

ಬಜೆಟ್‌ನಲ್ಲಿ ರಾಜ್ಯಕ್ಕೆ ಏನು ಇಲ್ಲ: ಕೇಂದ್ರದ ವಿರುದ್ಧ ಈಶ್ವರ್ ಖಂಡ್ರೆ ಕಿಡಿ

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿದ 2026–27ನೇ ಸಾಲಿನ ಬಜೆಟ್ ಕರ್ನಾಟಕದ ಪಾಲಿಗೆ ಸಂಪೂರ್ಣ ನಿರಾಶಾದಾಯಕವಾಗಿದೆ ಎಂದು ಅರಣ್ಯ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಕಟುವಾಗಿ ಟೀಕಿಸಿದ್ದಾರೆ. ಈ ಬಾರಿಯ ಬಜೆಟ್‌ನಲ್ಲಿ ಜನಸಾಮಾನ್ಯರ ಬದುಕಿನಲ್ಲಿ ಸುಧಾರಣೆ ತರುವ ಯಾವುದೇ ಅಂಶಗಳಿಲ್ಲ ಎಂದು ಅವರು ಸಚಿವ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಕಟ್ಟಡ ತೆರವು ಗೊಳಿಸಲು ಮುಂದಾದ ಅಧಿಕಾರಿಗಳ ವಿರುದ್ಧ ಪೆಟ್ರೋಲ್ ಸುರಿದು ಕೊಂಡು ಆತ್ಮಹತ್ಯೆಗೆ ಯತ್ನಿಸಿದ ದಲಿತ ಮಹಿಳೆ

ವರದಿ: ರಾಮಚಂದ್ರಯ್ಯ, ಹಿರಿಯ ವರದಿಗಾರರರು ಕುಣಿಗಲ್



ಕುಣಿಗಲ್ :ಗ್ರಾಮ ಪಂಚಾಯಿತಿ ಕಟ್ಟಡ ಇದ್ದ ಜಾಗದಲ್ಲಿ ಕಟ್ಟಡ ನಿರ್ಮಿಸಿದ್ದೀರಿ ಎಂದು ತೆರವು ಗೊಳಿಸಲು ಮುಂದಾದ ಅಧಿಕಾರಿಗಳ ವಿರುದ್ಧ ದಲಿತ ಮಹಿಳೆ ತೆರವನ್ನು ವಿರೋಧಿಸಿ ಪೆಟ್ರೋಲ್ ಸುರಿದುಕೊಂಡು ಆತ್ಮಹತ್ಯೆಗೆ ಯತ್ನಿಸಿದ ಘಟನೆ ನಡೆಯಿತು.

ತಾಲೂಕಿನ ಬಿಳಿದೇವಾಲಯ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೋರಲಿಂಗನ ಪಾಳ್ಯ ಗ್ರಾಮದಲ್ಲಿ ಈ ಹಿಂದೆ ಗ್ರಾಮ ಪಂಚಾಯಿತಿ ಕಟ್ಟಡಕ್ಕೆ ನಿವೇಶನ ಇಲ್ಲದೇ ಇದ್ದುದ್ದರಿಂದ ದಲಿತರಕೇರಿಗೆ ಮೀಸಲಿದ್ದ ಜಾಗದಲ್ಲಿ ಪಂಚಾಯಿತಿ ಕಟ್ಟಡವನ್ನು ತಾತ್ಕಾಲಿಕವಾಗಿ ನಿರ್ಮಿಸಿಕೊಂಡಿದ್ದರು.ಸ್ವಂತ ನಿವೇಶನದಲ್ಲಿ ಗ್ರಾಮ ಪಂಚಾಯಿತಿ ಕಟ್ಟಡ ನಿರ್ಮಿಸಿಕೊಂಡು ಈ ಹಿಂದೆ ಇದ್ದ ಕಟ್ಟಡವನ್ನ ಪಂಚಾಯಿತಿಯವರು ತೆರವು ಗೊಳಿಸಿದ ಹಿನ್ನಲೆಯಲ್ಲಿ ಆ ಜಾಗದಲ್ಲಿ ವಾಸವಿದ್ದ ದಲಿತ ಜನಾಂಗದ ಕುಟುಂಬವು ತಲಾಂತರದಿಂದ ದಲಿತ ಕುಟುಂಬಗಳಿಗೆ ಸೇರಿದ ನಿವೇಶನದಲ್ಲಿ ಅಕ್ರಮವಾಗಿ ಪಂಚಾಯಿತಿ ಕಟ್ಟಡ ನಿರ್ಮಿಸಿ ಖಾತೆ ಮಾಡಿಕೊಂಡಿದ್ದು ಪಂಚಾಯಿತಿ ಕಟ್ಟಡವನ್ನು ತೆರವುಗೊಳಿಸಿದ ಹಿನ್ನಲೆಯಲ್ಲಿ ಕಟ್ಟಡ ನಿರ್ಮಿಸಿಕೊಂಡು ಸುಮಾರು ವರ್ಷಗಳಿಂದಲೂ ಅನುಭವಿಸುತ್ತಾ ಬಂದಿದ್ದಾರೆ ಅಂಗಡಿ ಮಳಿಗೆಗಳನ್ನು ನಿರ್ಮಿಸಿಕೊಂಡು ಕೂಲಿ ನಾಲಿ ಮಾಡುವ ದಲಿತರ ಜೀವನ ಮಾಡುತ್ತಿದ್ದರು ಸವರ್ಣಿಯ ಸದಸ್ಯರು ಹೇಗಾದರೂ ಮಾಡಿ ಹಳೆಯ ಪಂಚಾಯಿತಿ ಕಟ್ಟಡವನ್ನು ದಲಿತರಿಂದ ತೆರವುಗೊಳಿಸಲು ಇಲ್ಲಸಲ್ಲದ ಆರೋಪ ಮತ್ತು ದಾಖಲೆಗಳನ್ನು ಸೃಷ್ಟಿಸಿಕೊಂಡು ಈಗಾಗಲೇ ಅನೇಕ ಬಾರಿ ಪ್ರಯತ್ನಿಸಿದರು ಸಹ ತೆರವುಗೊಳಿಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಇಂದು ಯಾವುದೇ ನೋಟಿಸು ಜಾರಿ ಮಾಡದೆ ಪೊಲೀಸ್ ಅಧಿಕಾರಿಗಳನ್ನು ಕರೆತಂದು ಪಂಚಾಯಿತಿಯ ಪಿಡಿಒ ದಿಲೀಪ್ ಹಾಗೂ ತಾಲೂಕು ಪಂಚಾಯಿತಿಯ ಕಾರ್ಯ ನಿರ್ವಹಣಾಧಿಕಾರಿ ವಸಂತ ಕುಮಾರ್ ನೇತೃತ್ವದಲ್ಲಿ ತೆರವುಗೊಳಿಸಲು ಮುಂದಾದಾಗ ದಲಿತರು ಮತ್ತು ಅಧಿಕಾರಿಗಳ ನಡುವೆ ಮಾತಿನ ಚಕಮಕಿ ನಡೆದು ಈ ಪ್ರದೇಶದಲ್ಲಿರುವ ಅಕ್ರಮ ನಿವೇಶನಗಳಿಗೆ ಪಂಚಾಯಿತಿ ಸವರ್ಣಿಯ ಜನಾಂಗಕ್ಕೆ ಖಾತೆ ಮಾಡಿಕೊಟ್ಟು ದಲಿತ ಜನಾಂಗವದವರ ಕಟ್ಟಡಗಳನ್ನು ತೆರುಗೊಳಿಸಲು ಮುಂದಾಗಿರುವ ಕ್ರಮವನ್ನ ತೀವ್ರವಾಗಿ ಖಂಡಿಸುತ್ತಾ ತಮಗೆ ಇಲ್ಲಿಯವರೆಗೂ ಸರ್ಕಾರದಿಂದಾಗಲಿ ಅಥವಾ ಸಂಬಂಧಪಟ್ಟವರಿಂದಾಗಲಿ ನೋಟಿಸು ಜಾರಿಯಾಗಿರುವುದಿಲ್ಲ ಆದರೂ ಸಹ ಪೊಲೀಸ್ ಡಿ ವೈ ಎಸ್ ಪಿ ಓಂ ಪ್ರಕಾಶ್ ಪೊಲೀಸ್ ನಿರೀಕ್ಷಕರಾದ ಎಂ ನಾಯಕ್ ಇವರ ಸಮ್ಮುಖದಲ್ಲಿ ದೌರ್ಜನ್ಯ ದಬ್ಬಾಳಿಕೆಯಿಂದ ನೋಟಿಸು ಜಾರಿ ಮಾಡದೆ ದಲಿತರಿಗೆ ಸವರ್ಣಿಯರ ಸದಸ್ಯರ ಒತ್ತಡದಿಂದ ತೆರವುಗೊಳಿಸಲು ಮುಂದಾಗಿ ಅಂಗಡಿ ಮಳಿಗೆಗಳಿಗೆ ಬೀಗ ಜಡಿದಿರುವ ಕ್ರಮವು ತೀವ್ರ ಖಂಡನೀಯವಾದದ್ದು ಎಂದು ದಲಿತ ಜನಾಂಗದ ಗಂಗಾ, ಕರಿಯಪ್ಪ,ಲಂಕೇಶ್ ಆಕ್ರೋಶ ವ್ಯಕ್ತಪಡಿಸಿದ್ದ ದಲಿತ ಕುಟುಂಬಗಳು ಅಧಿಕಾರಿಗಳ ಸಮ್ಮುಖದಲ್ಲಿ ಪೆಟ್ರೋಲ್ ಸುರಿದುಕೊಂಡು ಆತ್ಮಹತ್ಯೆಗೆ ಯತ್ನಿಸಿದ ಘಟನೆಯು ಜರಗಿತು ಜಿಲ್ಲಾ ಗೃಹ ಸಚಿವರ ತವರು ಜಿಲ್ಲೆಯಲ್ಲಿ ಇಂತಹ ಘಟನೆಗಳು ಪದೇಪದೇ ನಡೆಯುತ್ತಿದ್ದರೂ ಸಚಿವರು ದಲಿತರ ರಕ್ಷಣೆಗೆ ಬಾರದೆ ಮೂಕ ಪ್ರೇಕ್ಷಕರಾಗಿರುವುದು ಈ ಜಿಲ್ಲೆಯ ದಲಿತರ ದುರಂತವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸುತ್ತಾ ಈಗಾಗಲೇ ಈ ಜಾಗದಲ್ಲಿ ಅಕ್ರಮವಾಗಿ ಸವರ್ಣೀಯರು ಹತ್ತಾರು ಅಂಗಡಿಗಳನ್ನು ನಿರ್ಮಿಸಿಕೊಂಡು ಜೀವನಗಳನ್ನ ನಿರ್ವಹಿಸಿಕೊಳ್ಳುತ್ತಿದ್ದರು ಸಹ ಅವುಗಳನ್ನು ತೆರವುಗೊಳಿಸುವ ಗೋಜಿಗೆ ಹೋಗದೆ ಕೇವಲ ದಲಿತರ ಅಂಗಡಿಗಳನ್ನ ತೆರವುಗೊಳಿಸಲು ಮುಂದಾದ ಪಂಚಾಯಿತಿ ಅಧಿಕಾರಿಗಳು ಸವರ್ಣೀಯರ ಸದಸ್ಯರ ಕುಮ್ಮಕ್ಕಿನಿಂದ ಇಂತಹ ದೌರ್ಜನ್ಯಗಳನು ದಬ್ಬಾಳಿಕೆಗಳು ನಡೆಯುತ್ತಿದಾರೆ ಎಂದು ನೊಂದ ದಲಿತ ಕುಟುಂಬಗಳು ಆಕ್ರೋಶ ವ್ಯಕ್ತಪಡಿಸಿದವು. ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿಯ ಕಾರ್ಯನಿರ್ವಾಹಣಾಧಿಕಾರಿ ವಸಂತ್ ಕುಮಾರ್,ಪಿಡಿಒ ದಿಲೀಪ್, ಪೋಲಿಸ್ ಡಿ ಎಸ್ ಪಿ ಓಂ ಪ್ರಕಾಶ್, ಪೊಲೀಸು ನಿರೀಕ್ಷಕರಾದ ಎಮ್ ನಾಯಕ್ ಇವರ ಮೇಲೆ ಕಾನೂನು ಕ್ರಮ ಜರುಗಿಸಿ ನ್ಯಾಯ ದೊರಕಿಸಿ ಕೊಡಬೇಕೆಂದು ನೊಂದ ಮಹಿಳೆಯರು ಅಗ್ರಪಡಿಸಿರುತ್ತಾರೆ. ನಮಗೆ ನ್ಯಾಯ ಸಿಗದಿದ್ದರೆ ಜಿಲ್ಲಾಧಿಕಾರಿ ಕಚೇರಿ ಹಾಗೂ ತಾಲೂಕು ಪಂಚಾಯಿತಿ ಕಚೇರಿಯ ಮುಂದೆ ಅನ್ನ ನೀರು ಬಿಟ್ಟು ಉಪವಾಸ ಪ್ರತಿಭಟನೆ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು.



ನೂತವಾಗಿ ತುಮಕೂರು ಜಿಲ್ಲಾ ಖಾಸಗೀ ಶಾಲಾ ಆಡಳಿತ ಮಂಡಳಿಗಳ ಒಕ್ಕೂಟದ ಅಧ್ಯಕ್ಷರಾದ ಶ್ರೀ ಎನ್. ಬಿ.ಪ್ರದೀಪ್ ಕುಮಾರ್ ರವರನ್ನು ಖಾಸಗೀ ಶಾಲಾ ಶಿಕ್ಷಕರ ಸಂಘದ ವತಿಯಿಂದ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷ ನಟರಾಜು, ಅಧ್ಯಕ್ಷ ಭೂತರಾಜು, ಪ್ರಧಾನಕಾರ್ಯದರ್ಶಿ ಎಂ.ಕೆ. ರಂಗನಾಥ, ಮುಖ್ಯಶಿಕ್ಷಕರಾದ ರಾಮಣ್ಣ, ಎ.ಎನ್.ಪೀರ್, ಅಣ್ಣಾ ಸ್ವಾಮಿ ಮುಂತಾದವರಿದ್ದರು.



ಕೊರಟಗೆರೆ ತಾಲ್ಲೂಕು ಸಿದ್ಧರಬೆಟ್ಟದ ರಂಭಾಪುರಿ ಶಾಖಾ ಮಠದಲ್ಲಿ ಭಾನುವಾರ ನಡೆದ 231ನೇ ಬೆಳದಿಂಗಳ ಕೂಟ ಹಾಗೂ ಜನ ಜಾಗೃತಿ ಸಮಾರಂಭವನ್ನು ಶಿವಗಂಗೆಯ ಮಹಾಲಕ್ಷ್ಮೀ ಪೀಠದಜಗದ್ಗುರುಜ್ಞಾನಾನಂದಪುರಿ ಸ್ವಾಮೀಜಿ ಉದ್ಘಾಟಿಸಿದರು. ಸಿದ್ಧಬೆಟ್ಟ ಮಠದ ವೀರಭದ್ರ ಶಿವಾಚಾರ್ಯ ಸ್ವಾಮೀಜಿ, ಎನ್.ಸಿ.ಗಂಗಾಧರ ಶಾಸ್ತ್ರಿ, ಸುಮಂಗಳಮ್ಮ, ವೈ.ಸಿ.ಪಂಚಾಕ್ಷರಯ್ಯ, ದೇವಿಕಾ, ರೇಣುಕಾರಾಧ್ಯ, ನಾಗರತ್ನರಾಮಯ್ಯ, ಮುಖಂಡ ಎಂ.ಜಿ.ಶ್ರೀನಿವಾಸಮೂರ್ತಿ ಭಾಗವಹಿಸಿದ್ದರು. ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಅನು ಶಾಂತರಾಜುಅವರನ್ನು ಶ್ರೀಮಠದಿಂದ ಸನ್ಮಾನಿಸಿ ಗೌರವಿಸಲಾಯಿತು.

ಮಾದಾರ ಮಹಾಸಭಾ ಕಸಬ ಹೋಬಳಿ ಅಧ್ಯಕ್ಷರಾಗಿ ಮಡೇನಹಳ್ಳಿ ದೇವರಾಜ್ ಆಯ್ಕೆ



ಗುಬ್ಬಿ: ಮಾದಿಗ ಸಮುದಾಯದ ಸಂಘಟನೆ ಬೆಳೆಸುವ ಉದ್ದೇಶದಲ್ಲಿ ಮಾದಾರ ಮಹಾಸಭಾ ತಾಲ್ಲೂಕು ಘಟಕ ನಡೆಸಿರುವ ಹೋಬಳಿ ಸಂಘಟನೆಯ ಕಾರ್ಯದಲ್ಲಿ ಕಸಬ ಹೋಬಳಿ ಅಧ್ಯಕ್ಷರಾಗಿ ಮಡೇನಹಳ್ಳಿ ದೇವರಾಜ್ ಉಪಾಧ್ಯಕ್ಷರಾಗಿ ವಿದ್ಯಾಸಾಗರ್ ಅವಿರೋಧ ಆಯ್ಕೆಯಾದರು.

ತಾಲ್ಲೂಕಿನ ಕಸಬ ಹೋಬಳಿ ಬಿಕ್ಕೆಗುಡ್ಡ ಗ್ರಾಮದಲ್ಲಿ ನಡೆದ ಸಭೆಯ ಅಧ್ಯಕ್ಷತೆಯನ್ನು ಮಾದಾರ ಮಹಾಸಭಾ ತಾಲ್ಲೂಕು ಅಧ್ಯಕ್ಷ ಕೊಡಿಯಾಲ ಮಹದೇವು ವಹಿಸಿ ಕಸಬ ಹೋಬಳಿ ಮಟ್ಟದ ಶಾಖೆಯನ್ನು ರಚಿಸಲು ಚರ್ಚೆ ನಡೆಸಿದರು. ಅಂತಿಮವಾಗಿ ಎಲ್ಲಾ ಪದಾಧಿಕಾರಿಗಳು ಆಯ್ಕೆ ಅವಿರೋಧವಾಗಿ ನಡೆಯಿತು.

ಅಧ್ಯಕ್ಷ ಕೊಡಿಯಾಲ ಮಹದೇವು ಮಾತನಾಡಿ ರಾಜ್ಯದಲ್ಲಿ ಬಹುಸಂಖ್ಯೆಯ ಮಾದಿಗ ಸಮುದಾಯ ಸಾಮಾಜಿಕ ಶೈಕ್ಷಣಿಕ ವಲಯದಲ್ಲಿ ಹಿಂದೆ ಸರಿದಿದೆ. ಸಮಾಜದ ಮುಖ್ಯವಾಹಿನಿಗೆ ಬರಬೇಕಾದ ನಮ್ಮ ಸಮುದಾಯ ಕೇವಲ ಮತ ಬ್ಯಾಂಕ್ ಆಗುತ್ತಿವೆ. ಈ ಹಿನ್ನಲೆ ಗ್ರಾಮೀಣ ಭಾಗದಲ್ಲಿ ಮಾದಿಗ ಸಮುದಾಯವನ್ನು ಜಾಗೃತಿಗೊಳಿಸಿ ಸಾಮಾಜಿಕ ಕ್ಷೇತ್ರದಲ್ಲಿ ಮೇಲುಗೈ ಸಾಧಿಸಲು ಪ್ರಜ್ಞಾವಂತ ಯುವಕರ ಸಂಘಟನೆ ನಡೆಸಿದ್ದೇವೆ. ಈ ಕಾರ್ಯಕ್ಕೆ ಕಸಬ ಹೋಬಳಿ ಶಾಖೆ ಯುವ ಪದಾಧಿಕಾರಿಗಳನ್ನು ಆಯ್ಕೆ ಮಾಡಿದ್ದೇವೆ. ಎಲ್ಲರೂ ಒಗ್ಗೂಡಿ ನಮ್ಮ ಸಮಾಜವನ್ನು ಮೇಲೆತ್ತುವ ಕೆಲಸ ಮಾಡಿ ಎಂದು ಕರೆ ನೀಡಿದರು.

ಹಿರಿಯ ಉಪಾಧ್ಯಕ್ಷ ಪಾಂಡುರಂಗಯ್ಯ ಮಾತನಾಡಿ ಮಾದಾರ ಮಹಾಸಭಾ ನಮ್ಮ ಜನಾಂಗದ ಉನ್ನತಿಗೆ ಶ್ರಮಿಸಲಿದೆ.ಸಚಿವಮುನಿಯಪ್ಪಅವರಮಾರ್ಗದರ್ಶನದಲ್ಲಿ ಎಲ್ಲಾ ಪಕ್ಷದ ನಮ್ಮ ಜನಾಂಗದ ಮುಖಂಡರನ್ನು ಒಗ್ಗೂಡಿಸಿ ಸಭಾ ಚಟುವಟಿಕೆ ಆರಂಭಿಸಿದ್ದಾರೆ. ನಮ್ಮ ಶಕ್ತಿ ಒಗ್ಗಟ್ಟು ಪ್ರದರ್ಶನ ಮಾಡಿ ನಮ್ಮಲ್ಲೇ ಇರುವ ಬಡವರನ್ನು ನಮ್ಮ ಜೊತೆ ಮೇಲೆತ್ತುವ ಕೆಲಸ ಮಾಡಬೇಕಿದೆ. 500 ರೂಗಳ ನೋಂದಣಿ ಶುಲ್ಕ ನೇರ ಮಹಾಸಭಾ ಖಾತೆಗೆ ಜಮಾ ಆಗಲಿದೆ. ಆನ್ ಲೈನ್ ಮೂಲಕ ಸದಸ್ಯತ್ವ ನೋಂದಣಿ ಜೊತೆಗೆ ನಿಮ್ಮ ಮೊಬೈಲ್ ಗೆ ರಸೀದಿ ಬರುತ್ತದೆ. ಇಲ್ಲಿ ಯಾವ ಗೊಂದಲವಿಲ್ಲ. ಎಲ್ಲರೂ ಒಗ್ಗೂಡಿ ಸಮಾಜವನ್ನು ಮುಖ್ಯವಾಹಿನಿಗೆ ತರೋಣ ಎಂದರು.

ಕಸಬ ಹೋಬಳಿಯ ಅಧ್ಯಕ್ಷರಾಗಿ ಮಡೇನಹಳ್ಳಿ ದೇವರಾಜ್, ಉಪಾಧ್ಯಕ್ಷರಾಗಿ ವಿದ್ಯಾಸಾಗರ್, ಕಾರ್ಯದರ್ಶಿಯಾಗಿ ಕಾಳೇನಹಳ್ಳಿ ಮಾದೇಶ್, ಸಂಘಟನಾ ಕಾರ್ಯದರ್ಶಿಯಾಗಿ ಚಿಕ್ಕೋನಹಳ್ಳಿ ಪಾಳ್ಯ ನರಸಿಂಹಮೂರ್ತಿ, ಖಜಾಂಚಿಯಾಗಿ ಎಸ್.ಕೊಡಗಿಹಳ್ಳಿ ಚಂದ್ರಣ್ಣ, ಕಾರ್ಯಕಾರಿ ಸಮಿತಿಯಲ್ಲಿ ತಮ್ಮಯ್ಯ, ಕೃಷ್ಣಮೂರ್ತಿ, ಶಿವಶಂಕರ್ ಹಾಗೂ ಪೋಷಕರ ಸಮಿತಿಗೆ ದೊಡ್ಡಯ್ಯ, ಕೃಷ್ಣಮೂರ್ತಿ, ನಂಜುಂಡಯ್ಯ, ಬಸವರಾಜ್, ಪ್ರದೀಪ್, ಹೊಸಹಳ್ಳಿ ಕೃಷ್ಣಮೂರ್ತಿ, ರಮೇಶ್, ಕೃಷ್ಣಮೂರ್ತಿ, ಶಿವನಾಗ ನೇಮಕ ಮಾಡಲಾಯಿತು.

ಸಭೆಯಲ್ಲಿ ಆನಂದ್, ಬಿಕ್ಕೆಗುಡ್ಡ ಕೃಷ್ಣಪ್ಪ, ಚೇಳೂರು ಶಿವನಂಜಪ್ಪ, ಜಿ.ವಿ.ಮಂಜುನಾಥ್, ಫಣೀಂದ್ರ, ಶ್ರೀಧರ್, ರವೀಶ್ ಇತರರು ಇದ್ದರು .

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ:
9901010109

12 ನೇ ಶತಮಾನದ ವಚನಗಳ ರಕ್ಷಕ ಮಡಿವಾಳ ಮಾಚಿದೇವ ನಡೆದಂತೆ ನುಡಿದ ಶರಣ



ಕೊರಟಗೆರೆ:–ಜ್ಞಾನ ಜ್ಯೋತಿಯಿಂದ ಲೋಕವನ್ನ ಬೆಳಗಿಸಿದ ಮಾಚಯ್ಯ ನುಡಿದಂತೆ ನಡೆದ, ನಡೆದಂತೆ ನುಡಿದ ಶರಣರಲ್ಲಿ ಒಬ್ಬರು. ಎಲ್ಲರೂ ಸಮಾನರು, ಎಲ್ಲರಿಗೂ ಸಮಾನ ಅಧಿಕಾರವಿದೆ ಎಂದು ಸಾರಿದ ಮಹಾನೀಯರನ್ನ ಸ್ಮರಿಸಬೇಕಿದೆ ಎಂದು ಗ್ರೇಟ್ 2 ತಹಸೀಲ್ದಾರ್ ರಾಮ್ ಪ್ರಸಾದ್ ತಿಳಿಸಿದರು.

ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ತಾಲೂಕು ಆಡಳಿತ ವತಿಯಿಂದ ಮಡಿವಾಳ ಮಾಚಿದೇವರ ಅವರ 926 ನೇ ಜಯಂತಿ ಕಾರ್ಯಕ್ರಮದಲ್ಲಿ ಮಾಚಿದೇವ ಮೂರ್ತಿಗೆ ಪುಷ್ಪಾರ್ಚನೆ ಮಾಡುವುದರ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.


ಮಡಿವಾಳ ಕುಲದಲ್ಲಿ ಹುಟ್ಟಿದ್ದರೂ ಮಾಚಯ್ಯ ಉತ್ತಮ ಶಿಕ್ಷಣ ಮತ್ತು ಶರಣರ ಸಂಪರ್ಕದಿಂದ ಮಹಾ ಪುರುಷರಾದರು. ಎಲ್ಲ ಶರಣರು ಮಾಚಯ್ಯನನ್ನು 'ಮಾಚಿ ತಂದೆ' ಎಂದು ಕರೆದಿದ್ದಾರೆ. ಅನುಭವ ಮಂಟಪ ನಿರ್ಮಾಣದ ಕಾರ್ಯದಲ್ಲಿ ಮಾಚಯ್ಯನವರ ಪಾತ್ರ ದೊಡ್ಡದು. ವಚನಗಳನ್ನು ರಚಿಸಿ ಮಾನವ ಕುಲಕ್ಕೆ ಸಾಕಷ್ಟು ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.ತಾಲೂಕಿನ ಮಡಿವಾಳ ಮಾಚಿದೇವ ಸಂಘದ ಅಧ್ಯಕ್ಷ ರುದ್ರೇಶ್ ಮಾತನಾಡಿ ನಮ್ಮ ಕುಲ ಗುರುಗಳಾದ ಶ್ರೀ ಮಾಚಯ್ಯ ನವರುಕ್ರಿ.ಶ. 1120ರಿಂದ 1130ರ ಅವಧಿಯಲ್ಲಿ ವಿಜಯಪುರ ಜಿಲ್ಲೆಯ ಸಿಂದಗಿ ತಾಲೂಕಿನ ಹಿಪ್ಪರಗಿ ಗ್ರಾಮದಲ್ಲಿ ಜನಿಸಿದರು. ಪರ್ವತಯ್ಯ ಹಾಗೂ ಸುಜ್ಞಾನಾಂಬೆ ದಂಪತಿಗೆ ಜನಿಸಿದರು .ಕುಲದೈವ ಕಲಿದೇವರನ್ನು ಆರಾಧಿಸಿ ಸ್ಪೂರ್ತಿಯಾದರು ಎಂದರು. ಬಸವಣ್ಣ ನೇತೃತ್ವದಲ್ಲಿ ಶರಣರ ಆಂದೋಲನ ಪ್ರಾರಂಭವಾಗಿತ್ತು. ಬಸವಣ್ಣನವರ ಭಕ್ತಿ, ಕಾಯಕ ತತ್ವ, ದಾಸೋಹ, ಗುರು ಲಿಂಗ ಮತ್ತು ಜಂಗಮ ಸೇವೆಗಳು ಎಲ್ಲ ಕಡೆಗೂ ಪ್ರಖ್ಯಾತವಾಗಿದ್ದವು. ಈ ವಿಚಾರ ತಿಳಿದು ಮಾಚಯ್ಯ, ಕಲಿದೇವರ ಗುರುಗಳ ಅಪ್ಪಣೆ ಪಡೆದು ಕಲ್ಯಾಣದೆಡೆಗೆ ಸಾಗಿದರು. ಕಲ್ಯಾಣಕ್ಕೆ ಬಂದ ಮೇಲೆ ಮಾಚಿದೇವ ಕಾಯಕವನ್ನು ಮುಂದುವರಿಸಿದರು. ಮೊದಲಿನಿಂದಲೂ ಸೂರ್ಯ ಹುಟ್ಟುವ ಮುನ್ನ ಎದ್ದು ತಮ್ಮ ಕಾರ್ಯ ಆರಂಭಿಸುತ್ತಿದ್ದರು. ಶುದ್ಧ ಶಿವ ಭಕ್ತರ ಕಾಯಕದಲ್ಲಿ ನಿಷ್ಠೆ ಉಳ್ಳವರ ಬಟ್ಟೆಗಳನ್ನು ಮಾತ್ರ ಮಡಿ ಮಾಡುತ್ತಿದ್ದರು ಎಂದು ತಿಳಿಸಿದರು.

ಗ್ರಾ.ಪಂ ಉಪಾಧ್ಯಕ್ಷೆ ವೇದವತಿ ಮಾತನಾಡಿ ನಮ್ಮ ಸಮುದಾಯವು ಬಹಳ ಹಿಂದುಳಿದ ವರ್ಗಕ್ಕೆ ಸೇರಿದ ಸಮುದಾಯ. ಈ ಬಾರಿ ತಾಲೂಕಿನ ಎಲ್ಲ ಗ್ರಾಪಂ ಯಲ್ಲಿ ಮಾಚಿದೇವ ಜಯಂತಿ ಆಚಾರಣೆ ಮಾಡುತ್ತಿರುವುದು ಸಂತಸದ ವಿಚಾರ. ಪ್ರತಿ ವರ್ಷವೂ ನಾವು ಹಿಂದುಳಿದ ವರ್ಗದವರು ನಮ್ಮ ಜನಾಂಗದವರನ್ನು ಪರಿಶಿಷ್ಟ ಜಾತಿಯ ಪಟ್ಟಿಗೆ ಸೇರಿಬೇಕೆಂದು ಸಾಕಷ್ಟು ಹೋರಾಟ ಮಾಡಿದ್ದೇವೆ. ಸರ್ಕಾರವು ಆಶ್ವಾಸನೆ ನೀಡಿ ಕೊಂಡು ಬರುತ್ತಿದೆ. ಈಗಾಗಲೇ ಸಾಕಷ್ಟು ರಾಜ್ಯಗಳಲ್ಲಿ ನಮ್ಮ ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿವೆಎಂದು ಹೇಳಿದರು.

ಈ ಸಂದರ್ಭದಲ್ಲಿ ಮಡಿವಾಳ ಮಾಚಿದೇವ ಸಂಘದ ಗೌರವಾಧ್ಯಕ್ಷ ವೆಂಕಟ ಚಲಪತಿ ಉಪಾಧ್ಯಕ್ಷ ಹನುಮಂತ್ರಾಯಪ್ಪ ಕಾರ್ಯದರ್ಶಿ ಆನಂದ ಯುವ ಮಡಿವಾಳ ಸಂಘದ ಪದಾಧಿಕಾರಿಗಳಾದ ಶರತ್ ಹಾಗೂ ಪಾಂಡುವರ್ಧನ್ ಸೇರಿದಂತೆ ತಾಲೂಕು ಮಟ್ಟದಅಧಿಕಾರಿಗಳು ಇದ್ದರು.

ಧಗ ಧಗನೇ ಹೊತ್ತಿ ಉರಿದ ಬೆಲೆ ಬಾಳುವ ಗಿಡ ಮರಗಳು

ವರದಿ: ಗುಬ್ಬಿ ಭರತ್



ಗುಬ್ಬಿ : ತಾಲ್ಲೂಕಿನ ನಿಟ್ಟೂರು ಮೂಲಕ ಮೈಸೂರು ಕಡೆಗೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಬರುವ ಬೆಲವತ್ತ ಬಳಿಯ ಹಾರನಹಳ್ಳಿ ಮತ್ತು ನರಸೀಪುರ ಮುಖ್ಯರಸ್ತೆಗೆ ಹೊಂದಿಕೊಂಡಿರುವ ಗೋಮಾಳ ಪ್ರದೇಶದಲ್ಲಿ ಬೆಂಕಿ ಕಾಣಿಸಿಕೊಂಡ ಹಿನ್ನಲೆ ಗೋಮಾಳದಲ್ಲಿದ್ದ ಬೆಲೆ ಬಾಳುವ ತೇಗ, ಅರ್ಕ್ಯುಲೆಸ್, ಹೊನ್ನೆ ಮರಗಳು ಸಂಪೂರ್ಣ ಭಸ್ಮವಾಗಿದೆ. ತಡರಾತ್ರಿ ಕಿಡಿಗೇಡಿಗಳು ಈ ದುಷ್ಕೃತ್ಯ ಮಾಡಿರುವ ಶಂಕೆ ಸ್ಥಳೀಯರಲ್ಲಿ ಮೂಡಿದೆ. ಬೆಂಕಿಯ ಕೆನ್ನಾಲಿಗೆಗೆ ಬಲಿಯಾದ ಸಾವಿರಾರು ಮರಗಿಡಗಳು ಕ್ಷಣಾರ್ಧದಲ್ಲಿ ದಗದಗನೆ ಹೊತ್ತಿ ಉರಿದ ಘಟನೆ ನಡೆದಿದೆ. ಜೊತೆಯಲ್ಲಿ ಮರಗಳನ್ನು ಅಲಂಬಿಸಿದ್ದ ಪ್ರಾಣಿಪಕ್ಷಿಗಳ ಆಕ್ರಂದನ ಮುಗಿಲು ಮುಟ್ಟಿತ್ತು.

ಬೆಲವತ್ತ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಸರ್ವೆ ನಂಬರ್ 61ರ ಪೈಕಿ ಈಗಾಗಲೇ ಹಲವು ರೈತರಿಗೆ ಭೂಮಿ ನೀಡಲಾಗಿದ್ದು ಉಳಿಕೆ ಜಾಗದಲ್ಲಿ ಅರಣ್ಯ ಪ್ರದೇಶವಿದ್ದು ಯಾರೋ ಕಿಡಿಗೇಡಿಗಳು ಬೇಕಂತಲೇ ಈ ಪ್ರದೇಶಕ್ಕೆ ಬೆಂಕಿ ಇಟ್ಟಿದ್ದಾರೆ ಎಂಬ ಅನುಮಾನ ವ್ಯಕ್ತವಾಗಿದೆ. ರಾತ್ರಿ ರಸ್ತೆಯಲ್ಲಿ ಸಾಗುತ್ತಿದ್ದ ವ್ಯಕ್ತಿಯೊಬ್ಬ ವಿಡಿಯೋ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಈ ಘಟನೆಯನ್ನು ಹಂಚಿಕೊಂಡಿದ್ದಾರೆ.

ಶಿಸ್ತನ್ನು ಅಳವಡಿಸಿಕೊಂಡಾಗ ಮಾತ್ರ ಜೀವನದಲ್ಲಿ ಯಶಸ್ಸು




ತುಮಕೂರು: ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತನ್ನು ಅಳವಡಿಸಿಕೊಂಡು ನಿಮ್ಮ ಗಮ್ಯದ ಕಡೆಗೆ ಹೆಜ್ಜೆಹಾಕಿದಾಗ ಜೀವನದಲ್ಲಿ ಯಶಸ್ಸನ್ನು ಪಡೆಯಬಹುದು ಎಂದು ಸಾಹೇ ವಿಶ್ವ ವಿದ್ಯಾನಿಲಯದ ಉಪಕುಲಪತಿಗಳಾದ ಡಾ. ಕೆ.ಬಿ. ಲಿಂಗೇಗೌಡ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ನಗರದ ಶ್ರೀ ಸಿದ್ಧಾರ್ಥ ತಾಂತ್ರಿಕ ಮಹಾವಿದ್ಯಾಲಯದ ಜೆಪಿ ನೆಕ್ಸಾಸ್ ನಲ್ಲಿ ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ ಇಂಜಿನಿಯರಿಂಗ್ ವಿಭಾಗದಿಂದ ಆಯೋಜಿಸಿದ್ದ ವಿದ್ಯಾರ್ಥಿಗಳಿಗಾಗಿ 15 ದಿನಗಳ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳು ತಂದೆ ತಾಯಿಗಳ ಆಶೋತ್ತರಗಳನ್ನು ಇಡೇರಿಸಿ ತಂದೆ ತಾಯಿಗಳ ನಂಬಿಕೆಯನ್ನು ಉಳಿಸಿಕೊಳ್ಳಿ. ವಿದ್ಯಾರ್ಥಿಗಳು ಕಲಿಯುವ ಹಂತದಲ್ಲೇ ನಿಮ್ಮ ಕೌಶಲ್ಯವನ್ನು ಹೆಚ್ಚಿಸಿಕೊಂಡು ಆತ್ಮ ವಿಶ್ವಾಸದಿಂದ ಸ್ಪರ್ಧೆಗೆ ಇಳಿಯಿರಿ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ನಂತರ ಮಾತನಾಡಿ ಬ್ಲೂ ವೋಲ್ಟ್ ಸಂಸ್ಥೆಯ ಮ್ಯಾನೇಜಿಂಗ್ ಡೈರೆಕ್ಟರ್ ನಾಗರಾಜು ಮಾತನಾಡಿ ವಿದ್ಯಾರ್ಥಿಗಳಿಗೆ ಕೌಶಲ್ಯ ಬಹಳ ಅಗತ್ಯವಾಗಿದೆ. ನಾವು ಕಲಿತಿರುವ ಕೌಶಲ್ಯ ನಮ್ಮ ಜೀವನವನ್ನು ಉತ್ತಮ ಗೊಳಿಸುತ್ತದೆ. ತಾಂತ್ರಿಕವಾಗಿ ನುರಿತರಾಗಿದ್ದರೆ ಡಿಪ್ಲೊಮೊ ವಿದ್ಯಾರ್ಥಿಗಳು ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗಿಂತ ಕಡಿಮೆ ಇರುವುದಿಲ್ಲ. ವಿದ್ಯಾರ್ಥಿಗಳು ಆತ್ಮ ವಿಶ್ವಾಸದಿಂದ ಸವಾಲುಗಳನ್ನು ಎದುರಿಸಬೇಕು. ಪ್ರತಿನಿತ್ಯ ಏನಾದರೊಂದನ್ನು ಕಲಿಯುವಂತಹ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಬ್ಲೂವೋಲ್ಟ್ ಸಂಸ್ಥೆ ಎಸ್ಎಸ್ಐಟಿ ಕಾಲೇಜಿನ ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ ವಿಭಾಗದೊಂದಿಗೆ ಒಡಂಬಡಿಕೆಯನ್ನು ಮಾಡಿಕೊಳ್ಳಲಾಯಿತು.

ಈ ಕಾರ್ಯಕ್ರಮದಲ್ಲಿ ಎಸ್ ಎಸ್ ಐಟಿ ಕಾಲೇಜಿನ ಪಾಂಶುಪಾಲರಾದ ಡಾ. ಮಹಾಂತೇಶ್ ಎಂ. ನಡಕಟ್ಟಿ, ಸಾಹೇ ವಿ.ವಿ.ಯ ಕುಲಾಧಿಪತಿಗಳ ಸಲಹೆಗಾರರಾದ ಡಾ. ವಿವೇಕ್ ವೀರಯ್ಯ, ಅಕಾಡೆಮಿಕ್ ಡೀನ್ ಡಾ. ಎಸ್ ರೇಣುಕಲತಾ, ಮುಖ್ಯಸ್ಥರಾದ, ಡಾ. ಪ್ರವೀಣ್, ಸಹಾಯಕ ಪ್ರಾಧ್ಯಾಪಕರಾದ ಡಾ. ಯೋಗಾನಂದ್, ಡಾ. ವೇಣುಗೋಪಾಲ್ ಡಾ. ಹರೀಶ್ ಹಾಗೂ ಡಿಪ್ಲೊಮೊ ವಿದ್ಯಾರ್ಥಿಗಳು ಹಾಜರಿದ್ದರು.

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆ ನದಿ ಜೋಡಣೆ ಬಗ್ಗೆ ವಿಶೇಷ ಅಧಿವೇಶನದಲ್ಲಿ ಚರ್ಚಿಸಲು ಒತ್ತಾಯ



ತುಮಕೂರು– ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಗಳಲ್ಲಿ ಒಂದಾದ ಈಗಾಗಲೇ ಬಜೆಟ್‌ನಲ್ಲಿ ಮಂಡಿಸಿರುವ ನದಿ ಜೋಡಣೆ ವಿಚಾರದ ಬಗ್ಗೆ ರಾಜ್ಯದಲ್ಲಿ ಪ್ರಸ್ತುತ ನಡೆಯುತ್ತಿರುವ ವಿಶೇಷ ವಿಧಾನಸಭಾ ಅಧಿವೇಶನದಲ್ಲಿ ಚರ್ಚೆ ನಡೆಸುವಂತೆ ಮಾಜಿ ಸಂಸದ ಜಿ.ಎಸ್. ಬಸವರಾಜು ರಾಜ್ಯ ಸರ್ಕಾರವನ್ನು ಇಂದಿಲ್ಲಿ ಒತ್ತಾಯಿಸಿದರು.

ನದಿ ಜೋಡಣೆ ವಿಚಾರವಾಗಿ ರಾಜ್ಯದಲ್ಲಿ ಜಿಲ್ಲೆ, ಜಿಲ್ಲೆಗಳ ಮಧ್ಯೆ ಈಗಾಗಲೇ ಹೋರಾಟಗಳು ಆರಂಭವಾಗಿವೆ. ಎಲ್ಲಾ ವರ್ಗದವರ ಅಭಿಪ್ರಾಯಗಳನ್ನು ಗಣನೆಗೆ ತೆಗದುಕೊಂಡು, ವಿಶೇಷ ವಿಧಾನಸಭಾ ಅಧಿವೇಶನದಲ್ಲಿ ಚರ್ಚಿಸಿ, ಪ್ರತಿಯೊಂದು ನದಿ ಪಾತ್ರದ ಇಂತಿಷ್ಟು ನೀರನ್ನು, ಇಂತಹ ಪ್ರದೇಶಗಳಿಗೆ ಅಲೋಕೇಷನ್ ಮಾಡುತ್ತೇವೆ ಎಂಬ ಒಂದು ಸಮಗ್ರ ನೀರಿನ ಬಳಕೆಯ ಕಾನೂನು ರೂಪಿಸಲು ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಕಾನೂನು ಸಚಿವ ಹೆಚ್.ಕೆ.ಪಾಟೀಲ್ ರವರನ್ನು ಅವರು ಪತ್ರಿಕಾಗೋಷ್ಠಿಯಲ್ಲಿ ಆಗ್ರಹಿಸಿದರು.

ಪ್ರಧಾನಿ ನರೇಂದ್ರ ಮೋದಿಯವರು ಈಗಾಗಲೇ ಆಯವ್ಯಯದಲ್ಲಿ ಮಂಡಿಸಿರುವ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆ ನದಿ ಜೋಡಣೆಯಡಿಯಲ್ಲಿ ಗೋದಾವರಿ–ಕಾವೇರಿ–ಬೇಡ್ತಿ–ವರದಾ (ಹೀರೇವಡ್ಡಟ್ಟಿ) ಯೋಜನೆಯನ್ನು ಜಾರಿಗೊಳಿಸಲು ನಮ್ಮ ರಾಜ್ಯ ಸರ್ಕಾರವೂ ಮುಂದಾಗಿದೆ. ಇದೊಂದು ಒಳ್ಳೆಯ ಬೆಳವಣಿಗೆ ಎಂದರು.

ಗೋದಾವರಿ–ಕಾವೇರಿ ನದಿ ಜೋಡಣೆಯಲ್ಲಿ, ತೆಲಂಗಾಣ–43.64 ಟಿ.ಎಂ.ಸಿ, ಆಂಧ್ರ ಪ್ರದೇಶ–45.27, ಟಿ.ಎಂ.ಸಿ, ತಮಿಳುನಾಡು–40.82 ಟಿ.ಎಂ.ಸಿ, ಕರ್ನಾಟಕ –15.89 ಟಿ.ಎಂ.ಸಿ ಮತ್ತು ಪುದುಚೇರಿ– 2.30 ಟಿ.ಎಂ.ಸಿ ಹಾಗೂ ಕರ್ನಾಟಕ ರಾಜ್ಯಕ್ಕೆ ಬೇಡ್ತಿ–ವರದಾ (ಹೀರೇವಡ್ಡಟ್ಟಿ) ನದಿ ಜೋಡಣೆ ಯೋಜನೆಯಲ್ಲಿ 18.50 ಟಿ.ಎಂ.ಸಿ ಅಡಿ ನೀರು ಸೇರಿದಂತೆ ಸುಮಾರು 166.42 ಟಿ.ಎಂ.ಸಿ ಅಡಿ ನೀರಿನ ಯೋಜನೆ ರೂಪಿಸುತ್ತಿದೆ. ಈ ಯೋಜನೆಯಿಂದ ಬಾಗಲಕೋಟೆ, ಧಾರವಾಡ, ಗದಗ, ಹಾವೇರಿ, ಕೊಪ್ಪಳ, ರಾಯಚೂರು ಮತ್ತು ಉತ್ತರ ಕನ್ನಡ ಜಿಲ್ಲೆಗಳಿಗೆ ಕುಡಿಯುವ ನೀರು, ಕೈಗಾರಿಕೆಗಳಿಗೆ ಮತ್ತು ಅಂತರ್ಜಲ ಅಭಿವೃದ್ಧಿಗೆ ಪೂರಕವಾಗಲಿದೆ ಎಂದರು.

ಅದೇ ರೀತಿ ಅಘನಾಶಿನಿ– ವೇದಾವತಿ (ವಾಣಿವಿಲಾಸ) ನದಿ ಜೋಡಣೆಯಿಂದ ಸುಮಾರು 35.10 ಟಿ.ಎಂ.ಸಿ ಅಡಿ ನೀರಿನ ಯೋಜನೆಯ ಅಧ್ಯಯನವೂ ನಡೆಯುತ್ತಿದೆ. ಇದರಿಂದ ಚಿತ್ರದುರ್ಗ, ತುಮಕೂರು, ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಅನುಕೂಲವಾಗಲಿದೆ ಎಂದು ಅವರು ಹೇಳಿದರು.

ಈ ಎರಡು ನದಿ ಜೋಡಣೆಯಿಂದ ಪಶ್ಚಿಮಾಭಿಮುಖವಾಗಿ ಹರಿಯುವ ನದಿ ಪಾತ್ರವೂ ಸೇರಿದಂತೆ ಗೋದಾವರಿ, ಕೃಷ್ಣಾ, ಪಾಲಾರ್, ಪೆನ್ನಾರ್, ಕಾವೇರಿ ನದಿ ಪಾತ್ರಗಳಿಗೂ ಅನುಕೂಲವಾಗಲಿದೆ ಎಂದರು.


ಕಾಳಿ ನದಿಯಿಂದ ಉತ್ತರ ಕರ್ನಾಟಕದ ಹಲವಾರು ಜಿಲ್ಲೆಗಳಿಗೆ, ಕುಮಾರಧಾರ ನದಿ ನೀರನ್ನು ಎತ್ತಿನೊಳೆ ಯೋಜನೆಗೆ, ಲಿಂಗನಮಕ್ಕಿ ನೀರನ್ನು ಬೆಂಗಳೂರಿಗೆ ಹೀಗೆ ರಾಜ್ಯಾದ್ಯಂತ ಅನೇಕ ಯೋಜನೆಗಳ ಅಧ್ಯಯನ ನಡೆಯುತ್ತಿದೆ. ತುಮಕೂರಿನ ಜಾಲಗುಣಿ ಸೇರಿದಂತೆ ಸುಮಾರು 10 ಕಡೆ ಹೊಸದಾಗಿ 'ಬಫರ್ ಡ್ಯಾಂ' ಗಳನ್ನು ನಿರ್ಮಾಣ ಮಾಡಲು ಯೋಜನೆ ಸಿದ್ಧವಾಗಬೇಕಿದೆ ಎಂದು ಅವರು ತಿಳಿಸಿದರು.

ಹೇಮಾವತಿ ಲಿಂಕ್ ಕೆನಾಲ್‌ಗೆ ನೇತ್ರಾವತಿ–ಹೇಮಾವತಿ ನದಿ ಜೋಡಣೆಯ (ಕುಮಾರಧಾರ) ನೀರನ್ನು ಬಳಸಿಕೊಳ್ಳುವುದು ಸೂಕ್ತವಾಗಿದೆ. ಹೀಗೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ 'ಊರಿಗೊಂದು ಕೆರೆ– ಆ ಕೆರೆಗೆ ನದಿ ನೀರು' ಯೋಜನೆಯಡಿಯಲ್ಲಿ ಪ್ರತಿಯೊಂದು ಪ್ರದೇಶಕ್ಕೂ ನದಿ ನೀರಿನ ಅಲೋಕೇಷನ್ ಮಾಡಬೇಕಿದೆ. ಇದಕ್ಕೂ ಸಹ ಅಧ್ಯಯನ ನಡೆಯುತ್ತಿದೆ. ಪ್ರತಿಯೊಂದು ಯೋಜನೆಗಳ ಕಡತದ ಅನುಸರಣೆಯನ್ನು ನಿರಂತರವಾಗಿ ಕುಂದರನಹಳ್ಳಿ ರಮೇಶ್ ಮಾಡುತ್ತಾ ಬಂದಿದ್ದಾರೆ ಎಂದು ವಿವರಿಸಿದರು.

ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ರಾಷ್ಟ್ರೀಯ ನದಿ ಜೋಡಣೆ (ಎನ್.ಪಿ.ಪಿ) ಯೋಜನೆಯಡಿಯಲ್ಲಿ ಈ ಎಲ್ಲಾ ಯೋಜನೆಗಳನ್ನು ಜಾರಿಗೊಳಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರ ಒಟ್ಟಿಗೆ ಶ್ರಮಿಸಬೇಕಿದೆ. ಹಲವಾರು ವರ್ಷಗಳ ನಮ್ಮ ಹೋರಾಟಕ್ಕೆ ಪ್ರತಿಫಲ ದೊರೆಯಲಿದೆ. ತುಮಕೂರು ಜಿಲ್ಲಾ ಮಟ್ಟದ ದಿಶಾ ಸಮಿತಿ ನಿರ್ಣಯ ಈ ಎಲ್ಲಾ ಯೋಜನೆಗಳಿಗೆ ಪೂರಕವಾಗಿದೆ. ನೀರಾವರಿ ತಜ್ಞ ಜಿ.ಎಸ್. ಪರಮಶಿವಯ್ಯನವರ ಅಧ್ಯಯನಕ್ಕೆ ಮುಕ್ತಿ ಸಿಗಲಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಕುಂದರನಹಳ್ಳಿ ರಮೇಶ್ ಉಪಸ್ಥಿತರಿದ್ದರು.

ಬಿಜೆಪಿ ಮುಖಂಡರ ಮನೆಗೆ ರಾಜ್ಯಾಧ್ಯಕ್ಷ ವಿಜಯೇಂದ್ರ ಭೇಟಿ ಶುಭ ಹಾರೈಕೆ



ತುಮಕೂರು: ರಾಜ್ಯ ಬಿಜೆಪಿ ರೈತ ಮೋರ್ಚಾ ಉಪಾಧ್ಯಕ್ಷ ಬ್ಯಾಟರಂಗೇಗೌಡರು ನಗರದ ಮರಳೂರು ರಿಂಗ್ ರಸ್ತೆ ಬಳಿ ನೂತನವಾಗಿ ನಿರ್ಮಿಸಿರುವ ಮನೆಗೆ ಶನಿವಾರ ಸಂಜೆ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಆಗಮಿಸಿ ಶುಭ ಕೋರಿದರು. ಈ ಸಂದರ್ಭದಲ್ಲಿ ಶಾಸಕರಾದ ಜಿ.ಬಿ.ಜ್ಯೋತಿಗಣೇಶ್, ಬಿ.ಸುರೇಶ್‌ಗೌಡ ಮತ್ತಿತರ ಮುಖಂಡರು ಹಾಜರಿದ್ದರು.

ಭಾನುವಾರ ಗೃಹ ಪ್ರವೇಶ ಕಾರ್ಯವಿದ್ದು ಮುನ್ನಾದಿನ ಆಗಮಿಸಿದ್ದ ವಿಜಯೇಂದ್ರ ಅವರು, ಬ್ಯಾಟರಂಗೇಗೌಡರು ಎಬಿವಿಪಿಯಲ್ಲಿ ಸಕ್ರಿಯವಾಗಿ ಕೆಲಸ ಮಾಡಿ ನಂತರ ಬಿಜೆಪಿ ಸೇರಿದರು. ಬಿಜೆಪಿಯ ಸಾಮಾನ್ಯ ಕಾರ್ಯಕರ್ತರಾಗಿ ನಿಷ್ಠೆ, ಪ್ರಮಾಣಿಕತೆಯಿಂದ ಪಕ್ಷ ಸಂಘಟನೆಯಲ್ಲಿ ತೊಡಗಿಕೊಂಡ ಇವರಿಗೆ ಪಕ್ಷ ಹಂತಹಂತವಾಗಿ ವಿವಿಧ ಸ್ಥಾನಗಳನ್ನು ನೀಡಿ ಗೌರವಿಸಿದೆ. ಪಕ್ಷದ ಬೆಳವಣಿಗೆಗೆ ಕೊಡುಗೆ ನೀಡಿದ್ದಾರೆ ಎಂದರು.

ಬ್ಯಾಟರಂಗೇಗೌಡರಿಗೆ ಬಿ.ಎಸ್.ಯಡಿಯೂರಪ್ಪ ಸೇರಿದಂತೆ ಅನೇಕ ನಾಯಕರ ಆಶೀರ್ವಾದವಿದೆ. ಅವರೊಂದಿಗೆ ನಿಕಟ ಸಂಪರ್ಕವಿದೆ, ಇವರ ರಾಜಕೀಯ ಜೀವನದಲ್ಲಿ ಮತ್ತಷ್ಟು ಉನ್ನತ ಸ್ಥಾನಮಾನಗಳು ದೊರೆಯಲಿ. ಬಿಜೆಪಿ ಕಾರ್ಯಕರ್ತರು ಬೆಳೆಯಬೇಕು. ನಿಷ್ಠೆಯಿಂದ ಸೇವೆ ಸಲ್ಲಿಸುವವರಿಗೆ ಪಕ್ಷದಲ್ಲಿ ಯಾವತ್ತೂ ಮಾನ್ಯತೆ ದೊರೆಯುತ್ತದೆ ಎಂದು ವಿಜಯೇಂದ್ರ ಹೇಳಿದರು.

ಬ್ಯಾಟರಂಗೇಗೌಡರು ಹಾಗೂ ಅವರ ಪತ್ನಿ ಸುಮಲತ ಅವರು ವಿಜಯೇಂದ್ರ ಹಾಗೂ ಮುಖಂಡರಿಗೆ ಉಪಹಾರ ಬಡಿಸಿ ಆತಿಥ್ಯ ನೀಡಿದರು.

ಜಿಲ್ಲಾ ಬಿಜೆಪಿ ಹಿರಿಯ ಉಪಾಧ್ಯಕ್ಷ ವೈ.ಹೆಚ್. ಹುಚ್ಚಯ್ಯ, ಪ್ರಧಾನ ಕಾರ್ಯದರ್ಶಿ ಸಂದೀಪ್‌ಗೌಡ, ಎಸ್.ಸಿ. ಮೋರ್ಚಾ ಜಿಲ್ಲಾಧ್ಯಕ್ಷ ಹೆಚ್.ಎ.ಆಂಜನಪ್ಪ, ರಾಜ್ಯ ಕಾರ್ಯದರ್ಶಿ ಓಂಕಾರ್, ಮುಖಂಡ ಪ್ರದೀಪ್‌ಕುಮಾರ್, ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ನವಚೇತನ್, ಒಬಿಸಿ ಮೋರ್ಚಾ ಅಧ್ಯಕ್ಷ ಕೆ.ವೇದಮೂರ್ತಿ ಮೊದಲಾದವರು ರಾಜ್ಯಾಧ್ಯಕ್ಷರ ಜೊತೆ ಹಾಜರಿದ್ದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA . SUB EDITOR- A.S.BANUPRAKASH CONTACT : 9901010109 GMAIL: suryapragathi2021@gmail.com.